ಸಂಪುಟ: 05 ಸಂಚಿಕೆ: 246 ಪುಟಗಳು: 08 ಗುರುವಾರ 20 ನವೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಮಾತುಗಳು ಮುಳ್ಳಿನಂತಿದ್ದರೂ ಅವು ಮತ್ತೊಬ್ಬರನ್ನು ಎಚ್ಚರಿಸುವ ಗಡಿಯಾರದ ಮುಳ್ಳುಗಳಾಗಬೇಕೆ ವಿನಃ ಮನಸ್ಸನ್ನು ಚುಚ್ಚುವ ಮುಳ್ಳಾಗಬಾರದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಭ್ರಷ್ಟಾಚಾರದಿಂದ ತುಂಬಿ ತುಳುಕುತ್ತಿರುವ ಸಿದ್ದರಾಮಯ್ಯ ಸರ್ಕಾರ : ವಿಜಯೇಂದ್ರ

• ಉದಯವಾಹಿನಿ, ಪುತ್ತೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಕೂಪ ತುಂಬಿ ತುಳುಕುತ್ತಿದ್ದು, ಆದಷ್ಟು ಬೇಗ ಸರ್ಕಾರ ತೊಲಗಲಿ ಎಂದು ಜನರು ಬಯಸುತ್ತಿರುವುದಾಗಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಿದ್ದರಾಮಯ್ಯನವರು ಮಹಾನ್ ಸತ್ಯ ಹರಿಶ್ಚಂದ್ರರಂತೆ ಮಾತನಾಡುತ್ತಾರೆ. ಕೇಂದ್ರ ಸರ್ಕಾರದ ಬಗ್ಗೆ ಮಾತನಾಡುವ ನೈತಿಕತೆಯನ್ನು ಉಳಿಸಿಕೊಂಡಿಲ್ಲ. ಮೊದಲು ಕಾಂಗ್ರೆಸ್ ಪಕ್ಷದಲ್ಲಿ ಏನು ನಡೆಯುತ್ತದೆ ಎಂಬುದನ್ನು ನೋಡಿಕೊಂಡು ಮಾತನಾಡಿ ಎಂದು ತಿರುಗೇಟು ನೀಡಿದರು. ಪ್ರತಿಯೊಂದು ಕ್ಷೇತ್ರದಲ್ಲೂ ಭ್ರಷ್ಟಚಾರ ಮುಗಿಲು ಮುಟ್ಟಿದೆ. ಲಂಚ ಕೊಡದೆ ಯಾವ ಕೆಲಸಗಳು ನಡೆಯುವುದಿಲ್ಲ. ಜನರು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದು ಇಡೀ ಶಾಪ ಹಾಕುತ್ತಿದ್ದಾರೆ. ಎಷ್ಟು ಬೇಗ ಈ ಕಾಂಗ್ರೆಸ್ ಅಧಿಕಾರದಿಂದ ತೊಲಗುತ್ತದೆಯೋ ಎಂದು ಎದುರು ನೋಡುತ್ತಿದ್ದಾರೆ. ಜನರ ವಿರೋಧಿ ಸರ್ಕಾರ ಇದ್ದರೂ ಒಂದೇ ಬಿಟ್ಟರೂ ಒಂದೇ ಎಂದು ಕಿಡಿಕಾರಿದರು.

## ಶಬರಿಮಲೆ ಯಾತ್ರೆ ಕೈಗೊಳ್ಳುವ ರಾಜ್ಯದ ಯಾತ್ರಿಕರಿಗೆ ಅಗತ್ಯ ಸಹಕಾರ ನೀಡಿ

• ಉದಯವಾಹಿನಿ, ಬೆಂಗಳೂರು

ಶಬರಿಮಲೆ ಯಾತ್ರೆ ಕೈಗೊಳ್ಳುವ ರಾಜ್ಯದ ಯಾತ್ರಿಕರಿಗೆ ಅಗತ್ಯ ಸೌಲಭ್ಯ ಹಾಗೂ ಸುರಕ್ಷತೆಯನ್ನು ನೀಡಲು ಕೋರಿ ಕೇರಳದ ಮುಖ್ಯಕಾರ್ಯದರ್ಶಿಗಳಾದ ಡಾ.ಎ.ಜಯತಿಲಕ್ ಅವರಿಗೆ ರಾಜ್ಯದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಪತ್ರ ಬರೆದಿದ್ದಾರೆ. ಕರ್ನಾಟಕ ರಾಜ್ಯದಿಂದ ಪ್ರತಿ ವರ್ಷ ಶಬರಿಮಲೆಗೆ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಾರ್ಥಿಗಳು ಶ್ರೀ ಅಯ್ಯಪ್ಪಸ್ವಾಮಿ ದರ್ಶನಕ್ಕೆ ಯಾತ್ರೆಯನ್ನು ಕೈಗೊಳ್ಳುತ್ತಿದ್ದಾರೆ. ಈ ಸಂದರ್ಭದಲ್ಲಿ, ವಿಶೇಷವಾಗಿ ನವೆಂಬರ್‌ನಿಂದ ಜನವರಿ ತಿಂಗಳಿನಲ್ಲಿ ಶಬರಿಮಲೆಗೆ ವಾರ್ಷಿಕ ತೀರ್ಥಯಾತ್ರೆ ಕೈಗೊಳ್ಳುವ ಕರ್ನಾಟಕ ರಾಜ್ಯದ ಹೆಚ್ಚಿನ ಸಂಖ್ಯೆಯ ಭಕ್ತರ ಸುಗಮ ಸೌಲಭ್ಯ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕೇರಳ ಸರ್ಕಾರದ ಅಗತ್ಯ ಸಹಕಾರವನ್ನು ನೀಡುವಂತೆ ಮನವಿ ಮಾಡಿದ್ದಾರೆ.

## ಸಕ್ಕರೆ ದರ ಹೆಚ್ಚಳ ಮಾಡಲು ಕೇಂದ್ರ ನಿರ್ಧಾರ: ಸಿದ್ದರಾಮಯ್ಯ, ಡಿಕೆಶಿ ಸ್ವಾಗತ

• ಉದಯವಾಹಿನಿ, ಬೆಂಗಳೂರು

ಸಕ್ಕರೆ ದರ ಹೆಚ್ಚಳ ಮಾಡಲು ಕೇಂದ್ರ ಸರ್ಕಾರ ನಿರ್ಧಾರವನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಸ್ವಾಗತಿಸಿದ್ದಾರೆ. ಈ ವಿಚಾರವಾಗಿ ವಿಧಾನಸೌಧದಲ್ಲಿ ಮಾತನಾಡಿದ ಸಿಎಂ, ಹಲವು ವರ್ಷಗಳಿಂದ ಸಕ್ಕರೆ ದರ ಹೆಚ್ಚಳವಾಗಿರಲಿಲ್ಲ. ಸಕ್ಕರೆ ದರ ಪ್ರತಿ ಕೆಜಿಗೆ 31 ರೂ. ಇತ್ತು. 41 ರೂಪಾಯಿಗೆ ಹೆಚ್ಚಳ ಮಾಡಲು ಮನವಿ ಮಾಡಿದ್ದೆವು. ಆದರೆ ಅವರು 40 ರೂ. ಮಾಡಲು ಚಿಂತನೆ ಮಾಡಿದ್ದಾರೆ, ನೋಡೋಣ ಎಂದರು.

ಇನ್ನು ಡಿಸಿಎಂ ಡಿಕೆಶಿ ಕೂಡ ಪ್ರತಿಕ್ರಿಯಿಸಿದ್ದು, ದರ ನಿಗದಿ ಮಾಡೋದು, ಸಕ್ಕರೆ, ಮೊಲಾಸಸ್ ದರ ಎಲ್ಲಾ ನಿರ್ಧಾರ ಮಾಡೋದು ಕೇಂದ್ರದವರು. ಬಹಳ ಸಂತೋಷ ಪ್ರಹ್ಲಾದ್ ಜೋಶಿ ಅವರಿಗೂ ಬಿಸಿಯ ಅರಿವಿದೆ. ಸಕ್ಕರೆ ಕಾರ್ಖಾನೆ ಮಾಲೀಕರು ಗಲಾಟೆ ಮಾಡಿದ್ದಾರೆ. ದರ ಹೆಚ್ಚಳ ಮಾಡಿ ಹತ್ತು ವರ್ಷವಾಗಿದೆ ಅಂತ ಗಲಾಟೆ ಮಾಡಿದ್ದಾರೆ. ಅದನ್ನ ಪ್ರಧಾನಿಗೆ ಮನವಿ ಮಾಡಿದ್ದೇವೆ. ರೈತರಿಗೂ ಒಳ್ಳೆಯದಾಗಬೇಕು, ಸಕ್ಕರೆ ಕಾರ್ಖಾನೆ ಮಾಲೀಕರಿಗೂ ಒಳ್ಳೆಯದಾಗಬೇಕು. ರೈತರು ಇದ್ರೆ ಫ್ಯಾಕ್ಟರಿ, ಫ್ಯಾಕ್ಟರಿ ಇದ್ದರೆ ರೈತರು. ಉದ್ಯಮ ಕೂಡ ನಡೆಯಬೇಕು, ತೀರ್ಮಾನ ಮಾಡೋದು ಅವರು, ಹಾಗಾಗಿ ನಾವು ಒತ್ತಡ ಹಾಕಿದ್ದೇವೆ ಎಂದು ತಿಳಿಸಿದರು.

## ದೆಹಲಿಯಲ್ಲಿ ಡಿಕೆಶಿಯಿಂದ ಚೆಕ್‌ಮೇಟ್ ಆಟ

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಿ ಮೂರುದಿನ ದಿನ ಇದ್ದರೂ ಡಿಸಿಎಂ ಡಿಕೆ ಶಿವಕುಮಾರ್ ರಾಹುಲ್ ಗಾಂಧಿ ಭೇಟಿಯಾಗದಿರುವ ಬಗ್ಗೆ ನಾನಾ ರೆಕ್ಕೆಪುಕ್ಕದ ಮಾತುಗಳು ಹರಿದಾಡುತ್ತಿದೆ. ಆದರೆ ಮೂರು ದಿನದ ಡೆಲ್ಲಿ ಟೂರ್‌ನಲ್ಲಿ ಏನಾಯ್ತು ಎಂಬ ಬಗ್ಗೆ ಪಬ್ಲಿಕ್ ಟಿವಿಗೆ ಇನ್‌ಸೈಡ್ ಮಾಹಿತಿ ಸಿಕ್ಕಿದೆ.

ಹೌದು ರಾಹುಲ್ ಭೇಟಿ ಆಗದಿದ್ದರೂ ಡಿಕೆಶಿಯಿಂದ ಚೆಕ್ ಮೇಟ್ ಆಟ ಡೆಲ್ಲಿಯಲ್ಲಿ ನಡೆದಿದೆ. ದೆಹಲಿ ಬಾರ್ಡರ್ ಮತ್ತು ನೋಯ್ಡಾ ಬಾರ್ಡರ್‌ಗೆ ಎರಡು ಸಲ ರಹಸ್ಯವಾಗಿ ತೆರಳಿದ್ದ ಡಿಕೆಶಿ, ಪವರ್ ಫುಲ್ ನಾಯಕರೊಬ್ಬರ ಹತ್ತಿರ ತ್ಯಾಗ ನೆನಪಿಸಿ ಪವರ್ ಶೇರ್ ಪ್ರಸ್ತಾಪಿಸಿದ್ದಾರೆ. ಆ ನಾಯಕರನ್ನು ಭೇಟಿಯಾದ ಬಳಿಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಅಧಿಕಾರ ಹಂಚಿಕೆಗೆ ಪಟ್ಟು ಹಿಡಿದಾಗ ಕೆಲ ದಿನಗಳ ಕಾಲ ಕಾಯುವಂತೆ ಸೂಚಿಸಿದ್ದಾರೆ.

# 7 ಕೋಟಿ ಹಣ ಲೂಟಿ

ಎಟಿಎಂ ವಾಹನ ಅಡ್ಡಗಟ್ಟಿ ದರೋಡೆ

• ಉದಯವಾಹಿನಿ, ಬೆಂಗಳೂರು

ನಗರದ ಡೈರಿ ಸರ್ಕಲ್ ಫ್ಲೈಓವರ್ ಮೇಲೆ ಎಟಿಎಂ ವಾಹನದಲ್ಲಿದ್ದ ಬರೋಬ್ಬರಿ 7.11 ಕೋಟಿ ರೂ ದೋಚಿಕೊಂಡು ಗ್ಯಾಂಗ್ ಇನೋವಾ ಕಾರಿನಲ್ಲಿ ಪರಾರಿಯಾಗಿದೆ. ಈ ಸಂಬಂಧ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸಿಎಂಎಸ್ ಕಂಪನಿ ಮ್ಯಾನೇಜರ್ ದೂರಿನ ಆಧಾರದಲ್ಲಿ ಡಕಾಯಿತಿ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ದರೋಡೆಕೋರರು ಹೇಗೆ ಬಂದು ವಾಹನವನ್ನು ಹೈಜಾಕ್ ಮಾಡಿದರು? ಎಲ್ಲಿಗೆ ಕರೆದೊಯ್ದರು? ಬಳಿಕ ಹೇಗೆ ಹಣ ದೋಚಿಕೊಂಡು ಹೋದರು ಎನ್ನುವ ಬಗ್ಗೆ ಸಿಎಂಎಸ್ ವಾಹನ ಚಾಲಕ ಬಿನೋದ್ ವಿವರಿಸಿದ್ದಾರೆ.

ಇನ್ನು ಸಿಎಂಎಸ್ ವಾಹನ ಚಾಲಕ ಬಿನೋದ್ ಘಟನೆಯ ವಿವರ ನೀಡಿದ್ದು, ನಾವು ವಾಹನದಲ್ಲಿ ನಾಲ್ಕು ಜನ ಬಂದ್ವಿ. ಅವರು ಕಾರಲ್ಲಿ ಐದಾರು ಜನ ಬಂದು ನಾವು ಆರ್ ಬಿಐ ನವರು ಎಂದು ಹೇಳಿದರು. ಸಿಎಂಎಸ್ ವಾಹನದಲ್ಲಿದ್ದ ಉಳಿದವರನ್ನ ತಮ್ಮ ಕಾರಲ್ಲಿ ಹತ್ತಿಸಿಕೊಂಡ್ರು. ನನ್ನನ್ನ ಸಿಎಂಎಸ್ ವಾಹನದಲ್ಲೇ ಕರೆದುಕೊಂಡು ಹೋಗಿ ಡೈರಿ ಸರ್ಕಲ್ ಬ್ರಿಡ್ಜ್ ಮೇಲೆ ನಿಲ್ಲಿಸಿದರು. ಬಳಿಕ ನನ್ನ ಫೋನ್ ಕಿತ್ತುಕೊಂಡಿದ್ದು, ವಾಹನದಲ್ಲಿದ್ದ ಹಣ ತಮ್ಮ ಕಾರಿಗೆ ಶಿಫ್ಟ್ ಮಾಡಿಕೊಂಡು ಹೋಗಿದ್ದಾರೆ ಎಂದು ವಿವರಿಸಿದರು.

ಬೆಂಗಳೂರಿನಲ್ಲಿ ಅತಿದೊಡ್ಡ ದರೋಡೆ ಪ್ರಕರಣ ಇದಾಗಿದೆ. ಇದರಿಂದ ಪಡೆದುಕೊಂಡಿದ್ದು, ಗೃಹ ಸಚಿವ ಪರಮೇಶ್ವರ್ ಅವರು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ. ಹೀಗಾಗಿ ಈ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದ್ದು, ದರೋಡೆಕೋರರ ಹೆಡೆಮುರಿ ಕಟ್ಟಲು ಪೊಲೀಸ್ ಇಲಾಖೆ ಇನ್ನಿಲ್ಲದ ಕಸರತ್ತು ನಡೆಸಿದ್ದು, ಡಿಸಿಪಿ ಲೋಕೇಶ್ ಜಗಲಾಸರ್ ನೇತೃತ್ವದಲ್ಲಿ ತಂಡ ರಚನೆ ಮಾಡಲಾಗಿದ್ದು, ದರೋಡೆಕೋರರ ಪತ್ತೆಗಾಗಿ ಬೆಂಗಳೂರು ನಗರದಾದ್ಯಂತ ನಾಕಾಬಂಧಿ ಹಾಕಲಾಗಿದೆ. ಗಡಿಪ್ರದೇಶದಲ್ಲಿ ಎಲ್ಲಾ ವಾಹನಗಳನ್ನು ತಪಾಸಣೆ ಮಾಡಲಾಗುತ್ತಿದೆ.


**ಶಂಕಿತರ ಫೋಟೋ ಬಿಡುಗಡೆ:** ಬೆಂಗಳೂರಿನಲ್ಲಿ ಹಾಡಹಗಲೇ ಕೋಟಿ ಕೋಟಿ ದರೋಡೆ ಪ್ರಕರಣ ಸಂಬಂಧ ಪೊಲೀಸ್ ಇಲಾಖೆ ಶಂಕಿತರ ಫೋಟೋ ಬಿಡುಗಡೆ ಮಾಡಿದೆ. ಇನ್ನೋವಾ ಕಾರಿನಲ್ಲಿ ಬಂದ ಆರೋಪಿಗಳ ಪತ್ತೆಗೆ ಖಾಕಿ ಹೈ ಅಲರ್ಟ್ ಆಗಿದ್ದು, ಪ್ರಾಥಮಿಕ ಮಾಹಿತಿ ಅನುಸಾರ ಒಟ್ಟು 6 ಮಂದಿ ಆರೋಪಿಗಳ ಫೋಟೋ ಬಿಡುಗಡೆ ಮಾಡಿದೆ. ಹಳೆ ಆರೋಪಿಗಳು ಹಾಗು ಕೆಲ ಶಂಕಿತರ ಫೋಟೋ ಬಿಡುಗಡೆ ಮಾಡಲಾಗಿದ್ದು, ನಾಕ ಬಂದಿಯಲ್ಲಿ ಈ ಫೋಟೋದಲ್ಲಿರೋ ವ್ಯಕ್ತಿಗಳ ಫೋಟೋ ಮ್ಯಾಚ್ ಮಾಡುವಂತೆ ಎಲ್ಲಾ ಪೊಲೀಸರಿಗೆ ಸೂಚನೆ ನೀಡಲಾಗಿದೆ.

**ಬೆಂಗಳೂರು ಫುಲ್ ನಾಕಾಬಂಧಿ:** ಬೆಚ್ಚಿಬೀಳಿಸುವ ದರೋಡೆ ಹಿನ್ನೆಲೆಯಲ್ಲಿ ಬೆಂಗಳೂರಿನಾದ್ಯಂತ ನಾಕಾಬಂಧಿ ಹಾಕಿ ಪರಿಶೀಲನೆ ನಡೆಸಲು ಸೂಚನೆ ನೀಡಲಾಗಿದೆ. ಇಬ್ಬರು ಹೆಚ್ಚುವರಿ ಪೊಲೀಸ್ ಮತ್ತು ಡಿಸಿಪಿಯಿಂದ ತನಿಖೆ ನಡೆಯುತ್ತಿದ್ದು, ಅವ್ರ ಬಳಿ ಇದ್ದ ಗನ್ ಯಾಕೆ ಬಳಕೆ ಮಾಡಿಲ್ಲ ಎನ್ನುವ ಪ್ರಶ್ನೆ ಇದೆ. ಈ ಎಲ್ಲಾ ಆಯಾಮದಲ್ಲೂ ತನಿಖೆ ಮಾಡಲಾಗುತ್ತಿದೆ. ಸದ್ಯ ಚಾಲಕ, ಇಬ್ಬರು ಗನ್ ಮೆನ್‌ಗಳು ಹಾಗೂ ಓರ್ವ ಹಣ ಡೆಪಾಸಿಟ್ ಮಾಡುವ ಸಿಬ್ಬಂದಿಯ ವಿಚಾರಣೆ ನಡೆಯುತ್ತಿದೆ. ಆದಷ್ಟು ಬೇಗ ಆರೋಪಿಗಳನ್ನು ಬಂದಿಸ್ತೇವೆ ಎಂದು ನಗರ ಪೊಲೀಸ್ ಆಯುಕ್ತ ಸಿಂಮತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

**ಹಲವು ದಿನಗಳಿಂದಲೇ ಸ್ಕೆಚ್:** ಹಲವು ದಿನಗಳಿಂದಲೇ ದರೋಡೆಗೆ ಸಂಚು ರೂಪಿಸಿದ್ದ ದರೋಡೆಕೋರರ ಗ್ಯಾಂಗ್ ಬುಧವಾರ ಬೆಳಗ್ಗೆ ಎಟಿಎಂಗಳಿಗೆ ಹಣ ಸಾಗಿಸುವ ವ್ಯಾನ್ ಹಿಂಬಾಲಿಸಿದೆ. ಆ ಬಳಿಕ ವಾಹನವನ್ನು ಅಡ್ಡಗಟ್ಟಿ ಸಿಬ್ಬಂದಿಯನ್ನ ಬೆದರಿಸಿ ವಾಹನದ ಹಿಂಬದಿಯ ಡೋರ್ ತೆರೆದು ಎಟಿಎಂಗಳಿಗೆ ತುಂಬಲು ಇದ್ದ ಕೋಟ್ಯಂತರ ರೂಪಾಯಿ ಹಣ ತುಂಬಿಕೊಂಡು ಇನ್ನೋವಾ ಕಾರಿನಲ್ಲಿ ಎಸ್ಕೇಪ್ ಆಗಿದ್ದಾರೆ. ಪ್ರಾಥಮಿಕ ತನಿಖೆ ನಡೆಸಲಾಗುತ್ತಿದ್ದು, ಮೇಲ್ನೋಟಕ್ಕೆ ಸಿಎಂಎಸ್, ಚಾಲಕ, ಸಿಬ್ಬಂದಿ ಮೇಲೆ ಅನುಮಾನ ಮೂಡಿದೆ. ಈ ಹಿನ್ನೆಲೆ ಪೊಲೀಸರು ಚಾಲಕನ ಪೂರ್ವಾಪರ ವಿಚಾರಣೆ ನಡೆಸುತ್ತಿದ್ದಾರೆ.

ಜತೆಗೆ ಸಿದ್ದಾಪುರ ಹಾಗೂ ಆಡುಗೋಡಿ ಪೊಲೀಸರಿಂದಲೂ ಸ್ಥಳ ಪರಿಶೀಲನೆ ನಡೆಯುತ್ತಿದ್ದು, ಸಿಸಿಟಿವಿ ದೃಶ್ಯಾವಳಿಗಳ ಪರಿಶೀಲನೆಯೂ ನಡೆಸಲಾಗುತ್ತಿದೆ.






### ನಕಲಿ ನಂಬರ್ ಪ್ಲೇಟ್

ದರೋಡೆಕೋರರು ತಂದಿದ್ದ ಇನ್ನೋವಾ ಕಾರಿಗೆ ನಕಲಿ ನಂಬರ್ ಪ್ಲೇಟ್ ಅಳವಡಿಸಿರುವುದು ಬೆಳಕಿಗೆ ಬಂದಿದೆ. ಕೆಎ 03 ಎನ್ ಸಿ 8052 ಸಂಖ್ಯೆಯ ಇನ್ನೋವಾ ಕಾರಿನಲ್ಲಿ ಬಂದು ಕೃತ್ಯ ಎಸಗಿದ್ದಾರೆ. ಆದ್ರೆ, ಕೆಎ 03 ಎನ್ ಸಿ 8052 ಸಂಖ್ಯೆಯ ಮೂಲ ಕಾರು ಮಾರುತಿ ಸುಜುಕಿ ಎಂದು ತಿಳಿದುಬಂದಿದೆ. ಇದರಿಂದ ಈ ಗ್ಯಾಂಗ್ ಪಕ್ಕಾ ಪ್ಲ್ಯಾನ್ ಮಾಡಿಯೇ ಈ ಕೃತ್ಯ ಎಸಗಿದೆ ಎಂಬ ಅನುಮಾನ ವ್ಯಕ್ತವಾಗಿದೆ.ಹಣ ದರೋಡೆ ಮಾಡಿ ಗ್ಯಾಂಗ್, ಹೊಸಕೋಟೆ ಕಡೆ ತೆರಳಿರುವ ಮಾಹಿತಿ ಸಿಕ್ಕಿದೆ. ಡೇರಿ ಸರ್ಕಲ್, ಕೋರಮಂಗಲ, ಸೋನಿ ವರ್ಲ್ಡ್ ಜಂಕ್ಷನ್, ದೊಮ್ಮಲೂರು, ಮಾರತ್ತಹಳ್ಳಿ, ವೈಟ್ ಫಿಲ್ಡ್ ಮಾರ್ಗವಾಗಿ ಹೊಸಕೋಟೆ ಕಡೆ ತೆರಳಿರುವ ಮಾಹಿತಿ ಲಭ್ಯವಾಗಿದ್ದು ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಬೆಂಗಳೂರು ನಗರ ಪೊಲೀಸರು ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಸಿದ್ದಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ದಕ್ಷಿಣ ಡಿಸಿಪಿ ಮತ್ತು ಪಶ್ಚಿಮ ವಿಭಾಗ ಜಂಟಿ ಪೊಲೀಸ್ ಆಯುಕ್ತರು ಸ್ಥಳದಲ್ಲಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಸದ್ಯದ ಮಾಹಿತಿ ಪ್ರಕಾರ, ಅಂದಾಜು 7 ಕೋಟಿ ಹಣ ದರೋಡೆಯಾಗಿದೆ. ಈ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ.

1 ಬೆಂಗಳೂರಿನ ಡೈರಿ ಸರ್ಕಲ್ ಫ್ಲೈ ಓವರ್ ಮೇಲೆ ಬುಧವಾರ ಮಧ್ಯಾಹ್ನ ಎಟಿಎಂ ವಾಹನ ದರೋಡೆ.

2 ವಾಹನವನ್ನು ಅಡ್ಡಗಟ್ಟಿ , 7 ಕೋಟಿ 11 ಲಕ್ಷ ರೂಪಾಯಿ ದರೋಡೆ.

3 ವ್ಯಾನ್ ಹಿಂಬಾಲಿಸಿ, ಸಿಬ್ಬಂದಿಗೆ ಬೆದರಿಸಿ ಹಣವನ್ನು ದೋಚಿಕೊಂಡು ಪರಾರಿಯಾಗಿದೆ.

### ಆರ್ ಬಿಐ ಹೆಸರಲ್ಲಿ ಹೈಜಾಕ್

ಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯ ಅಶೋಕ್ ಪಿಲ್ಲರ್ ಬಳಿ ಅಡ್ಡ ಗಟ್ಟಿದ್ದಾರೆ. ಬಳಿಕ ದರೋಡಕೋರರು,ನಾವು ಆರ್ ಬಿ ಐ ನವರು ಎಂದು ಹೇಳಿಕೊಂಡಿದ್ದಾರೆ. ಅಲ್ಲದೇ ನೀವು ನಿಯಮ ಉಲ್ಲಂಘಿಸಿದ್ದೀರಿ. ಪೊಲೀಸ್ ಠಾಣೆಗೆ ಬನ್ನಿ ಎಂದು ಹಣ ಇದ್ದ ಸಿಎಂಎಸ್ ವಾಹನ ಹೈಜಾಕ್ ಮಾಡಿ ತಂದಿದ್ದಾರೆ. ನಂತರ ಸುದ್ದುಗುಂಟೆ ಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯ ಡೇರಿ ಸರ್ಕಲ್ ಫ್ಲೈಓವರ್‌ನಲ್ಲಿ ವಾಹನ ನಿಲ್ಲಿಸಿ ಹಣವನ್ನು ತಮ್ಮ ಇನ್ನೋವಾ ಕಾರಿಗೆ ತುಂಬಿಕೊಂಡು ಪರಾರಿಯಾಗಿದ್ದಾರೆ.ಎಟಿಎಂ ವಾಹನದಲ್ಲಿ ಒಟ್ಟು ನಾಲ್ಕು ಜನ ಸಿಎಂಎಸ್ ಸಿಬ್ಬಂದಿ ಇದ್ದರು. ಓರ್ವ ಡ್ರೈವರ್,ಇಬ್ಬರು ಗನ್ ಮ್ಯಾನ್ ಹಾಗೂ ಮತ್ತೊಬ್ಬ ಹಣ ಹಾಕುವ ಸಿಬ್ಬಂದಿ ಇದ್ದು, ಸದ್ಯ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಇವರ ವಿಚಾರಣೆ ನಡೆಯುತ್ತಿದೆ. ಇನ್ನು ಫಿಂಗರ್ ಪ್ರಿಂಟ್ ತಂಡ ಹಾಗೂ ಶ್ವಾನ ದಳ ಕೂಡ ಆಗಮಿಸಿ ತನಿಖೆ ಕೈಗೊಂಡಿದೆ.

### ಆರೋಪಿಗಳ ಸುಳಿವು ಸಿಕ್ಕಿದೆ : ಗೃಹ ಸಚಿವ

ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಳಿವು ಸಿಕ್ಕಿದೆ. ಆರೋಪಿಗಳನ್ನು ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಟಿಎಂಗಳಿಗೆ ಹಣ ಹಾಕುವ ಮಾಹಿತಿಯನ್ನು ಯಾರೋ ಆರೋಪಿಗಳಿಗೆ ನೀಡಿದ್ದಾರೆ. ಇದಕ್ಕೆ ಕಾರಣಕರ್ತರು ಯಾರು? ಎಟಿಎಂಗೆ ಹಣ ತಂದು ಹಾಕುವ ಮಾಹಿತಿ ಕೊಟ್ಟಿದ್ದು ಯಾರು? ಹಣ ಹಾಕುವವರಲ್ಲಿ ಯಾರಾದರೂ ಇದ್ದರೋ ಎಂಬುದರ ಬಗ್ಗೆ ಲೀಡ್ ಸಿಕ್ಕಿದೆ. ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿದ್ದೇವೆ ಎಂದರು. ಬೆಂಗಳೂರಿನಲ್ಲಿ ಹಾಡಹಗಲಲ್ಲೇ ಇಂತಹ ಘಟನೆ ನಡೆದಿಲ್ಲ. ಏಳು ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ಹಣ ರಾಬರಿಯಾಗಿದೆ. ವಾಹನ ಸಂಖ್ಯೆ ಎಲ್ಲಾ ಮಾಹಿತಿ ಸಿಕ್ಕಿದೆ. ಕೃತ್ಯ ಎಸಗಿದವರು ಇಲ್ಲಿಯವರಾ? ಹೊರ ರಾಜ್ಯದವರಾ? ಎಂಬ ಬಗ್ಗೆ ತನಿಖೆ ನಡೆಯುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವು ಮಾಹಿತಿ ಸಿಕ್ಕಿದ್ದು, ತನಿಖೆಗೆ ಅಡ್ಡಿಯಾಗುವುದರಿಂದ ಹಂಚಿಕೊಳ್ಳುವುದಿಲ್ಲ ಎಂದು ತಿಳಿಸಿದ್ದಾರೆ.

## ಸಿಎಂ ಬದಲಾವಣೆ ವಿಚಾರವಾಗಿ ಹೈಕಮಾಂಡ್ ಶೀಘ್ರ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು: ಮುನಿಯಪ್ಪ

• ಉದಯವಾಹಿನಿ, ನವದೆಹಲಿ

ಮುಖ್ಯಮಂತ್ರಿ ಬದಲಾವಣೆ, ಸಚಿವ ಸಂಪುಟ ಪುನರಾಚನೆ ವಿಚಾರದಲ್ಲಿ ಹೈಕಮಾಂಡ್ ಶೀಘ್ರವೇ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸಚಿವ ಕೆ.ಹೆಚ್ ಮುನಿಯಪ್ಪ ಆಗ್ರಹಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭೇಟಿ ಬಳಿಕ ದೆಹಲಿಯಲ್ಲಿ ಮಾತನಾಡಿದ ಅವರು, ಸಿಎಂ ಬದಲಾವಣೆ ಸೇರಿ ಎಲ್ಲಾ ಗೊಂದಲಕ್ಕೂ ಮಲ್ಲಿಕಾರ್ಜುನ ಖರ್ಗೆ ಅವರೇ ಉತ್ತರ ಕೊಡಬೇಕು. ಸಿಎಂ ಆಯ್ಕೆ ಸಮಯದಲ್ಲಿ ಏನೇ ಮಾತು ಕೊಟ್ಟಿದ್ದರೂ ಕೂಡ ಬೇಗನೇ ತೀರ್ಮಾನ ಮಾಡಿ ಎಂದು ಹೇಳಿದ್ದೇನೆ. ಪ್ರತಿದಿನ ಸಿಎಂ ಬದಲಾವಣೆ ಅಂತಾ ಬರಬಾರದು, ಸಿದ್ದರಾಮಯ್ಯ ಕೂಡಾ ಹೈಕಮಾಂಡ್ ಮಾತಿಗೆ ಬದ್ಧರಾಗಿದ್ದಾರೆ ಎಂದು ಹೇಳಿದ್ದಾರೆ. ಡಿಸಿಎಂ ಕೂಡಾ ಪಕ್ಷದ ಶಿಸ್ತಿನ ಸಿಪಾಯಿ ಎಂದು ಹೇಳಿದ್ದಾರೆ. ಈ ವಿಷಯದಲ್ಲಿ ಹೈಕಮಾಂಡ್ ಒಂದು ತೀರ್ಮಾನ ಮಾಡಬೇಕು,



ಇಂತಹ ಗೊಂದಲದಿಂದ ಅಭಿವೃದ್ಧಿ ಕೆಲಸಗಳಿಗೆ ಅಡ್ಡಿ ಉಂಟಾಗಲಿದೆ ಎಂದಿದ್ದಾರೆ. ದಲಿತ ಸಿಎಂ ವಿಚಾರದ ಬಗ್ಗೆ ಮಲ್ಲಿಕಾರ್ಜುನ ಖರ್ಗೆ ಮುಂದೆ ಪ್ರಸ್ತಾಪ ಮಾಡಿಲ್ಲ, ಇದನ್ನು ಹೈಕಮಾಂಡ್ ತೀರ್ಮಾನಕ್ಕೆ ಬಿಟ್ಟಿದ್ದೇವೆ. ದಲಿತ ಸಿಎಂ ಬೇಕು ಎನ್ನುವ ಬೇಡಿಕೆ ಖರ್ಗೆ ಕೆಪಿಸಿಸಿ ಅಧ್ಯಕ್ಷರಾದ ಕಾಲದಿಂದಲೂ ಇದೆ.

ಖರ್ಗೆ ಅವರು ಸಿಎಂ ಆಗಬೇಕಿತ್ತು ಎಂಬ ಸಂದರ್ಭ ಬರಲಿಲ್ಲ, ನಮ್ಮದು ಡಿಮ್ಯಾಂಡ್, ಆದರೆ ಹೈಕಮಾಂಡ್ ತೀರ್ಮಾನ ಅಂತ್ಯ. ಈ ನಡುವೆ ಒಳಮೀಸಲಾತಿ ಜಾರಿ ಮಾಡಿ, ಎಲ್ಲಾ ಜಾತಿಗೂ ನ್ಯಾಯ ನೀಡುವ ಮೂಲಕ ದಲಿತರಿಗೆ ನ್ಯಾಯ ನೀಡಿದೆ ಎಂದು ತಿಳಿಸಿದ್ದಾರೆ.

ರೂಪಾ ಶಶಿಧರ್‌ಗೆ ಸಚಿವ ಸ್ಥಾನ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿ, ನಾನು ಕಾಂಗ್ರೆಸ್‌ನಲ್ಲಿ ಹಿರಿಯ ನಾಯಕ, ನಾನು ಬೇರೆ ಜಿಲ್ಲೆಯಿಂದ ಆಯ್ಕೆಯಾಗಿದ್ದೇನೆ, ರೂಪಾ ಅವರು ಬೇರೆ ಜಿಲ್ಲೆ ಪ್ರತಿನಿಧಿಸುತ್ತಿದ್ದಾರೆ. ಅವರನ್ನು ನನ್ನೊಟ್ಟಿಗೆ ಹೋಲಿಕೆ ಮಾಡಬೇಡಿ, ನನಗೆ ಸಾಕಷ್ಟು ಅನುಭವ ಇದೆ. ನನ್ನ ಹಾಗೇ ಹಲವು ಹಿರಿಯ ನಾಯಕರಿದ್ದಾರೆ. ಎಲ್ಲರ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಹೇಳಿದ್ದಾರೆ.

ಸಚಿವ ಸಂಪುಟ ಪುನರ್ ರಚನೆ ವಿಚಾರ ಮುನ್ನೆಲೆಗೆ ಬಂದ ಬೆನ್ನಲ್ಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಚಿವ ಆಕಾಂಕ್ಷಿಗಳು ಭೇಟಿಯಾಗುತ್ತಿದ್ದಾರೆ. ಬುಧವಾರ ದೆಹಲಿಯಲ್ಲಿ ಶಾಸಕರಾದ ಬಿ.ಆರ್ ಪಾಟೀಲ್, ಕೋನರೆಡ್ಡಿ ಭೇಟಿಯಾಗಿ ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ.

# ರಾಜ್ಯ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದ ಮೀಸಲಾತಿ ಪ್ರಮಾಣ ಕುರಿತ ಸುಪ್ರೀಂ ತೀರ್ಪು

## ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇತರೆ ಹಿಂದುಳಿದ ವರ್ಗ(ಒಬಿಸಿ)ಗಳಿಗೆ ಮೀಸಲಾತಿ ಪ್ರಮಾಣವನ್ನು ಶೇ.50ಕ್ಕಿಂತ ಹೆಚ್ಚಿಸಬಾರದು

• ಉದಯವಾಹಿನಿ, ಬೆಂಗಳೂರು

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇತರೆ ಹಿಂದುಳಿದ ವರ್ಗ(ಒಬಿಸಿ)ಗಳಿಗೆ ಮೀಸಲಾತಿ ಪ್ರಮಾಣವನ್ನು ಶೇ.50ಕ್ಕಿಂತ ಹೆಚ್ಚಿಸಬಾರದೆಂದು ಸುಪ್ರೀಂಕೋರ್ಟ್ ನೀಡಿರುವ ತೀರ್ಪು ರಾಜ್ಯ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಏಕೆಂದರೆ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಜಯಪ್ರಕಾಶ್ ಹೆಗಡೆ, ಜಯಪ್ರಕಾಶ್ ಹೆಗಡೆ ಅವರು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಬಿಸಿಗಳಿಗೆ ನೀಡಲಾಗುತ್ತಿರುವ ಹೆಚ್ಚಳ ಮಾಡಬೇಕೆಂದು ಶಿಫಾರಸ್ಸು ಮಾಡಿದ್ದರು.

ಇದರ ಪ್ರಕಾರ ಜನವರಿ ಇಲ್ಲವೇ ಫೆಬ್ರವರಿ ತಿಂಗಳಿನಲ್ಲಿ ನಡೆಸಲು ಉದ್ದೇಶಿಸಿದ್ದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಹಾಗೂ ಉಳಿದ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಒಬಿಸಿ ಮೀಸಲಾತಿ ಪ್ರಮಾಣವನ್ನು ಹೆಚ್ಚಳ ಮಾಡಲು ತೀರ್ಮಾನಿಸಲಾಗಿತ್ತು.

ಇದಕ್ಕಾಗಿ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಭಕ್ತವತ್ಸಲ ಅವರ ನೇತೃತ್ವದಲ್ಲಿ ಸಮಿತಿ ರಚಿಸಿ, ವರದಿ ನೀಡುವಂತೆ ಸರ್ಕಾರ ಸೂಚನೆ ಕೊಟ್ಟಿತ್ತು. ಆದರೆ ಸುಪ್ರೀಂಕೋರ್ಟ್ ಮಹಾರಾಷ್ಟ್ರ ಸ್ಥಳೀಯ ಸಂಸ್ಥೆಗಳ ಚುನಾವಣೆ, ಮೀಸಲಾತಿಗೆ ಸಂಬಂಧಿಸಿದಂತೆ ನೀಡಿರುವ ತೀರ್ಪು ಎಲ್ಲಾ ರಾಜ್ಯಗಳಿಗೂ ಅನ್ವಯವಾಗುತ್ತದೆ ಎಂದು ವ್ಯಾಖ್ಯಾನಿಸಲಾಗಿದೆ. ನೀವು ಶೇ.50ಕ್ಕಿಂತ ಹೆಚ್ಚು ಮೀಸಲಾತಿಯನ್ನು ಹೆಚ್ಚಳ ಮಾಡಿದರೆ ಯಾವುದೇ ಕಾರಣಕ್ಕೂ ನಾವು ಒಪ್ಪುವುದಿಲ್ಲ. ಅಲ್ಲದೆ ಚುನಾವಣೆಯನ್ನೇ ನಡೆಸಲು ಅವಕಾಶ ಕೊಡುವುದಿಲ್ಲ ಎಂದು ಸುಪ್ರೀಂಕೋರ್ಟ್ ಮಹಾರಾಷ್ಟ್ರಕ್ಕೆ ನೀಡಿರುವ ತೀರ್ಪು ದೇಶದ ಎಲ್ಲಾ ರಾಜ್ಯಗಳಿಗೂ ಎಚ್ಚರಿಕೆ ಗಂಟೆ ಎಂದು ಹೇಳಲಾಗುತ್ತಿದೆ.

ನಾವು ನೀಡಿರುವ ತೀರ್ಪಿನ ಪ್ರಕಾರ ನೀವು ಮೀಸಲಾತಿಯನ್ನು ಶೇ.50ಕ್ಕೆ ಹೆಚ್ಚಿಸದೆ ಚುನಾವಣೆ ನಡೆಸಲು ನಮ ಅಭ್ಯಂತರವಿಲ್ಲ. ಒಂದು ವೇಳೆ ಹಿಂದೆ ನೀಡಿರುವ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಮೀಸಲಾತಿ ಪ್ರಮಾಣವನ್ನು ಹೆಚ್ಚಳ ಮಾಡುತ್ತೇವೆ ಎಂದರೆ ಚುನಾವಣೆ ನಡೆಸಲು ಅವಕಾಶ ಕೊಡುವುದಿಲ್ಲ. ಪುನಃ ನ್ಯಾಯಾಲಯಕ್ಕೆ ಬರಬಾರದು ಎಂದು ಮಹಾರಾಷ್ಟ್ರ ಪರವಾದ ಮಂಡಿಸಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರಿಗೆ ಸುಪ್ರೀಂಕೋರ್ಟ್ ಸ್ಪಷ್ಟ ಮಾತುಗಳಲ್ಲಿ ಹೇಳಿವೆ.

ಇದು ಕೇವಲ ಮಹಾರಾಷ್ಟ್ರಕ್ಕೆ ಮಾತ್ರವಲ್ಲದೆ ದೇಶದ ಎಲ್ಲಾ ರಾಜ್ಯಗಳಿಗೂ ಈ ತೀರ್ಪು ಅನ್ವಯವಾಗಲಿದೆ ಎಂದು ಕಾನೂನು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಜಯಪ್ರಕಾಶ್ ಹೆಗ್ಗಡೆ ನೇತೃತ್ವದ ಸಮಿತಿಯು ಪರಿಶಿಷ್ಟ ಜಾತಿ/ಪಂಗಡಗಳ ಮೀಸಲಾತಿ ಯಥಾಸ್ಥಿತಿ, ಪರಿಶಿಷ್ಟ ಜಾತಿ 17.15%, ಪರಿಶಿಷ್ಟ ಪಂಗಡಕ್ಕೆ 6.95% ಮೀಸಲಾತಿ, ಹಿಂದುಳಿದ ವರ್ಗ 1ಎ ಮೀಸಲಾತಿ 6% ಹೆಚ್ಚಿಸಬೇಕು, ಹಿಂದುಳಿದ ವರ್ಗ 1ಬಿ ಸೃಷ್ಟಿ, 12% ಮೀಸಲಾತಿ ಕೊಡಬೇಕು, ಹಿಂದುಳಿದ ವರ್ಗ 2ಎ 10% ಮೀಸಲಾತಿ ಕೊಡಬೇಕು, ಮುಸ್ಲಿಂ ಮೀಸಲಾತಿಯನ್ನು 4%ನಿಂದ 8%ಕ್ಕೆ ಏರಿಸಬೇಕು, ಲಿಂಗಾಯತ, ಉಪಜಾತಿಗಳ 3ಬಿ ಮೀಸಲಾತಿ 5%ನಿಂದ 8%ಕ್ಕೆ ಏರಿಸಬೇಕು, ಒಕ್ಕಲಿಗ, ಉಪಜಾತಿಗಳ 3ಎ ಮೀಸಲಾತಿ 4%ನಿಂದ 7%ಕ್ಕೆ ಹೆಚ್ಚಿಸಬೇಕೆಂದು ಶಿಫಾರಸ್ಸು ಮಾಡಿತ್ತು.

**ನ್ಯಾಯಾಲಯ ಹೇಳಿದ್ದೇನು?:** ಡಿಸೆಂಬರ್‌ನಲ್ಲಿ ಚುನಾವಣೆ ನಡೆಯಲಿರುವ ಸ್ಥಳೀಯ ಸಂಸ್ಥೆಗಳಲ್ಲಿ ಇತರ ಹಿಂದುಳಿದ ವರ್ಗಗಳಿಗೆ (ಒಬಿಸಿ) ಸೀಟುಗಳನ್ನು ಕಾಯ್ದಿರಿಸುವಾಗ ಮಹಾರಾಷ್ಟ್ರ ಸರ್ಕಾರವು ನ್ಯಾಯಾಲಯದ ಅಧಿಕಾರವನ್ನು ಪ್ರಶ್ನಿಸಬಾರದು ಮತ್ತು 50% ಮಿತಿಯನ್ನು ಮೀರಬಾರದು ಎಂದು ಸುಪ್ರೀಂ ಕೋರ್ಟ್ ಹೇಳಿತ್ತು.

ಕೆ.ಕೃಷ್ಣಮೂರ್ತಿ ವರ್ಸಸ್ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಸಂವಿಧಾನ ಪೀಠವು ನಿಗದಿಪಡಿಸಿದ ಶೇ. 50ರ ಮಿತಿಯೊಳಗೆ ಒಬಿಸಿ ಕೋಟಾ ಉಳಿದರೆ ಮಾತ್ರ ಚುನಾವಣೆಗಳನ್ನು ಮುಂದುವರಿಸಲು ನ್ಯಾಯಾಲಯ ಅನುಮತಿ ನೀಡುತ್ತದೆ ಎಂದು ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ಜೋಯಲ್ಯ ಬಾಗ್ಚಿ ಅವರ ಪೀಠ ತಿಳಿಸಿತ್ತು.

ಮಹಾರಾಷ್ಟ್ರದ ಪರವಾಗಿ ವಾದ ಮಂಡಿಸಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಚುನಾವಣಾ ಪ್ರಕ್ರಿಯೆಗೆ ಅವಕಾಶ ನೀಡುವಂತೆ ನ್ಯಾಯಾಲಯವನ್ನು ಒತ್ತಾಯಿಸಿದ್ದರು. ಸಾಂವಿಧಾನಿಕ ಪೀಠದ ತೀರ್ಪು ತುಂಬಾ ಸ್ಪಷ್ಟವಾಗಿದೆ. ಸ್ಥಳೀಯ ಸಂಸ್ಥೆಗಳಲ್ಲಿ ಲಂಬ ಮೀಸಲಾತಿ 50% ಮೀರಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಬಾಗ್ಚಿ ಟೀಕಿಸಿದರು.

### ಏನಿದು ಪ್ರಕರಣ..?

ಮಹಾರಾಷ್ಟ್ರ ರಾಜ್ಯದಲ್ಲಿ ದೀರ್ಘಕಾಲದಿಂದ ವಿಳಂಬವಾಗಿದ್ದ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಡಿಸೆಂಬರ್ 2025ರೊಳಗೆ ನಡೆಯಲಿವೆ. ಆದಾಗ್ಯೂ, ಚುನಾವಣೆಯ ಸಂಬಂಧ ಒಬಿಸಿ ಮೀಸಲಾತಿಯ ವಿವಾದ ಮುಂದುವರೆದಿದ್ದು, 2022 ರಲ್ಲಿ, ನ್ಯಾಯಮೂರ್ತಿ ಜೆ.ಕೆ. ಬಂಥಿಯಾ ಆಯೋಗವು ಒಬಿಸಿಗಳಿಗೆ 27% ಮೀಸಲಾತಿಯನ್ನು ಶಿಫಾರಸು ಮಾಡಿತ್ತು.



ಎಲ್ಲಾ ರಾಜ್ಯಗಳಿಗೂ ಅನ್ವಯ

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,486/Gram(24ct) ₹11,445/Gram(22ct) | ಬೆಳ್ಳಿ: ₹168.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ದೇವದೇವಿ - ಸ್ವರ್ಗನರಕ

ನಿರಾಕಾರ ಏಕದೇವೋಪಾಸನೆಯ ಜೊತೆಗೆ ಸಾಕಾರ ಬಹುದೇವೋಪಾಸನೆ ಹಿಂದುಧರ್ಮದ ವಿಶೇಷತೆ. ತ್ರಿಮೂರ್ತಿ ಇಂದ್ರಾದಿ ದೇವತೆ ಸ್ವರ್ಗನರಕಗಳ ಪ್ರಸ್ತಾವ ವೇದದಲ್ಲಿದೆ. ದೇವತೆ ಸ್ವರ್ಗ ನರಕ ನಿಜವೇ ಇಲ್ಲ, ಕಾಲ್ಪನಿಕ. ಆದಾಗ್ಯೂ ಕಲ್ಪನೆಯ ಹಿಂದಿನ ಆಶಯ ಶ್ಲಾಘನೀಯ. ಅದು ಹತ್ತಾರು ಸಾವಿರ ವರ್ಷಗಳ ಹಿಂದಿನ ಕಾಲ. ವಿಜ್ಞಾನ ಅಪ್ರಬುದ್ಧ. ಸರ್ಕಾರ ಕಾನೂನು ಕೋರ್ಟ್ ಪೋಲೀಸ್ ಇರಲಿಲ್ಲ.

ಅಂಕುಶಕ್ಕಾಗಿ ಸಮಾಜದ ಸುವ್ಯವಸ್ಥೆಗಾಗಿ ಶಾಪಾನುಗ್ರಹಸಮರ್ಥ ನಾಲ್ಕು ಕೈ ಐದು ತಲೆ ಮುಂತಾದವುಳ್ಳ ವಿಶಿಷ್ಟ ದೇವತೆಗಳ ಸ್ವರ್ಗನರಕಗಳ ಪರಿಕಲ್ಪನೆ. ವಾಸ್ತವಕ್ಕಿಂತ ಹೆಚ್ಚು ಹೇಳುವುದು ಉತ್ಪ್ರೇಕ್ಷೆ ನಿಂದೆ ಇಂದಿಗೂ ರೂಢಿ. ಉಪ್ಪು ಖಾರ ವಗ್ಗರಣೆಯಂತೆ. ಕೆಲಸ ಸಾಧಿಸಲು ಉಪಯುಕ್ತ. ಶಾಸ್ತ್ರಕಾರರು ಇದನ್ನು ಅರ್ಥವಾದ ಎಂದಿದ್ದಾರೆ. ಟೈರ್ ಅತಿ ಗಟ್ಟಿ ಎನ್ನಲು ಜಾಹೀರಾತಿನಲ್ಲಿ ವಾಹನವನ್ನು ಬೆಟ್ಟಕ್ಕೆ ಗುದ್ದಿಸಿದಂತೆ ದೇವತೆ ಸ್ವರ್ಗ ನರಕ! ಇಂದಿಗೂ ಸರ್ಕಾರ ಕಾನೂನು ಜನ ಯಾರಿಂದಲೂ ಸಮಾಧಾನವಾಗದಿದ್ದಾಗ ನಂಬಿದ ದೇವರ ಮೇಲೆ ಭಾರ ಹಾಕಿ ಸಮಾಧಾನಪಡುವರು. ಮೂವತ್ಮೂರು ಕೋಟಿ ಅಧಿಕ ಸಂಖ್ಯಾ ಸೂಚಕ ಹೊರತು ನಿಖರವಾಚಕವಲ್ಲ. ಅಲ್ಪ ಉಪಕಾರ ಮಾಡಿದವನನ್ನೂ ದೇವರೆನ್ನುವ ಹಿಂದು ಬದುಕಲನುವಾದ ಕಲ್ಲು ಮಣ್ಣು ನೀರು ಗಾಳಿ ಗಿಡ ಸೂರ್ಯ ಪಕ್ಷಿ ಎಲ್ಲವನ್ನೂ ದೇವರೆನ್ನುವುದು ಆತನ ಕೃತಜ್ಞತೆಯ ವಿಶಾಲ ಹೃದಯ!

## ತ್ಯಾಗರಾಜನಗರ ರಾಯರ ಮಠದಲ್ಲಿ ಲಕ್ಷ ದೀಪೋತ್ಸವ-ಕೃತಿಕೋತ್ಸವ

• ಉದಯವಾಹಿನಿ, ಬೆಂಗಳೂರು

ತ್ಯಾಗರಾಜನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪ್ರತಿಷ್ಠಾಪಿಸಿರುವ




ಶ್ರೀ ರುದ್ರದೇವರಿಗೆ ಕಾರ್ತೀಕ ಮಾಸದ ಪ್ರಯುಕ್ತ ನವೆಂಬರ್ 20, ಗುರುವಾರ ಸಂಜೆ 6-00 ಗಂಟೆಗೆ ಹೃಷಿಕೇಶ ಭಜನಾ ಮಂಡಳಿಯ ಸದಸ್ಯರಿಂದ ಭಜನಾಮೃತ, ಪ್ರಾಕಾರೋತ್ಸವ, ಪಲ್ಲಕ್ಕಿ ಉತ್ಸವ, ಲಕ್ಷದೀಪೋತ್ಸವ, ಕೃತಿಕೋತ್ಸವ, ಮಹಾ ಮಂಗಳಾರತಿ ಮತ್ತು ಪ್ರಸಾದ ವಿನಿಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಅಡ್ಡರಸ್ತೆ, ತ್ಯಾಗರಾಜನಗರ, ಬೆಂಗಳೂರು-560028. ಮೊಬೈಲ್:9900215389.

## ಆಸ್ತಿ ತೆರಿಗೆ ಬಾಕಿ: ಮಂತ್ರಿ ಮಾಲ್‌ಗೆ ಮತ್ತೆ ಬೀಗ ಜಡಿದ ಅಧಿಕಾರಿಗಳು

• ಉದಯವಾಹಿನಿ, ಬೆಂಗಳೂರು

ಆಸ್ತಿ ತೆರಿಗೆ ಪಾವತಿಸದ ಹಿನ್ನೆಲೆ ನಗರದ ಪ್ರತಿಷ್ಠಿತ ಮಾಲ್‌ಗಳಲ್ಲಿ ಒಂದಾದ ಮಂತ್ರಿಮಾಲ್‌ಗೆ ಮತ್ತೆ ಬೀಗ ಬಿದ್ದಿದೆ. ಈ ಹಿಂದೆಯೂ ಕೋಟ್ಯಂತರ ತೆರಿಗೆ ಪಾವತಿಸದ ಹಿನ್ನೆಲೆಯಲ್ಲಿ ಮಾಲ್ ಅನ್ನು ಸೀಜ್ ಮಾಡಲಾಗಿತ್ತು.

ಈ ಬಾರಿಯೂ ತೆರಿಗೆ ಬಾಕಿ ಉಳಿಸಿಕೊಂಡಿರುವ ಹಿನ್ನೆಲೆಯಲ್ಲಿ ಬೀಗ ಜಡಿದಿದ್ದಾರೆ. ಬರೋಬ್ಬರಿ 30,81,45,600 ರೂ. ತೆರಿಗೆ ಬಾಕಿ ಉಳಿಸಿಕೊಂಡ ಕಾರಣ ಅಧಿಕಾರಿಗಳು ಮಾಲ್ ಅನ್ನು ಸೀಜ್ ಮಾಡಿ ನೋಟಿಸ್ ಕಳುಹಿಸಿದ್ದಾರೆಂದು ತಿಳಿದುಬಂದಿದೆ. ಮಾಲ್‌ಗೆ ಬೀಗ ಹಾಕಿದ್ದರಿಂದ ಮಾಲ್ ಸಿಬ್ಬಂದಿ ಕಂಗಾಲಾಗಿದ್ದಾರೆ. ಇತ್ತ ಮಾರ್ಷಲ್ಸ್ ಮತ್ತು ಪೊಲೀಸರು ಮಾಲ್ ಬಳಿಯೇ ಬೀಡುಬಿಟ್ಟಿದ್ದಾರೆ.

## ಸಿಎಂ ಸಿದ್ದರಾಮಯ್ಯ ಪತ್ನಿ ಆರೋಗ್ಯದಲ್ಲಿ ಚೇತರಿಕೆ: ವಾರ್ಡ್‌ಗೆ ಶಿಫ್ಟ್

• ಉದಯವಾಹಿನಿ, ಬೆಂಗಳೂರು

ಆರೋಗ್ಯಗದಲ್ಲಿ ಚೇತರಿಕೆ ಕಂಡು ಬಂದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಬಿ.ಎಂ. ಪಾರ್ವತಿ ಅವರನ್ನು ಶೇಷಾದ್ರಿಪುರಂನ ಅಪೋಲೋ ಆಸ್ಪತ್ರೆಯ ತೀವ್ರ ನಿಗಾ ಘಟಕದಿಂದ (ಐಸಿಯು) ಸಾಮಾನ್ಯ ವಾರ್ಡ್‌ಗೆ ಸ್ಥಳಾಂತರಿಸಲಾಗಿದೆ. ತೀವ್ರ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಪಾರ್ವತಿ ಅವರನ್ನು ಸೋಮವಾರ ಆಸ್ಪತ್ರೆಗೆ ದಾಖಲಿಸಲಾಯಿತು.



ಶ್ವಾಸಕೋಶದ ಎಡಿಮಾ ಇರುವುದು ಪತ್ತೆಯಾದ ನಂತರ ಐಸಿಯುಗೆ ವರ್ಗಾಯಿಸಲಾಯಿತು. ಹಿರಿಯ ಸಲಹೆಗಾರ ಡಾ. ಬಿ.ಸಿ. ಶ್ರೀನಿವಾಸ್ ಅವರ ತಂಡ ಪಾರ್ವತಿ ಅವರಿಗೆ ಚಿಕಿತ್ಸೆ ನೀಡಿದ್ದರು. ಅವರ ಆರೋಗ್ಯದಲ್ಲಿ ಸುಧಾರಣೆ ಕಂಡು ಬಂದ ಹಿನ್ನೆಲೆಯಲ್ಲಿ ವಾರ್ಡ್‌ಗೆ ಶಿಫ್ಟ್ ಮಾಡಲಾಗಿದ್ದು, ವೈದ್ಯಕೀಯ ನಿಗಾದಲ್ಲಿ ಇರಿಸಲಾಗಿದೆ. ಪಾರ್ವತಿ ಅವರ ಆರೋಗ್ಯ ಸ್ಥಿತಿ ಈಗ ಸ್ಥಿರವಾಗಿದೆ. ಅರಸಿಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಮುಖ್ಯಮಂತ್ರಿ, ಅವರ ಮಗ ಯತೀಂದ್ರ ಅವರನ್ನು ಭೇಟಿ ಮಾಡಿ ಆರೋಗ್ಯ ಸ್ಥಿರವಾಗಿದೆ ಎಂದು ಹೇಳಿದ್ದಾರೆ.

## ಮೆಡಿಕಲ್ ಕಾಲೇಜುಗಳಲ್ಲಿ ಹಗಲು ದರೋಡೆ, ಟೆಂಡರ್‌ನಲ್ಲಿ ಭಾರೀ ಗೋಲ್ ಮಾಲ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮೆಡಿಕಲ್ ಕಾಲೇಜುಗಳಲ್ಲಿ ಮನಸ್ಸಿಗೆ ಬಂದ ಬೆಲೆಗೆ ಮೆಡಿಸನ್ ಮಾರಾಟ ಮಾಡಲಾಗುತ್ತಿದ್ದು, ಹಗಲು ದರೋಡೆ ನಡೆಯುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಆರೋಪಿಸಿದರು. ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾರುಕಟ್ಟೆ ಬೆಲೆಗಿಂತ 10 ಪಟ್ಟು ಹೆಚ್ಚಿನ ಬೆಲೆಯಲ್ಲಿ ಮೆಡಿಸಿನ್ ಮಾರಾಟ ಮಾಡಲಾಗುತ್ತಿದ್ದು, ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಯಬೇಕು ಎಂದು ಆಗ್ರಹಿಸಿದ್ದಾರೆ.

ಚಿಕ್ಕಮಗಳೂರು ಮೆಡಿಕಲ್ ಕಾಲೇಜಿನ ಜೀವರಕ್ಷಕ ಔಷಧಿಗಳ ಖರೀದಿಗೆ ಟೆಂಡರ್ ಕರೆಯುವಾಗ ಗೋಲ್‌ಮಾಲ್ ನಡೆಸಿದ್ದಾರೆ ಎಂದು ಬಿಜೆಪಿ ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಆರೋಪಿಸಿದ್ದಾರೆ. ಕೆಲವು ದಿನಗಳ ಹಿಂದೆ ಚಿಕ್ಕಮಗಳೂರು ಮೆಡಿಕಲ್ ಕಾಲೇಜಿಗೆ ಭೇಟಿ ಕೊಟ್ಟಿದ್ದೆ. ಬಳಿಕ ಕೆಲವು ಭಯಾನಕ ಸತ್ಯಗಳನ್ನು ನನ್ನ ಗಮನಕ್ಕೆ ತಂದರು. ವೈದ್ಯಕೀಯ ಕಾಲೇಜಿನಲ್ಲಿ ಜೀವರಕ್ಷಕ ಔಷಧಿಗಳ ಖರೀದಿಗೆ ಟೆಂಡರ್ ಕರೆಯುವಾಗ ಗೋಲ್‌ಮಾಲ್ ನಡೆಸಿದ್ದಾರೆ. ಬಿಡ್ ನಿಗದಿಪಡಿಸಬೇಕಾದರೆ, ಒಂದು ಔಷಧಿಗೆ ಕಡಿಮೆ ದರ ಇದ್ದವರ ಬದಲಾಗಿ ಎಲ್ಲಾ ಔಷಧಿಗಳ ಬಿಡ್ ಕಡಿಮೆ ದರ ನಮೂದಿಸಿರಬೇಕು ಎಂದು ಸೂಚಿಸಿದ್ದಾರೆ. ಆಗ ಆವಿಷ್ಕಾರ್ ಸರ್ಜಿಕಲ್, ಕೆಇಎಂಪಿಎಸ್, ನೂತನ್ ಫಾರ್ಮ, ರಾಜಲಕ್ಷ್ಮಿ ಏಜೆನ್ಸಿ, ಸಿವಾ ಫಾರ್ಮ, ಎಸ್ಸೆಲ್ ಆರ್ ಏಜೆನ್ಸಿಸ್ ಸೇರಿ ಆರು ಕಂಪೆನಿಗಳು ಮಾತ್ರ ಅರ್ಹತೆ ಪಡೆದವು. ಅರ್ಹತಾ ಮಾನದಂಡದಿಂದ ಉಳಿದೆಲ್ಲ ಕಂಪೆನಿಗಳನ್ನು ಹೊರಗಿಟ್ಟರು. ಕೇವಲ ಆರನ್ನು ಅರ್ಹವಾಗಿ ಮಾಡಿದ್ದಾರೆ ಎಂದು ದೂರಿದರು. ಆವಿಷ್ಕಾರ್ ಗೆ 126, ಕೆಇಎಂಪಿಎಸ್ ಗೆ 130, ನೂತನ್- 26, ರಾಜಲಕ್ಷ್ಮಿ ಏಜೆನ್ಸಿಗೆ 53, ಸಿವಾ- 26, ಎಸ್‌ಎಸ್‌ಎಲ್‌ಸಿ 54- ಹೀಗೆ ಮಂಜೂರಾಗಿದೆ. ಈ ಆಸ್ಪತ್ರೆ ಆರೋಗ್ಯ ಇಲಾಖೆ ಅಡಿಯಲ್ಲಿತ್ತು. ಈಗ ವೈದ್ಯಕೀಯ ಶಿಕ್ಷಣದಡಿ ಬರುತ್ತದೆ. ಈಗ ಸರಬರಾಜು ಆಗುತ್ತಿರುವ ದರ ಮತ್ತು ಹೊಸ ದರದಲ್ಲಿ ಅಗಾಧವಾದ ವ್ಯತ್ಯಾಸವಿದೆ ಎಂದು ಟೀಕಿಸಿದರು. ಹಣ ಲೂಟಿ ಹೊಡೆಯಲಾಗಿದೆ. ಹಣ ಲೂಟಿಗೆ ಆಳುವವರ ಸಹಕಾರ ಇರುವುದು ಸ್ಪಷ್ಟ ಎಂದು ಆರೋಪಿಸಿದರು.

# ಮೇಕೆದಾಟು ಯೋಜನೆ ಬಗ್ಗೆ ಹೊಸದಾಗಿ ಡಿಪಿಆರ್: ಡಿಕೆಶಿ ಪ್ರಕಟಣೆ

### ವಿಧಾನಸೌಧದಲ್ಲಿ ಅಧಿಕಾರಿಗಳ ಸಭೆ, ಕಾವೇರಿ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ ಮಹತ್ವದ ಸಭೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ತಮಿಳುನಾಡು ಸಲ್ಲಿಸಿದ್ದ ಆಕ್ಷೇಪಣೆಗಳನ್ನು ಸುಪ್ರೀಂ ಕೋರ್ಟ್ ತಳ್ಳಿಹಾಕಿದ್ದು, ಅದರಿಂದ ಕರ್ನಾಟಕ ಸರ್ಕಾರಕ್ಕೆ ಯೋಜನೆಯನ್ನು ಕಾರ್ಯಗತಗೊಳಿಸಲು ಅವಕಾಶ ಸಿಕ್ಕಂತಾಗಿದೆ. ಆ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರಕ್ಕೆ ಹೊಸದಾಗಿ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ಸಲ್ಲಿಸುವುದಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

**ಸರ್ಕಾರದ ಮಹತ್ವದ ಯೋಜನೆಗೆ ಮತ್ತೆ ಚಾಲನೆ**

ವಿಧಾನಸೌಧದಲ್ಲಿ ಅಧಿಕಾರಿಗಳ ಸಭೆ ಹಾಗೂ ಕಾವೇರಿ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ ಮಹತ್ವದ ಸಭೆ ನಡೆಸಿದ ಬಳಿಕ ಅವರು ಈ ಮಾಹಿತಿ ನೀಡಿದ್ದಾರೆ. ಈ ಹಿಂದೆ ಸಲ್ಲಿಸಿದ್ದ ಡಿಪಿಆರ್ ತಿರಸ್ಕರಿಸಲ್ಪಟ್ಟಿದ್ದರಿಂದ, ಅದರ ಲೋಪದೋಷಗಳನ್ನು ಸರಿಪಡಿಸಿ, ಯೋಜನೆಯ ಸಂಪೂರ್ಣ ವಿವರಗಳೊಂದಿಗೆ, ಅರಣ್ಯ ಪ್ರದೇಶದ ಮುಳುಗಡೆಯ ಮಾಹಿತಿಯನ್ನೂ ಒಳಗೊಂಡ ಹೊಸ ಡಿಪಿಆರ್ ಅನ್ನು ಕಾನೂನು ಪ್ರಕಾರ ಸಲ್ಲಿಸಲಾಗುವುದು ಎಂದು ಅವರು ವಿವರಿಸಿದ್ದಾರೆ. ನ. 19ರಂದು ಕಾವೇರಿ ನೀರಾವರಿ ನಿಗಮದ ಮಂಡಳಿ ಸಭೆ ನಡೆಸಿದ ನಂತರ ಮಾತನಾಡಿದ ಡಿಕೆ ಶಿವಕುಮಾರ್, ಮೇಕೆದಾಟು ಕುರಿತಂತೆ ತಮಿಳುನಾಡಿನ ಅರ್ಜಿಯನ್ನು ತಿರಸ್ಕರಿಸಿ ತಾನು ಮಧ್ಯೆ ಪ್ರವೇಶಿಸುವುದಿಲ್ಲ ಎಂದಿರುವ ಸುಪ್ರೀಂ ಕೋರ್ಟ್ ತೀರ್ಪಿನ ನಂತರ ಯೋಜನೆಯನ್ನು ಹೇಗೆ ಮುಂದುವರಿಸಬೇಕು ಎಂಬ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದರು. ಈ ಹಿಂದೆ ಸಲ್ಲಿಸಿದ್ದ ಡಿಪಿಆರ್ ಅನ್ನು ತಿರಸ್ಕರಿಸಿದ್ದರಿಂದ, ಅದರಲ್ಲಿದ್ದ ತಪ್ಪುಗಳನ್ನು ಸರಿಪಡಿಸಿ ಹೊಸದಾಗಿ ಡಿಪಿಆರ್ ಸಲ್ಲಿಸಬೇಕಿದೆ. ಕಾನೂನು ಪ್ರಕಾರ ಯಾರ ಮುಂದೆ ಮಂಡಿಸಬೇಕೋ ಅವರ ಮುಂದೆ ಮಂಡಿಸುತ್ತೇವೆ ಎಂದು ಡಿಸಿಎಂ ಸ್ಪಷ್ಟಪಡಿಸಿದ್ದಾರೆ. ಈ ಹೊಸ ಡಿಪಿಆರ್‌ನಲ್ಲಿ ಯೋಜನೆಯ ಸಂಪೂರ್ಣ ವಿವರಗಳು, ಎಷ್ಟು ಅರಣ್ಯ ಪ್ರದೇಶ ಮುಳುಗಡೆಯಾಗಲಿದೆ ಎಂಬ ಮಾಹಿತಿಯೂ ಇರಲಿದೆ ಎಂದು ಅವರು ತಿಳಿಸಿದರು.



**ಕಾಂಗ್ರೆಸ್ ಪಾದಯಾತ್ರೆಯಿಂದಲೇ ಮೇಕೆದಾಟು ಯೋಜನೆಗೆ ಹಿನ್ನಡೆ**

ಮೇಕೆದಾಟು ಯೋಜನೆಗೆ ಕೇಂದ್ರದ ಅನುಮತಿ ಪಡೆಯುವಾಗ ರಾಜಕೀಯ ಮಾಡದೆ, ರಾಜ್ಯದ ಹಿತಾಸಕ್ತಿ ಕಾಪಾಡಲು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಕರ್ನಾಟಕ ಕಾಂಗ್ರೆಸ್ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಕಾಂಗ್ರೆಸ್‌ನ ಪಾದಯಾತ್ರೆಯಿಂದಲೇ ಯೋಜನೆ ಆರಂಭ ತಡವಾಗಿದೆ ಎಂದು ದೂಷಿಸಿದ ಅವರು, ಸರ್ಕಾರದ ಗಮನವನ್ನು ಜನರ ಸಮಸ್ಯೆಗಳತ್ತ ಸೆಳೆದರು.

**ಕೇಂದ್ರಕ್ಕೆ ನಿಯೋಗ ಸದ್ಯಕ್ಕಿಲ್ಲ:** ಈ ಬಾರಿಯ ಹೊಸ ಡಿಪಿಆರ್ ಸಿದ್ಧಪಡಿಸಿದ ನಂತರ ಕೇಂದ್ರಕ್ಕೆ ನಿಯೋಗವೊಂದನ್ನು ಕೊಂಡೊಯ್ದು ಅಲ್ಲಿ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಿ ಯೋಜನೆಗೆ ಸಹಕಾರ ಕೋರತ್ತದೆಯೇ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಡಿಕೆ ಶಿವಕುಮಾರ್, ಸದ್ಯಕ್ಕೆ ಅದರ ಅವಶ್ಯಕತೆಯಿಲ್ಲ. ಮುಂದೆ ಅವಶ್ಯಕತೆ ಬಂದಾಗ ಹೋಗುತ್ತೇವೆ ಎಂದರು.

**ಮೇಕೆದಾಟು ಯೋಜನೆಗೆ ಒತ್ತಾಯಿಸಿ ಕಾಂಗ್ರೆಸ್ ಹಮ್ಮಿಕೊಂಡಿರುವ ಪಾದಯಾತ್ರೆಯು ರಾಜ್ಯ ರಾಜಕಾರಣದಲ್ಲಿ ಭಾರಿ ಸಂಚಲನ ಸೃಷ್ಟಿಸುತ್ತಿದೆ. ಪಾದಯಾತ್ರೆ ಘೋಷಣೆಯ ಬೆನ್ನಲ್ಲೇ, ರಾಜ್ಯ ಸರ್ಕಾರವು ಕೋವಿಡ್ ನಿಯಂತ್ರಣಕ್ಕಾಗಿ ವೀಕೆಂಡ್ ಕರ್ಫ್ಯೂ ಹಾಗೂ ಕಠಿಣ ನಿರ್ಬಂಧಗಳನ್ನು ಜಾರಿಗೆ ತಂದಿದ್ದು, ಇದಕ್ಕೆ ಕಾಂಗ್ರೆಸ್ ನಾಯಕರು ರಾಜಕೀಯ ಬಣ್ಣ ಬಳಿದು ಸರ್ಕಾರದ ಕ್ರಮವನ್ನು ಟೀಕಿಸಿದ್ದಾರೆ.**


## ಪ್ರತ್ಯೇಕ ಕೇಡರ್ ರಚಿಸಿ, 15 ವನ್ಯಜೀವಿ ವೈದ್ಯರ ನೇಮಕ

• ಉದಯವಾಹಿನಿ, ಬೆಂಗಳೂರು

ರಾಜ್ಯದ 9 ಮೃಗಾಲಯಗಳ ಖಾಲಿ ಪಶು ವೈದ್ಯರ ಹುದ್ದೆಗಳನ್ನು ಆದಷ್ಟು ಬೇಗ ಭರ್ತಿ ಮಾಡುವಂತೆ ಅರಣ್ಯ ಇಲಾಖೆ ಮತ್ತು ಎಲ್ಲಾ 9 ಮೃಗಾಲಯಗಳ ಮುಖ್ಯಸ್ಥರಿಗೆ ನಿರ್ದೇಶನ ನೀಡಲಾಗುವುದು ಎಂದು ಸಚಿವ ಈಶ್ವರ್ ಬಿ ಖಂಡ್ರೆ ಅವರು ಮಂಗಳವಾರ ಹೇಳಿದ್ದಾರೆ.

ಬೆಳಗಾವಿ ಕಿರು ಮೃಗಾಲಯದಲ್ಲಿ 31 ಕೃಷ್ಣಮೃಗಗಳು ಅಸಹಜವಾಗಿ ಮೃತ ಪಟ್ಟಿರುವ ಹಿನ್ನೆಲೆಯಲ್ಲಿ ಒಂಬತ್ತೂ ಮೃಗಾಲಯಗಳ ಮುಖ್ಯಸ್ಥರೊಂದಿಗೆ ವಿಡಿಯೋ ಸಂವಾದ ಮೂಲಕ ಸಚಿವರು ಸಭೆ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತ್ಯೇಕ ಕೇಡರ್ ರಚಿಸಲು ಮತ್ತು 15 ವನ್ಯಜೀವಿ ಪಶು ವೈದ್ಯರನ್ನು ನೇಮಿಸಲು ತಾತ್ವಿಕವಾಗಿ ಅನುಮೋದನೆ ನೀಡಿದ್ದಾರೆಂದು ಹೇಳಿದರು.



ಎಲ್ಲಾ ಮೃಗಾಲಯ ಪಾಲಕರು ಮತ್ತು ಸಿಬ್ಬಂದಿಗೆ ಅವರ ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಮತ್ತು ಅಗತ್ಯವಿರುವ ಎಲ್ಲಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ನಿರ್ದೇಶನಗಳನ್ನು ನೀಡಲಾಗಿದೆ. ಪ್ರಾಣಿಗಳ ಆರೋಗ್ಯದ ಬಗ್ಗೆ ನಿಕಟ ನಿಗಾ ಇಡಲು ಮತ್ತು ಯಾವುದೇ ಕಳವಳವನ್ನು ವರದಿ ಮಾಡಲು ಅವರಿಗೆ ನಿರ್ದೇಶಿಸಲಾಗಿದೆ ಎಂದು ತಿಳಿಸಿದರು.

ಕಿತ್ತೂರು ರಾಣಿ ಚೆನ್ನಮ್ಮ ಮೃಗಾಲಯದಲ್ಲಿ ಕೃಷ್ಣಮೃಗಗಳ ಸಾವು ಪ್ರಕರಣಕ್ಕೆ ರೋಗ - ಬ್ಯಾಕ್ಟೀರಿಯಾ ಸೋಂಕು ಕಾರಣವಾಗಿದೆ ಎಂದು ವೈದ್ಯರು ದೃಢಪಡಿಸಿದ್ದು, ಈ ಸೋಂಕು ಗಾಳಿಯಿಂದ, ನೀರಿನಿಂದ, ಆಹಾರದಿಂದ ಅಥವಾ ಪ್ರಾಣಿ ಪಾಲಕರಿಂದ ಪಸರಿಸಿದೆಯೇ ಎಂಬ ಬಗ್ಗೆ ಅಧ್ಯಯನ ನಡೆಸುವಂತೆ ಮತ್ತು ಬೇರೆ ಪ್ರಾಣಿಗಳಿಗೆ ಪಸರಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಮೃಗಾಲಯಗಳಲ್ಲಿ ವನ್ಯಜೀವಿಗಳ ನಿರ್ವಹಣೆಯ ಕುರಿತಂತೆ, ಇಂತಹ ಸೋಂಕು ಕಾಣಿಸಿಕೊಂಡಾಗ ಹೇಗೆ ಕ್ರಮ ಕೈಗೊಳ್ಳಬೇಕು, ಮತ್ತು ಏನೆಲ್ಲಾ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಪ್ರಮಾಣಿತ ಮಾನದಂಡ ಎಸ್‌ಒಪಿ ರೂಪಿಸಿ, ಕಡ್ಡಾಯವಾಗಿ ಅನುಪಾಲನೆ ಮಾಡುವಂತೆ ನಿರ್ದೇಶಿಸಿದರು.

**ಇತ್ತ ಬನ್ನೇರುಘಟ್ಟದಿಂದ ನೆರೆ ರಾಜ್ಯಕ್ಕೆ ವನ್ಯಜೀವಿ ಸಾಗಿಸುವಾಗ ಅರವಳಿಕೆ ನೀಡಿದ್ದ ಕಾಡೆಮ್ಮೆ ಮೃತಪಟ್ಟಿರುವುದರಲ್ಲಿ ಅಧಿಕಾರಿ, ಸಿಬ್ಬಂದಿಯ ನಿರ್ಲಕ್ಷ್ಯ ಇದೆ ಎಂದು ದೂರುಗಳು ಬಂದಿದ್ದು, ಈ ಬಗ್ಗೆ ತಂಡ ರಚಿಸಿ ವರದಿ ನೀಡುವಂತೆ ಹಾಗೂ ವನ್ಯಜೀವಿಗಳ ನಿರ್ವಹಣೆಯ ಬಗ್ಗೆ ಸಿಬ್ಬಂದಿಗೆ ಅಗತ್ಯ ತರಬೇತಿ ನೀಡುವಂತೆಯೂ ಸಚಿವರು ಸಭೆಯಲ್ಲಿ ಸೂಚನೆ ನೀಡಿದರು.**

## ಕೆಪಿಎಸ್‌ಅಡಿಯಲ್ಲಿ ಸರ್ಕಾರಿ ಶಾಲೆಗಳ ವಿಲೀನ: ತಜ್ಞರ ವಿರೋಧ, ಸಾರ್ವಜನಿಕರಿಂದ ವ್ಯಾಪಕ ಟೀಕೆ

• ಉದಯವಾಹಿನಿ, ಬೆಂಗಳೂರು

ಅಸ್ತಿತ್ವದಲ್ಲಿರುವ ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್ಸ್ (ಕೆಪಿಎಸ್) ಆಗಿ ಮೇಲ್ದರ್ಜೆಗೇರಿಸಬೇಕು ಎಂಬ ಶಿಕ್ಷಣ ಇಲಾಖೆಯ ಘೋಷಣೆಯು ಶಿಕ್ಷಣ ತಜ್ಞರಿಂದ ಟೀಕೆಗೆ ಗುರಿಯಾಗಿದೆ.



ಇಲಾಖೆಯು ಶಾಲೆಯ 5 ಕಿ.ಮೀ. ವ್ಯಾಪ್ತಿಯೊಳಗಿನ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಕಳೆದ ತಿಂಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ 800 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಿಸಿದರು. ವಿದ್ಯಾರ್ಥಿಗಳು ಒಂದೇ ಶಾಲೆಯಲ್ಲಿ ಉಳಿಯುವಂತೆ ಎಲ್‌ಕೆಜಿಯಿಂದ 12 ನೇ ತರಗತಿಗೆ ಒಂದೇ ಸೂರಿನಡಿ ಪ್ರಾರಂಭಿಸುವುದಾಗಿ ಅವರು ಪ್ರಸ್ತಾಪಿಸಿದರು. ಶಿಕ್ಷಣವು ದ್ವಿಭಾಷಾ ಮಾಧ್ಯಮದಲ್ಲಿರುತ್ತದೆ ಮತ್ತು ವಿದ್ಯಾರ್ಥಿಗಳು ಇಂಗ್ಲಿಷ್ ಅಥವಾ ಕನ್ನಡವನ್ನು ಬೋಧನಾ ಮಾಧ್ಯಮವಾಗಿ ಆಯ್ಕೆ ಮಾಡಬಹುದು ಎಂದು ಹೇಳಲಾಗಿತ್ತು.

ಬೆಂಗಳೂರು ದಕ್ಷಿಣದ ಚನ್ನಪಟ್ಟಣ ತಾಲ್ಲೂಕಿನಲ್ಲಿರುವ ನಾಲ್ಕು ಉನ್ನತ ಪ್ರಾಥಮಿಕ ಶಾಲೆಗಳು ಮೂರು ಪ್ರಾಥಮಿಕ ಶಾಲೆಗಳನ್ನು ಹೊಂಗನೂರು ಕರ್ನಾಟಕ ಪಬ್ಲಿಕ್ ಸ್ಕೂಲ್ ಎಂದು ವಿಲೀನಗೊಳಿಸಲಾಗುವುದು ಮತ್ತು ಶಿಕ್ಷಕರನ್ನು ನಿಯೋಜಿಸಲಾಗುವುದು ಎಂದು ದೊರೆತ ದಾಖಲೆಗಳಿಂದ ತಿಳಿದು ಬಂದಿದೆ. ಏಳು ಶಾಲೆಗಳ ವಿಲೀನದ ಕುರಿತು ಪೋಷಕರು ಎಸ್‌ಡಿಎಂಸಿ ಸದಸ್ಯರೊಂದಿಗೆ ಸಭೆ ನಡೆಸಲಾಗುವುದು. ಏಳು ಶಾಲೆಗಳನ್ನು ಮುಚ್ಚಿದ ನಂತರ ವಿದ್ಯಾರ್ಥಿಗಳಿಗೆ ವರ್ಗಾವಣೆ ಪ್ರಮಾಣಪತ್ರಗಳನ್ನು ನೀಡಲಾಗುವುದು. ಅದೇ ರೀತಿ, ಹೊಸ ಕೆಪಿಎಸ್‌ನ 5 ಕಿಮೀ ವ್ಯಾಪ್ತಿಯಲ್ಲಿರುವ 19 ಸರ್ಕಾರಿ ಶಾಲೆಗಳನ್ನು ಮುಚ್ಚಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಂದು ಶಾಲೆಯಾಗಿ ವಿಲೀನಗೊಳಿಸಲಾಗುವುದು.

## ಕ್ರಿಪ್ಟೋ ಕರೆನ್ಸಿ ಟ್ರೇಡಿಂಗ್ ಹೆಸರಲ್ಲಿ ವ್ಯಕ್ತಿಗೆ ಲಕ್ಷ ಲಕ್ಷ ಹಣ ಪಂಗನಾಮ

• ಉದಯವಾಹಿನಿ, ಬೆಂಗಳೂರು

ಕ್ರಿಪ್ಟೋ ಕರೆನ್ಸಿ ಟ್ರೇಡಿಂಗ್ ಹೆಸರಲ್ಲಿ ಸೈಬರ್ ವಂಚಕರು ಬೆಂಗಳೂರಿನ ವ್ಯಕ್ತಿಗೆ ಬರೋಬ್ಬರಿ 42 ಲಕ್ಷ ಪಂಗನಾಮ ಹಾಕಿದ್ದಾರೆ. ಅಧಿಕ ಲಾಭ ಸಿಗುವ ಆಸೆಯಿಂದ ಅಪರಿಚಿತ ವ್ಯಕ್ತಿ ನೀಡಿದ ಆಮಿಷ ನಂಬಿ ಹಣ ಹೂಡಿಕೆ ಮಾಡಿದ್ದಾತ ಈಗ ಇರುವ ಹಣವನ್ನೂ ಕಳೆದುಕೊಂಡಿದ್ದಾನೆ. ತಾನು ವಂಚನೆಗೆ ಒಳಗಾಗಿರುವ ಬಗ್ಗೆ ಅರಿವಾಗುತ್ತಿದ್ದಂತೆ ಆತ ದೂರು ನೀಡಿದ್ದು, ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

45 ವರ್ಷದ ಬೆಂಗಳೂರಿನ ವ್ಯಕ್ತಿಗೆ ಕ್ರಿಪ್ಟೋ ಕರೆನ್ಸಿ ಟ್ರೇಡಿಂಗ್ ಬಗ್ಗೆ ಮಾಹಿತಿ ಇನ್‌ಸ್ಟಾಗ್ರಾಂ ಮೂಲಕ ದೊರೆತಿದ್ದು, ಅಶುತೋಷ್ ಶರ್ಮಾ ಎಂಬ ವ್ಯಕ್ತಿ ಕ್ರಿಪ್ಟೋ ಹೂಡಿಕೆಗಳ ಕುರಿತು ಮಾರ್ಗದರ್ಶನ ನೀಡುತ್ತಿದ್ದ. ಬಳಿಕ ಇದಕ್ಕೆ ಸಂಬಂಧಿಸಿದ ಟೆಲಿಗ್ರಾಂ ಗುಂಪನ್ನೂ ವ್ಯಕ್ತಿಗೆ ಪರಿಚಯಿಸಿದ್ದ. ಹೂಡಿಕೆ ಹಣಕ್ಕೆ ಶೇ. 15ರಷ್ಟು ಲಾಭ ನೀಡುವ ಭರವಸೆ ಸಿಕ್ಕ ಹಿನ್ನಲೆ ಸ್ವಲ್ಪ ಹಣವನ್ನ ಸಂತ್ರಸ್ತ ಹೂಡಿಕೆ ಮಾಡಿದ್ದ. ಈ ವೇಳೆ ಲಾಭ ತನ್ನ ಖಾತೆಗೆ ಜಮಾ ಆಗುತ್ತಿದ್ದ ಕಾರಣ ಆತ ಸೈಬರ್ ಖದೀಮರನ್ನು ಮತ್ತಷ್ಟು ನಂಬಿದ್ದ. ಇನ್ನೂ ಹಣ ಹೂಡಿಕೆ ಮಾಡಿದ್ದ ಎನ್ನಲಾಗಿದೆ.

ವ್ಯಕ್ತಿಯ ಟ್ರೇಡಿಂಗ್ ಖಾತೆಯಲ್ಲಿ 138,687.22 USDT ಬ್ಯಾಲೆನ್ಸ್ ತೋರಿಸುತ್ತಿತ್ತು. ಆದರೆ ಆ ಹಣವನ್ನು ಪಡೆಯಲು ಪ್ರಯತ್ನಿಸಿದಾಗ, ಆಪರೇಟರ್‌ಗಳು ಬ್ಯಾಂಕ್ ವಿವರಗಳು ತಪ್ಪಾಗಿದೆ ಎಂದು ಹೇಳಿದ್ದರು. ಅಲ್ಲದೆ ಅದನ್ನು ಸರಿಪಡಿಸಲು 4 ಲಕ್ಷ ಪಾವತಿಸಬೇಕೆಂದು ತಿಳಿಸಿದ್ದರು. ಬಳಿಕ ತಡ ಪಾವತಿ ದಂಡ, ಕರೆನ್ಸಿ ಪರಿವರ್ತನೆ ಶುಲ್ಕ ಮತ್ತು RBI ತೆರಿಗೆ ಹೆಸರಿನಲ್ಲಿ ಇನ್ನಷ್ಟು ಹಣ ಬೇಡಿಕೆ ಇಟ್ಟಿದರು. ಹೀಗಾಗಿ ತಾನು ಗಳಿಸಿದ್ದೇನೆಂದು ನಂಬಿದ್ದ ಹಣವನ್ನು ಪಡೆಯಲು ಹಾತೊರೆಯುತ್ತಿದ್ದ ವ್ಯಕ್ತಿ, ಡಿಜಿಟಲ್ ಸಾಲದಾತರಿಂದ ಹಾಗೂ ಸ್ನೇಹಿತರಿಂದ ಹಣ ಪಡೆದು ಅನೇಕ ಬಾರಿ ಆರೋಪಿಗಳ ವಿವಿಧ ಖಾತೆಗಳಿಗೆ ಹಣ ವರ್ಗಾಯಿಸಿದ್ದ ಎಂಬುದು ತನಿಖೆ ವೇಳೆ ಗೊತ್ತಾಗಿದೆ.




**ಜುಲೈ 3ರಿಂದ ಆಗಸ್ಟ್ 1ರವರೆಗೆ ಒಟ್ಟು 42.62 ಲಕ್ಷ ರೂ. ಹಣವನ್ನು ದೂರುದಾರ ವ್ಯಕ್ತಿ ಪಾವತಿಸಿದ್ದರೂ ಆತ ಗಳಿಸಿದ್ದಾನೆ ಎನ್ನಲಾದ ಲಾಭವನ್ನು ಪಡೆಯಲು ಸಾಧ್ಯವಾಗಲಿಲ್ಲ. ಈ ವೇಳೆಗೆ ಇದು ವಂಚನೆ ಎಂದು ಆತನಿಗೆ ಜ್ಞಾನೋದಯವಾಗಿದ್ದು, ಅಪರಾಧಿಗಳನ್ನು ಪತ್ತೆಹಚ್ಚಿ ಹಣ ವಾಪಸ್ ಕೊಡಿಸಿ ಎಂದು ಪೊಲೀಸರ ಮೊರೆ ಹೋಗಿದ್ದಾನೆ. ಸಂತ್ರಸ್ತ ನೀಡಿದ ದೂರಿನ ಅನ್ವಯ ಕ್ರಿಪ್ಟೋ ವಾಲೆಟ್ ವಿವರಗಳು, ಫೋನ್ ಸಂಖ್ಯೆಗಳು ಹಾಗೂ ಅನುಮಾನಾಸ್ಪದ ವೆಬ್ ಡೊಮೇನ್ ಪರಿಶೀಲನೆಗೆ ಪೊಲೀಸರು ಮುಂದಾಗಿದ್ದಾರೆ ಎಂದು ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ.**

## ಬಿಸ್ಕೆಟ್, ಚಾಕೊಲೇಟ್‌ನಲ್ಲಿ ಗಾಂಜಾ ಸಾಗಾಟ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ಮಾದಕ ವಸ್ತು ಮಾರಾಟ ದಂಧೆ ಕೋರರ ಬೇಟೆ ಮುಂದುವರಿಸಿರುವ ಸಿಸಿಬಿ ಮಾದಕ ವಸ್ತು ನಿಗ್ರಹ ದಳವು (ಎಎನ್‌ಡಬ್ಲ್ಯು) ಫ್ರಾನ್ಸ್ ಹಾಗೂ ಥಾಯ್ಲೆಂಡ್‌ನಿಂದ ಬಿಸ್ಕೆಟ್ ಹಾಗೂ ಚಾಕೊಲೇಟ್ ಪ್ಯಾಕೆಟ್‌ಗಳಲ್ಲಿ ಕಳುಹಿಸಿದ್ದ ಹೈಡ್ರೋಗಾಂಜಾ ಸೇರಿ ವಿವಿಧ ಮಾದರಿಯ 7.7 ಕೋಟಿ ರೂ. ಮೌಲ್ಯದ ಮಾದಕವಸ್ತುಗಳನ್ನು ಜಪ್ತಿ ಮಾಡಿದೆ. ಜತೆಗೆ, ದಂಧೆಕೋರರು ಹಾಗೂ ಅಕ್ರಮವಾಗಿ ವಾಸಿಸುತ್ತಿದ್ದ ವಿದೇಶಿಗರು ಸೇರಿ 19 ಮಂದಿಯನ್ನು ಬಂಧಿಸಲಾಗಿದೆ.

ವಿದೇಶಿ ಪಾರ್ಸೆಲ್‌ಗಳ ಮೇಲೆ ನಿಗಾ ವಹಿಸಿರುವ ಎಎನ್‌ಡಬ್ಲ್ಯು ಅಧಿಕಾರಿಗಳು ಚಾಮರಾಜಪೇಟೆಯ ವಿದೇಶಿ ಅಂಚೆ ಕಚೇರಿಯಲ್ಲಿ ಶೋಧ ನಡೆಸಿದ್ದು, 1.5 ಕೋಟಿ ರೂ. ಮೌಲ್ಯದ ಒಂದೂವರೆ ಕೆ.ಜಿ. ಹೈಡ್ರೋಗಾಂಜಾ ವಶಪಡಿಸಿಕೊಂಡಿದ್ದಾರೆ.

ಅಂತಾರಾಷ್ಟ್ರೀಯ ದಂಧೆಕೋರರು ಫ್ರಾನ್ಸ್ ಹಾಗೂ ಥಾಯ್ಲೆಂಡ್‌ನಿಂದ ಪ್ರತಿಷ್ಠಿತ ಕಂಪನಿಗಳ ಬಿಸ್ಕೆಟ್ ಹಾಗೂ ಚಾಕೊಲೇಟ್ ಪೊಟ್ಟಣಗಳಲ್ಲಿ ಬಚ್ಚಿಟ್ಟು ಹೈಡ್ರೋಗಾಂಜಾ ಕಳಿಸಿಕೊಟ್ಟಿದ್ದರು.

ಮಾದಕ ವಸ್ತು ಪಾರ್ಸೆಲ್ ಸ್ವೀಕರಿಸುವ ವಿಳಾಸಗಳನ್ನು ಪತ್ತೆ ಹಚ್ಚಲಾಗುತ್ತಿದೆ. ದಂಧೆ ಕೋರರು ಡಾರ್ಕ್‌ವೆಬ್ ಮುಖಾಂತರ ಬೆಂಗಳೂರಿನ ನಕಲಿ ವಿಳಾಸಗಳಿಗೆ ಪಾರ್ಸೆಲ್ ಬುಕ್ ಮಾಡಿ ಅಲ್ಲಿಂದ ಸ್ವೀಕರಿಸುತ್ತಿದ್ದರು. ಆರ್ಥಿಕ ವ್ಯವಹಾರವನ್ನು ಕ್ರಿಪ್ಟೋ ಕರೆನ್ಸಿಯಲ್ಲಿ ನಡೆಸುತ್ತಿದ್ದರು. ಈ ದಂಧೆಯಲ್ಲಿ ಶಾಮೀಲಾಗಿರುವ ಆರೋಪಿಗಳ ಬಂಧನಕ್ಕೆ ತನಿಖೆ ಮುಂದುವರಿದಿದೆ ಎಂದು ಪೊಲೀಸರು ಹೇಳಿದ್ದಾರೆ.




**ಕೇಶ ವಿನ್ಯಾಸಕಿ ಸೆರೆ!:** ಪ್ರವಾಸಿ ವೀಸಾದಲ್ಲಿ ನಗರಕ್ಕೆ ಆಗಮಿಸಿ ಹೆಚ್ಚಿನ ಹಣ ಸಂಪಾದಿಸಲು ಮಾದಕ ವಸ್ತು ಮಾರುತ್ತಿದ್ದ ನೈಜೀರಿಯಾದ ಕೇಶ ವಿನ್ಯಾಸಕಿ ಪೊಬೈನಾ ಮುಸ್ಸೆ (27)ರನ್ನು ಬಂಧಿಸಲಾಗಿದೆ. ಆರೋಪಿ ಬಳಿ 4.08 ಕೋಟಿ ರೂ. ಮೌಲ್ಯದ ಎಂಡಿಎಂ ಕ್ರಿಸ್ಟೆಲ್ ಜಪ್ತಿ ಮಾಡಲಾಗಿದೆ.

### ಫ್ರೆಂಡ್‌ಶಿಪ್‌ದಂಧೆ!

**ಕಾಲೇಜು ವಿದ್ಯಾರ್ಥಿಗಳು ಹಾಗೂ ಐಟಿ ಉದ್ಯೋಗಿಗಳಿಗೆ ಅವರು ಹೇಳಿದ ಸ್ಥಳಕ್ಕೆ ಮಾದಕ ವಸ್ತು ಪೂರೈಸುತ್ತಿದ್ದ ಆರು ಮಂದಿ ಸ್ನೇಹಿತರು ಜೈಲು ಸೇರಿದ್ದಾರೆ.**

2024ರಲ್ಲಿ ನಗರಕ್ಕೆ ಆಗಮಿಸಿದ್ದ ಮುಸ್ಸೆ, ಕಮ್ಮನಹಳ್ಳಿಯಲ್ಲಿ ನೆಲೆಸಿದ್ದರು. ಆರಂಭದಲ್ಲಿ ಸಲೂನ್‌ನಲ್ಲಿ ಕೇಶ ವಿನ್ಯಾಸಕಿಯಾಗಿದ್ದರು.

ಬಳಿಕ ಮಾದಕ ವಸ್ತು ಪೂರೈಕೆದಾರರಾದ ತಾಂಜೇನಿಯಾ ಹಾಗೂ ನೈಜೀರಿಯಾದ ಇಬ್ಬರು ಸ್ನೇಹಿತರ ಜತೆಗೂಡಿ ಮಾದಕವಸ್ತು ಮಾರುತ್ತಿದ್ದರು. ಇಬ್ಬರು ಮಹಿಳೆಯರು ತಲೆಮರೆಸಿಕೊಂಡಿದ್ದು, ಬಂಧನಕ್ಕೆ ಕ್ರಮ ವಹಿಸಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಸುದ್ದಗುಂಟೆಪಾಳ್ಯ ವ್ಯಾಪ್ತಿಯ ಕಾಲೇಜು ವಿದ್ಯಾರ್ಥಿಗಳಿಗೆ ಮಾದಕ ವಸ್ತು ಮಾರುತ್ತಿದ್ದ ನೈಜೀರಿಯಾದ ಅನ್ವುಲೆ ಮಾರ್ಕಸ್ ಗ್ಲೋರಿಯನ್ನು ಬಂಧಿಸಲಾಗಿದೆ. ಆರೋಪಿತೆ ಬಳಿ 1.52 ಕೋಟಿ ರೂ. ಮೌಲ್ಯದ ಎಂಡಿಎಂಎ ಕ್ರಿಸ್ಟೆಲ್ ಹಾಗೂ ದ್ವಿಚಕ್ರ ವಾಹನ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಕಸ ಗುಡಿಸಲು ಯಂತ್ರಗಳ ಬಾಡಿಗೆ: ನಿಖಿಲ್ ಕುಮಾರಸ್ವಾಮಿ ಆಕ್ಷೇಪ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಕಸ ಗುಡಿಸುವ 46 ಯಂತ್ರಗಳನ್ನು ಏಳು ವರ್ಷಗಳ ಕಾಲ ಬಾಡಿಗೆ ಆಧಾರದ ಮೇಲೆ ಪಡೆಯಲು ಸಚಿವ ಸಂಪುಟ ಒಪ್ಪಿಗೆ ನೀಡಿರುವುದಕ್ಕೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಕಿಡಿ ಕಾರಿದ್ದಾರೆ. ಈ ಬಗ್ಗೆ 'ಎಕ್ಸ್'ನಲ್ಲಿ ಪ್ರತಿಕ್ರಿಯೆ ನೀಡಿರುವ ಅವರು, ಬಾಡಿಗೆ ನೆಪದಲ್ಲಿ ಕಮಿಷನ್ ಗೋಲ್‌ಮಾಲ್ ನಡೆದಿದೆ. ಜಿಬಿಎ ಯಾರ್ಡ್‌ಗಳಲ್ಲಿ ಕಸ ಗುಡಿಸುವ 26 ಯಂತ್ರಗಳು ಬಳಕೆಯಾಗದೆ ಬಿದ್ದಿವೆ. ಆದರೂ ಸರ್ಕಾರ 613 ಕೋಟಿ ಖರ್ಚು ಮಾಡಿ, 46 ವಾಹನಗಳನ್ನು ಬಾಡಿಗೆಗೆ ಪಡೆಯಲು ಹೊರಟಿದೆ. ಇದರ ಬದಲು ಯಂತ್ರಗಳನ್ನು ಖರೀದಿಸಿದರೆ ಕಡಿಮೆ ವೆಚ್ಚವಾಗುತ್ತದೆ' ಎಂದಿದ್ದಾರೆ.

# ಪಂಚ ಪಾಲಿಕೆ ವಾರ್ಡ್ ವಿಂಗಡಣೆ ಅಂತಿಮ ಅಧಿಸೂಚನೆ

### ಮರುವಿಂಗಡಣೆ ಪೂರ್ತಿಯಾಗಿದ್ದು ನವೆಂಬರ್ 3ನೇ ವಾರದಲ್ಲಿ ಅಧಿಸೂಚನೆ ಪ್ರಕಟಿಸಬಹುದಾದ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದ ಮೇಲೆ ಬೆಂಗಳೂರಿನ ಮಹಾನಗರ ಪಾಲಿಕೆಯು ಐದು ಪಾಲಿಕೆಗಳಾಗಿ ವಿಭಜನೆಯಾಗಿದೆ. ಅದರಂತೆ, ಈ ಹಿಂದಿದ್ದ ಒಂದೇ ಬಿಬಿಎಂಪಿಯ ವಾರ್ಡ್‌ಗಳನ್ನು ಪುನರ್ ವಿಂಗಡಿಸಲಾಗಿದ್ದು ಆ ಕುರಿತಾದ ಅಂತಿಮ ವಿಂಗಡಣೆ ಅಧಿಸೂಚನೆ ಇನ್ನೆರಡು ದಿನಗಳಲ್ಲಿ ಹೊರಬರಲಿದೆ. ಒಂದೂವರೆ ತಿಂಗಳ ಹಿಂದೆ ಪ್ರಕಟಿಸಿದ್ದ ಕರಡು ಅಧಿಸೂಚನೆಗೆ ಸಾರ್ವಜನಿಕರಿಂದ ಬಂದಿದ್ದ ಆಕ್ಷೇಪಣೆಗಳನ್ನು ಪರಿಶೀಲಿಸಿ, ನಗರಾಭಿವೃದ್ಧಿ ಇಲಾಖೆ ಅಂತಿಮ ಪಟ್ಟಿ ಸಿದ್ಧಪಡಿಸಿದೆ. ಒಟ್ಟು 368 ವಾರ್ಡ್‌ಗಳನ್ನು ರಚಿಸಲಾಗಿದೆ.

ವಾರ್ಡ್ ಗಳ ವಿಂಗಡಣೆಗೆ ಸುಪ್ರೀಂಕೋರ್ಟ್ ನೀಡಿದ್ದ 15 ದಿನಗಳ ಗಡುವು ನ.18ಕ್ಕೆ ಮುಗಿಯಲಿದ್ದು, ಬುಧವಾರ ಅಧಿಸೂಚನೆ ಹೊರಡಿಸಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ಆದರೆ, ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಒಪ್ಪಿಗೆ ಬಳಿಕವೇ ಅಧಿಸೂಚನೆ ಅಧಿಕೃತಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ. ಈ ವಾರ್ಡ್‌ಗಳ ಅಂತಿಮ ಅಧಿಸೂಚನೆ ಅಕ್ಟೋಬರ್ ಕೊನೆಯ ವಾರದಲ್ಲೇ ಬರಬೇಕಿತ್ತು. ಆದರೆ, ಜಾತಿ ಸಮೀಕ್ಷೆಯಲ್ಲಿ ಇಲಾಖೆ ಹಾಗೂ ಪಾಲಿಕೆ ಅಧಿಕಾರಿಗಳು ಮತ್ತು ಸಿಬ್ಬಂದಿ ತೊಡಗಿಸಿಕೊಂಡಿದ್ದರಿಂದ ಪ್ರಕ್ರಿಯೆ ವಿಳಂಬವಾಯಿತು. ಈ ಬಗ್ಗೆ ಸುಪ್ರೀಂಕೋರ್ಟ್‌ಗೆ ತಿಳಿಸಿ, ಹೆಚ್ಚುವರಿ ಸಮಯ ಪಡೆದು ಇದೀಗ ಅಂತಿಮ ಪಟ್ಟಿ ಸಿದ್ಧಪಡಿಸಲಾಗಿದೆ.

ಈ ಹಿಂದೆ ಸಿದ್ಧಪಡಿಸಲಾಗಿದ್ದ ಕರಡು ಅಧಿಸೂಚನೆಯಲ್ಲಿ ಕೆಲವು ತಪ್ಪುಗಳಿದ್ದವು. ವಾರ್ಡ್‌ಗಳ ಕನ್ನಡ ಹೆಸರುಗಳಲ್ಲಿ ತಪ್ಪುಗಳಿದ್ದವು. ಅಕ್ಷರ ದೋಷಗಳೂ ಕಾಣಿಸಿಕೊಂಡಿದ್ದವು. ಮುಖ್ಯವಾಗಿ, ವಾರ್ಡ್‌ಗಳನ್ನು ವಿಂಗಡಿಸುವಾಗ ಮಾರ್ಗಸೂಚಿಗಳನ್ನು ಸರಿಯಾಗಿ ಪಾಲಿಸದ ಕಾರಣ, ಗಡಿಗಳ ವಿಚಾರದಲ್ಲಿ ರಾಜಕೀಯ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿದ್ದವು. ಅಲ್ಲದೆ, ಒಂದೇ ಬಡಾವಣೆಯ ಪ್ರದೇಶವನ್ನು ಎರಡು ವಾರ್ಡ್‌ಗಳಿಗೆ ಸೇರಿಸಿದ್ದರಿಂದ ಸ್ಥಳೀಯರಲ್ಲಿ ಗೊಂದಲ ಉಂಟಾಗಿತ್ತು. ಈ ಬಗ್ಗೆ ಅನೇಕ ನಾಗರಿಕರು ಮತ್ತು ಸಂಘ-ಸಂಸ್ಥೆಗಳು ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಿದ್ದವು. ಅದೆಲ್ಲವುದನ್ನು ಪರಿಗಣಿಸಿ, ಈಗ ಮತ್ತೊಂದು ಹೊಸ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಐದು ಪಾಲಿಕೆಗಳಲ್ಲಿ ಒಟ್ಟು 368 ವಾರ್ಡ್‌ಗಳನ್ನು ರಚಿಸಲಾಗಿದೆ.




**ನಿಮ್ಮ ಮನೆ, ವಾರ್ಡ್ ಯಾವ ವ್ಯಾಪ್ತಿಗೆ**

**ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಬಿಬಿಎಂಪಿಯ 198 ವಾರ್ಡ್‌ಗಳನ್ನು ಐದು ಹೊಸ ನಗರ ಪಾಲಿಕೆಗಳಿಗೆ ವಿಭಜಿಸಿ ಹಂಚಿಕೆ ಮಾಡಲಾಗಿದೆ. ಈ ವಿಂಗಡಣೆಯಲ್ಲಿ ಬೆಂಗಳೂರು ಪಶ್ಚಿಮ ನಗರ ಪಾಲಿಕೆಯು ಗರಿಷ್ಠ 64 ವಾರ್ಡ್‌ಗಳನ್ನು ಪಡೆದಿದ್ದರೆ, ಪೂರ್ವ ನಗರ ಪಾಲಿಕೆಯು ಕನಿಷ್ಠ 17 ವಾರ್ಡ್‌ಗಳನ್ನು ಹೊಂದಿದೆ. ಯಾವ ವಾರ್ಡ್ ಯಾವ ನಗರ ಪಾಲಿಕೆಗೆ ಸೇರುತ್ತದೆ ಎನ್ನುವ ಸಂಪೂರ್ಣ ಪಟ್ಟಿಯು ಇದೀಗ ಸಾರ್ವಜನಿಕ ಲಭ್ಯವಾಗಿದೆ.**

ಉತ್ತರ ಪಾಲಿಕೆಯಲ್ಲಿ 72, ದಕ್ಷಿಣ ಪಾಲಿಕೆಯಲ್ಲಿ 72, ಪೂರ್ವ ಪಾಲಿಕೆಯಲ್ಲಿ 50, ಪಶ್ಚಿಮ ಪಾಲಿಕೆಯಲ್ಲಿ 111, ಮತ್ತು ಕೇಂದ್ರ ಪಾಲಿಕೆಯಲ್ಲಿ 63 ವಾರ್ಡ್‌ಗಳು ಇರಲಿವೆ. ಈ ಅಂತಿಮ ಪಟ್ಟಿಗೆ ಸಚಿವರ ಒಪ್ಪಿಗೆ ಸಿಕ್ಕ ತಕ್ಷಣವೇ ಅಧಿಸೂಚನೆ ಹೊರಡಲಿದೆ.

### ಚುನಾವಣೆಗಳು ಯಾವಾಗ

**ಗ್ರೇಟರ್ ಬೆಂಗಳೂರು ಪ್ರಾಧಿಕಾರದ 5 ನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ, ನಗರಾಭಿವೃದ್ಧಿ ಇಲಾಖೆಯು 2011ರ ಜನಗಣತಿಯ ಆಧಾರದ ಮೇಲೆ ಒಟ್ಟು 368 ವಾರ್ಡ್‌ಗಳ ಮರುವಿಂಗಡಣೆಯ ಕರಡು ಅಧಿಸೂಚನೆಯನ್ನು ಹೊರಡಿಸಿದೆ. ಈ ಮರುವಿಂಗಡಣೆಯಲ್ಲಿ ಗೂಗಲ್ ಟ್ರಾನ್ಸ್‌ಲೇಟ್ ಬಳಕೆಯಿಂದಾದ ಲೋಪದೋಷಗಳು ಕಂಡುಬಂದಿದ್ದು, ಇದಕ್ಕೆ ಅಕ್ಟೋಬರ್ 15ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಈ ಪ್ರಕ್ರಿಯೆಯಿಂದಾಗಿ ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ನಗರಪಾಲಿಕೆಗಳ ಚುನಾವಣೆಗಳು 2026ರಲ್ಲಿ ನಡೆಯುವ ಸಾಧ್ಯತೆ ಇದೆ.**


# ಬೇಡಿಕೆ ಈಡೇರಿಕೆಗೆ ಉಸ್ತುವಾರಿ ಸಚಿವ ಅಸ್ತು

## ■ ರೈತರ ಬೇಡಿಕೆ ಈಡೇರಿಸುವ ಭರವಸೆ ನೀಡಿದ ಹಿನ್ನೆಲೆ 37 ದಿನ ಪೂರೈಸಿದ್ದ ಧರಣಿಗೆ ರೈತರು ತಾತ್ಕಾಲಿಕವಾಗಿ ವಿರಾಮ

• ಉದಯವಾಹಿನಿ, ಗುಂಡ್ಲುಪೇಟೆ

ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ ಮುಂದುವರಿದಿದ್ದ ರೈತರ ಅಹೋರಾತ್ರಿ ಧರಣಿ ಸ್ಥಳಕ್ಕೆ ಸ್ಥಳೀಯ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಹಾಗೂ ಅಧಿಕಾರಿಗಳೊಟ್ಟಿಗೆ ಭೇಟಿ ನೀಡಿದ ಪಶು ಸಂಗೋಪನೆ ಹಾಗೂ ಚಾಮರಾಜನಗರ ಜಿಲ್ಲೆ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ರೈತರ ಬೇಡಿಕೆ ಈಡೇರಿಸುವ ಭರವಸೆ ನೀಡಿದ ಹಿನ್ನೆಲೆ 37 ದಿನ ಪೂರೈಸಿದ್ದ ಧರಣಿಗೆ ರೈತರು ತಾತ್ಕಾಲಿಕವಾಗಿ ವಿರಾಮ ಹೇಳಿದರು. ಧರಣಿನಿರತರೊಟ್ಟಿಗೆ ಕುಳಿತು ಸಮಸ್ಯೆ ಆಲಿಸಿದ ಸಚಿವರು ಅಧಿಕಾರಿಗಳ ಸಮಕ್ಷಮ ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು

**ಸಿಎಂ ಬಳಿ ಚರ್ಚಿಸಿ ಪ್ರತ್ಯೇಕ ಮೋಟಾರ್ ಅಳವಡಿಸಿ ನೀರು ಹರಿಸಲು ಅನುದಾನಕ್ಕಾಗಿ ಮನವಿ ಸಲ್ಲಿಸಲಾಗುವುದು ಎಂದು ಉಸ್ತುವಾರಿ ಸಚಿವ ಕೆ.ವೆಂಕಟೇಶ್ ತಿಳಿಸಿ ಧರಣಿ ಕೈ ಬಿಡುವಂತೆ ಮನವಿ ಮಾಡಿದರು, ಸಚಿವರ ಮನವಿಗೆ ಸ್ಪಂದಿಸಿದ ರೈತ ಸಂಘ ಚಾಮರಾಜನಗರ ಜಿಲ್ಲಾಧ್ಯಕ್ಷ ಶಿವಪುರ ಮಹದೇವಪ್ಪ, ರಾಜ್ಯ ಕಾರ್ಯಾಧ್ಯಕ್ಷ ಮಹೇಶ್ ಪ್ರಭು ಹಲವು ಷರತ್ತುಗಳನ್ನ ವಿಧಿಸುವುದರ ಜೊತೆಗೆ ಮನವಿ ನೀಡುವ ಮೂಲಕ 37 ದಿನದ ಅಹೋರಾತ್ರಿ, ಐಕ್ಯತಾ ಹೋರಾಟಕ್ಕೆ ತಾತ್ಕಾಲಿಕವಾಗಿ ವಿರಾಮ ಹೇಳಿದರು.**

ಉದಯವಾಹಿನಿ ಚಿತ್ರ


### ಸಚಿವರಿಗೆ ಭರವಸೆಗೆ ರೈತರ ಷರತ್ತು

**ಗ್ರಾಂಧಿಗ್ರಾಮ ಯೋಜನೆಯಡಿ ಹಾಗೂ ಆಲಂಬೂರು ಏತ ನೀರಾವರಿ ಯೋಜನೆಯಡಿ ಹುತ್ತೂರು ಕೆರೆಗೆ ನೀರು ತುಂಬಿಸಲು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು, ಅರಣ್ಯ ಇಲಾಖೆ ವನ್ಯಪ್ರಾಣಿಗಳ ಉಪಟಳಕ್ಕೆ ಕಡಿವಾಣ ಹಾಕಲು ಮುಂದಾಗಬೇಕು, ರೈತರ ಹಿತಕಾಯುವ ನಿಟ್ಟಿನಲ್ಲಿ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು, ಇಲ್ಲವಾದಲ್ಲಿ ಚಳುವಳಿ ರೂಪ ಬದಲಾಗಲಿದೆ ಎಂದು ತಿಳಿಸಿದರು**

ಸೂಚನೆ ನೀಡಿದರು. ಕೆರೆಗಳಿಗೆ ನೀರು, ಸಾಗುವಳಿ, ಮಾನವ ವನ್ಯಜೀವಿ ಸಂಘರ್ಷ, ಅರಣ್ಯ ಇಲಾಖೆಯಿಂದ ನಿರಾಪೇಕ್ಷಣ ಪತ್ರ ಸೇರಿದಂತೆ ವಿವಿಧ ಬೇಡಿಕೆಗಳನ್ನ ಈಡೇರಿಸುವ ಭರವಸೆ ನೀಡಿದ ಬಳಿಕ ಷರತ್ತುಗಳ ಮೇಲೆ ಧರಣಿ ಕೈಬಿಡಲಾಯಿತು.

**ಡಿಸೆಂಬರ್ ಮೊದಲ ವಾರದಲ್ಲಿ ನೀರು:** ರೈತರ ಒತ್ತಾಯಕ್ಕೆ ಪ್ರತಿಕ್ರಿಯಿಸಿದ ಕಬಿನಿ ಸೂಪರಿಂಟೆಂಡೆಂಟ್ ಇಂಜಿನಿಯರ್ ರಘುಪತಿ ಎರಡನೇ ಹಂತದ ಕೆರೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗಿದೆ, ಡಿ.ಮೊದಲ ವಾರದಲ್ಲಿ ನಾಲ್ಕನೇ ಹಂತದ ಕೆರೆಗಳಿಗೆ ನೀರು ತುಂಬಿಸುವ ಪ್ರಕ್ರಿಯೆಗೆ ವೇಗ ನೀಡಲಾಗುವುದು, ಈಗಾಗಲೇ ಹೆಚ್ಚುವರಿ ಮೋಟಾರ್ ಯಂತ್ರಗಳಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ ಅದರಂತೆ 50 ಕೋಟಿ ಡಿಪಿಆರ್ ಮಾಡಲಾಗಿದೆ ಎಂದು ತಿಳಿಸಿದರು. ಚಾಮರಾಜನಗರದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ನ. 30ರೊಳಗೆ ನೀರುಹರಿಸಲು ಅಧಿಕಾರಿಗಳಿಗೆ ಸೂಚಿಸಿದ್ದೆ ಆದರೆ ಕಾರಣಾಂತರಗಳಿಂದ ಡಿಸೆಂಬರ್ ಮೊದಲ ವಾರದಲ್ಲಿ ಪ್ರಕ್ರಿಯೆಗೆ ಚಾಲನೆ ಕೊಡಲಾಗುವುದು ಎಂದು ತಿಳಿಸಿದ್ದಾರೆ. ಈ ಸಂಧರ್ಭದಲ್ಲಿ ಶಾಸಕ ಎಚ್.ಎಂ ಗಣೇಶ್ ಪ್ರಸಾದ್, ಜಿಲ್ಲಾಧಿಕಾರಿ ಶಿಲ್ಪಾನಾಗ್, ಸಿಎಫ್ ಪ್ರಭಾಕರನ್, ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು, ತಹಶೀಲ್ದಾರ್ ತನ್ಮಯ್, ರೈತ ಸಂಘ ತಾ.ಅಧ್ಯಕ್ಷ ದಿಲೀಪ್, ಕಾರ್ಯದರ್ಶಿ ಶಿವಣ್ಣ, ಉಪಾಧ್ಯಕ್ಷ ನಾಗರಾಜು, ಬೊಮ್ಮನಹಳ್ಳಿ ಲೋಕೇಶ್, ಮಹೇಶ್ ಕುಮಾರ್, ಮಹದೇವಸ್ವಾಮಿ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

**ಮುಖ್ಯಾಂಶಗಳು...**

- **ತಾಲ್ಲೂಕಿನ 110 ಕೆರೆಗಳಿಗೆ ನೀರು ತುಂಬಿಸುವ ಸಲುವಾಗಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆದಿದೆ**
- **ಜನವರಿಯಲ್ಲಿ ಮುಖ್ಯಮಂತ್ರಿಗಳಿಂದ ನೀರು ತುಂಬಿಸೋ ಯೋಜನೆಗೆ ಶಂಕುಸ್ಥಾಪನೆ**
- **ಸಾಗುವಳಿ, ನಿರಾಪೇಕ್ಷಣ ಪತ್ರ ನೀಡಲು ಶೀಘ್ರ ಕ್ರಮ - ಅಧಿಕಾರಿಗಳೊಟ್ಟಿಗೆ ಒಂದು ಸುತ್ತಿನ ಸಭೆ**
- **ರೈತರ ಸಮಸ್ಯೆಗೆ ದನಿಯಾಗಿ ಕೆಲಸ ಮಾಡಲು ಅಧಿಕಾರಿಗಳಿಗೆ ಮೌಖಿಕ ಆದೇಶ**

## ಜನರ ಸಮಸ್ಯೆಗಳಿಗೆ ಕಿವಿಯಾದ ಜನಸ್ಪಂದನಾ ಕಾರ್ಯಕ್ರಮ

• ಉದಯವಾಹಿನಿ, ಬಾಗೇಪಲ್ಲಿ

ಕಂದಾಯ ಇಲಾಖೆ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಯಲ್ಲಂಪಲ್ಲಿ ಗ್ರಾಮ ಪಂಚಾಯಿತಿ ಸಂಯುಕ್ತ ಆಶ್ರಯದಲ್ಲಿ ತಾಲ್ಲೂಕಿನ ಆಚೇಪಲ್ಲಿ ಗ್ರಾಮದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಜನಸ್ಪಂದನಾ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ 4,000 ಫಲಾನುಭವಿಗಳಿಗೆ ಶಾಸಕ ಎಸ್. ಎನ್. ಸುಬ್ಬಾರೆಡ್ಡಿ ಅವರು ಸರ್ಕಾರದ ಯೋಜನೆಗಳನ್ನು ವಿತರಿಸಿದರು.

ಸಮಾಜ ಕಲ್ಯಾಣ ಇಲಾಖೆಯಿಂದ ಬ್ಯಾಗು, ಪುಸ್ತಕ, ಪೆನ್ ಲೇಖನಿ ಸಾಮಗ್ರಿಗಳು, ಟಾರ್ಪಲ್ ವಿತರಿಸಲಾಯಿತು. ಕೈಗಾರಿಕಾ ಇಲಾಖೆಯಿಂದ ಸೀವಿಂಗ್ ಸುಧಾರಿತ ಯಂತ್ರೋಪಕರಣಗಳು, ತೋಟಗಾರಿಕೆ ಇಲಾಖೆಯಿಂದ ಸೋಲಾರ್ ಪಂಪ್‌ಸೆಟ್, ಈರುಳ್ಳಿ ಶೇಖರಣೆ ಘಟಕ, ಕೃಷಿಹೊಂಡ, ಬೋವರ್, ಮಾವು ಪುನಃಶ್ಚೇತನ, ಮಾವು ಹೊಸ ಪ್ರದೇಶ ವಿಸ್ತರಣೆ, ಪಾಲಿಹೌಸ್, ಪಶು ಇಲಾಖೆಯಿಂದ ಔಷಧಗಳಿಗೆ ಆದೇಶ ಪತ್ರ ಹಾಗೂ ಆರೋಗ್ಯ ಇಲಾಖೆಯಿಂದ ಜಂತುನಾಶಕ ಔಷಧಗಳು ಮತ್ತು 100 ಮಂದಿಗೆ ಸ್ಟಿಕ್ಕರ್ ಆರೋಗ್ಯ ಚೀಟಿಗಳನ್ನು ನೀಡಲಾಯಿತು. ಸರ್ವೆ ಇಲಾಖೆಯಿಂದ 250 ಮಂದಿಗೆ ಪೋಡಿ ಮುಕ್ತ ಪ್ರಕರಣಗಳು, 1600 ಮಂದಿಗೆ ಪಿಂಚಣಿ, ಸಾಗುವಳಿ ಚೀಟಿಯ ಖಾತೆ, ದುರಸ್ತಿ ಪೋಡಿ, ಹಕ್ಕುಪತ್ರಗಳು, ಗೂಳೂರು, ಶಂಖಂವಾರಿಪಲ್ಲಿ, ಲಗುಮದ್ದೇಪಲ್ಲಿ, ಬಿಳ್ಳೂರು ಗ್ರಾಮಗಳಲ್ಲಿ ಸ್ಮಶಾನಕ್ಕೆ ಭೂಮಿ ಮಂಜೂರಾತಿ, ಕುಂಬಾರ ಸಮುದಾಯದ ಭವನಕ್ಕೆ ಜಮೀನು ಮಂಜೂರಾತಿ, ನೀರಗಂಟಿಪಲ್ಲಿ, ಕಾನಗಮಾಕಲಪಲ್ಲಿ, ನಾರಾಯಣಸ್ವಾಮಿ ಕೋಟೆ, ಸಜ್ಜುಪಲ್ಲಿ, ಯಲ್ಲಂಪಲ್ಲಿ ನಲ್ಲಪರೆಡ್ಡಿಪಲ್ಲಿ, ಪರಗೋಡು ಆಶ್ರಯ ಭೂಮಿ ಮಂಜೂರಾತಿ ಪತ್ರಗಳನ್ನು ವಿತರಿಸಲಾಯಿತು.

ಉದಯವಾಹಿನಿ ಚಿತ್ರ


**ಪಂಚಾಯಿತಿವಾರು ಜನಸ್ಪಂದನಾ ಕಾರ್ಯಕ್ರಮಗಳಲ್ಲಿ ಸರ್ಕಾರಗಳ ಯೋಜನೆಗಳನ್ನು ನೇರವಾಗಿ ಅರ್ಹ ಫಲಾನುಭವಿಗಳಿಗೆ ತಲುಪಿಸಲಾಗಿದೆ. ಸರ್ಕಾರದ ಯಾವುದೇ ಯೋಜನೆಗಳ ಫಲಾನುಭವಿಯಾಗಲು ಮಧ್ಯವರ್ತಿಗಳ ಮೊರೆ ಹೋಗಬಾರದು ಎಂದು ಸಲಹೆ ನೀಡಿದರು. ಸರ್ಕಾರಿ ಯೋಜನೆಗಳನ್ನು ಪಡೆಯಲು ನೇರವಾಗಿ ಸರ್ಕಾರಿ ಕಚೇರಿಗಳ ಅಧಿಕಾರಿಗಳು ಅಥವಾ ಬುಧವಾರ ತಮ್ಮ ಮನೆಯಲ್ಲಿನ ಜನತಾ ದರ್ಶನಕ್ಕೆ ಬರಬೇಕು.**
**- ಎಸ್.ಎನ್.ಸುಬ್ಬಾರೆಡ್ಡಿ, ಶಾಸಕ**

## ವಿದ್ಯಾರ್ಥಿನಿಯರ ಜತೆ ಶಿಕ್ಷಕನ ಅಸಭ್ಯ ವರ್ತನೆ; ಪೋಷಕರ ಪ್ರತಿಭಟನೆ

• ಉದಯವಾಹಿನಿ, ಚಿಂತಾಮಣಿ

ತಾಲ್ಲೂಕಿನ ದೊಡ್ಡಗಂಜೂರು ಗ್ರಾಮದ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ, ವಿದ್ಯಾರ್ಥಿನಿಯರ ಜೊತೆ ಅಸಭ್ಯವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿ ವಿದ್ಯಾರ್ಥಿನಿಯರು, ಪೋಷಕರು ಶಾಲೆ ಮುಂದೆ ಪ್ರತಿಭಟಿಸಿದರು. ಪ್ರೌಢಶಾಲೆ ಆವರಣದಲ್ಲಿ ಹೆಣ್ಣುಮಕ್ಕಳ ವಿದ್ಯಾರ್ಥಿನಿಲಯವಿದೆ. ಶಾಲೆಯ ಹತ್ತನೇ ತರಗತಿಯಲ್ಲಿ 57 ವಿದ್ಯಾರ್ಥಿನಿಯರಿದ್ದಾರೆ. ಈ ಪೈಕಿ 50 ಹೆಣ್ಣು ಮಕ್ಕಳು ವಿದ್ಯಾರ್ಥಿನಿಲಯದಲ್ಲಿ ಉಳಿದುಕೊಂಡಿದ್ದಾರೆ.

ಶಾಲೆ ಮುಖ್ಯ ಶಿಕ್ಷಕ ವಿದ್ಯಾರ್ಥಿನಿಯರ ಜೊತೆ ಅಸಭ್ಯವಾಗಿ ವರ್ತಿಸುತ್ತಾರೆ. ಅಶ್ಲೀಲ, ಲೈಂಗಿಕ ದೃಷ್ಟಿಯಲ್ಲಿ ಮಾತನಾಡುತ್ತಾರೆ. ಅವರನ್ನು ಕೂಡಲೇ ವರ್ಗಾಯಿಸಬೇಕು. ಇಲ್ಲದಿದ್ದರೆ, ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲ ಎಂದು ಆರೋಪಿಸಿ ಪೋಷಕರು ರಸ್ತೆ ತಡೆ ನಡೆಸಿದರು. ಪೊಲೀಸರು ಮಧ್ಯಪ್ರವೇಶಿಸಿ ರಸ್ತೆ ತಡೆ ನಡೆಸಲು ಅವಕಾಶ ಮಾಡಿ ಕೊಡಲಿಲ್ಲ. ನಂತರ ವಿದ್ಯಾರ್ಥಿನಿಯರು ಕಣ್ಣೀರು ಹಾಕುತ್ತ ಶಾಲೆಯ ಎದುರು ಪ್ರತಿಭಟನೆಗೆ ಕುಳಿತರು. ಮುಖ್ಯ ಶಿಕ್ಷಕರು ಈ ಶಾಲೆಗೆ ಬಂದು 8 ತಿಂಗಳಾಗಿದೆ. ಅವರು ಕರ್ತವ್ಯಕ್ಕೆ ಹಾಜರಾದ ಒಂದು ವಾರದಲ್ಲೇ ಸಮಸ್ಯೆ ಶುರುವಾಯಿತು. ವಿದ್ಯಾರ್ಥಿನಿಯರು ಶೌಚದ ಕೊಠಡಿಗೆ ಹೋದರೆ ಹಿಂಬಾಲಿಸುವುದು. ಮೈಮೇಲೆ ಎಲ್ಲೆಂದರಲ್ಲಿ ಕೈ ಹಾಕುವುದು ಮಾಡುತ್ತಿದ್ದಾರೆ. ಬಂದಾಗಿನಿಂದಲೂ ಇದೇ ರೀತಿ ವರ್ತಿಸುತ್ತಾರೆ. ಈ ವಿಷಯವನ್ನು ಪೋಷಕರ ಸಭೆಯಲ್ಲಿ ಪ್ರಸ್ತಾಪಿಸಿದಾಗ ಕ್ಷಮೆ ಕೋರಿದ್ದಾರೆ. ಪೋಷಕರು ಊರಿಗೆ ಹೋದ ಕೂಡಲೇ ಮಕ್ಕಳನ್ನು ಬಾಯಿಗೆ ಬಂದಂತೆ ಅಸಭ್ಯ ಮತ್ತು ಅಶ್ಲೀಲವಾಗಿ ನಿಂದಿಸಿದ್ದಾರೆ. ರಾತ್ರಿ ಸಮಯದಲ್ಲಿ ಹೆಣ್ಣುಮಕ್ಕಳ ವಿದ್ಯಾರ್ಥಿನಿಲಯದಲ್ಲಿ ಅವರು ಏಕೆ ಹೋಗುತ್ತಾರೆ ಎಂದು ಪೋಷಕ ಚೌಡರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು. ಪೋಷಕರು ಯಾರಾದರೂ ಪ್ರಶ್ನಿಸಿದರೆ ಏನು ಮಾಡುತ್ತೀರೋ ಮಾಡಿಕೊಳ್ಳಿ. ಇಷ್ಟವಿಲ್ಲದಿದ್ದರೆ ವರ್ಗಾವಣೆ ಪತ್ರ ತೆಗೆದುಕೊಂಡು ಹೋಗಿ ಎನ್ನುತ್ತಾರೆ. ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಓದಲು ತೊಂದರೆ ಆಗುತ್ತದೆ ಎಂದು ಸಹಿಸಿಕೊಂಡಿದ್ದೆವು. ಆದರೆ ಮುಖ್ಯ ಶಿಕ್ಷಕನ ವರ್ತನೆ ಬದಲಾಗಲೇ ಇಲ್ಲ. ಪೋಷಕರ ಸಭೆಯಲ್ಲಿ ಕ್ಷಮಾಪಣೆ ಕೇಳುವುದು, ಪೋಷಕರು ಹೋದ ಕೂಡಲೇ ಮಕ್ಕಳ ಮೇಲೆ ಮುಗಿಬೀಳುವುದು ಮಾಡುತ್ತಿದ್ದಾರೆ. ಸರ್ಕಾರದಿಂದ ವಿದ್ಯಾರ್ಥಿನಿಯರಿಗೆ ದೊರೆಯುವ ಯಾವ ಸೌಲಭ್ಯವನ್ನು ನೀಡುತ್ತಿಲ್ಲ ಎಂದು ದೂರಿದರು.

ಪೋಷಕಿಯರಾದ ಸುಜಾತಾ, ಪ್ರಭಾವತಿ, ವಿದ್ಯಾರ್ಥಿನಿಯರು ಸಹ ಇದೇ ರೀತಿಯಲ್ಲಿ ಆರೋಪಿಸಿ ಮುಖ್ಯ ಶಿಕ್ಷಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಉದಯವಾಹಿನಿ ಚಿತ್ರ


### ಡಿಡಿಪಿಐಗೆ ವರದಿ; ಮುಖ್ಯ ಶಿಕ್ಷಕನಿಗೆ ರಜೆ

**ಮುಖ್ಯ ಶಿಕ್ಷಕರ ಅಸಭ್ಯ ವರ್ತನೆ ಬಗ್ಗೆ ಉಪನಿರ್ದೇಶಕರಿಗೆ ವರದಿ ಕಳುಹಿಸಲಾಗುವುದು. ಅವರಿಂದ ಆದೇಶ ಬಂದ ತಕ್ಷಣ ಕಾನೂನು ರೀತಿಯಲ್ಲಿ ಕ್ರಮ ಜರುಗಿಸಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಉಮಾದೇವಿ ಭರವಸೆ ನೀಡಿದರು. ಆದರೂ ಪ್ರತಿಭಟನಕಾರರು ಪಟ್ಟು ಸಡಿಸಲಿಲ್ಲ. ಮುಖ್ಯ ಶಿಕ್ಷಕರಿಗೆ ಸದ್ಯಕ್ಕೆ ರಜೆಯ ಮೇಲೆ ತೆರಳುವಂತೆ ಆದೇಶಿಸಿದರು. ನಂತರ ಪೋಷಕರು ಹಾಗೂ ವಿದ್ಯಾರ್ಥಿನಿಯರು ಪ್ರತಿಭಟನೆ ಹಿಂಪಡೆದರು.**

## ಸಬಲೀಕರಣದ ಹೊಸ ಹೆಜ್ಜೆ 'ಗೃಹಲಕ್ಷ್ಮಿ ಸಂಘ': ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

• ಉದಯವಾಹಿನಿ, ತುಮಕೂರು:

ಮಹಿಳಾ ಸಬಲೀಕರಣದ ಹೊಸ ಹೆಜ್ಜೆಯಾಗಿ ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘ ಆರಂಭಿಸಲಾಗುತ್ತಿದೆ. ಪ್ರತಿಯೊಬ್ಬ ಮಹಿಳೆಗೆ 30 ಸಾವಿರದಿಂದ 5 ಲಕ್ಷದ ವರೆಗೆ ಸಾಲ ನೀಡಲು ಉದ್ದೇಶಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು. ನಗರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಸುವರ್ಣ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಪೂರ್ವಭಾವಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಫೈನಾನ್ಸ್ ಏಜೆನ್ಸಿಗಳು ಮಹಿಳೆಯರಿಗೆ ತುಂಬಾ ತೊಂದರೆ ಕೊಡುತ್ತಿವೆ. ಬಹಳಷ್ಟು ಜನ ಮೋಸ ಹೋಗಿದ್ದಾರೆ. ಇದನ್ನು ನಿಯಂತ್ರಿಸಲು ಗೃಹಲಕ್ಷ್ಮಿ ಸಂಘ ಆರಂಭಿಸಲಾಗುತ್ತಿದೆ ರಾಷ್ಟ್ರೀಕೃತ ಬ್ಯಾಂಕ್ ಮಾದರಿಯಲ್ಲಿ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತದೆ. ಪ್ರಾರಂಭದಲ್ಲಿ 1 ಸಾವಿರ ಕೊಟ್ಟು ಸದಸ್ಯರಾಗಬೇಕು. ಪ್ರತಿ ತಿಂಗಳು ಉಳಿತಾಯ ಖಾತೆಗೆ 200 ಜಮಾ ಮಾಡಬೇಕು. ನಂತರದ ಆರು ತಿಂಗಳಿಗೆ ಸಾಲ ಪಡೆಯಬಹುದು. ಸಂಘದ ಮುಖಾಂತರ ಗಿನ್ನಿಸ್ ದಾಖಲೆ ಸೃಷ್ಟಿಸುವ ಪರಿಕಲ್ಪನೆ ಇದೆ ಎಂದು ಆಶಯ ವ್ಯಕ್ತಪಡಿಸಿದರು.

ಉದಯವಾಹಿನಿ ಚಿತ್ರ


ಜಿಲ್ಲೆಯಲ್ಲಿ 4 ಲಕ್ಷ ಸದಸ್ಯರನ್ನು ಸಂಘಕ್ಕೆ ನೋಂದಣಿ ಮಾಡಿಸಲಾಗುತ್ತಿದೆ. ಆರೋಗ್ಯ, ಮನೆ ನಿರ್ಮಾಣ, ಶಿಕ್ಷಣ, ವಾಹನ ಖರೀದಿ, ಹೈನುಗಾರಿಕೆ ಆರಂಭ, ಉದ್ದಿಮೆ ಸ್ಥಾಪನೆ ಸೇರಿ ಎಲ್ಲಾ ಕಾರ್ಯಗಳಿಗೆ ಸಾಲ ಸೌಲಭ್ಯ ಕಲ್ಪಿಸಲಾಗುತ್ತದೆ ಎಂದರು. ಮಹಿಳೆ, ಮಕ್ಕಳ ರಕ್ಷಣೆ ಉದ್ದೇಶದಿಂದ ಗೃಹ ಇಲಾಖೆ ಸಹಕಾರದಲ್ಲಿ 'ಅಕ್ಕ' ಪಡೆ ಅನುಷ್ಠಾನಕ್ಕೆ ತರಲಾಗುತ್ತಿದೆ. ರಾಜ್ಯದ 37 ಕಡೆಗಳಲ್ಲಿ ಈ ಪಡೆ ಕಾರ್ಯ ನಿರ್ವಹಿಸಲಿದೆ. ಮೊದಲ ಹಂತದಲ್ಲಿ ಶಾಲಾ ಕಾಲೇಜುಗಳಲ್ಲಿ ಅರಿವು ಮೂಡಿಸಲಾಗುತ್ತದೆ. ವಿವಿಧ ಕಡೆಗಳಲ್ಲಿ ಗಸ್ತು ನಡೆಸಲಾಗುತ್ತದೆ. ಯಾವುದೇ ದೌರ್ಜನ್ಯದ ಸಂಭವ ಎದುರಾದರೆ ಕರೆ ಮಾಡಬಹುದು. ಅಕ್ಕನ ರೀತಿಯಲ್ಲಿ ರಕ್ಷಣೆಗೆ ನಿಲ್ಲುತ್ತದೆ ಎಂದು ಭರವಸೆ ನೀಡಿದರು. ಜಿಲ್ಲೆಯ ಶೇ 99ರಷ್ಟು ಅಂಗನವಾಡಿಗಳಲ್ಲಿ ಪೋಷಣ್ ಟ್ರ್ಯಾಕರ್ ಆ್ಯಪ್ ಬಳಸಲಾಗುತ್ತಿದೆ. ಅಂಗನವಾಡಿಯಲ್ಲಿ ಮಕ್ಕಳು ಮತ್ತು ಸಿಬ್ಬಂದಿ ಹಾಜರಾತಿ, ಮಕ್ಕಳಿಗೆ ವಿತರಿಸುತ್ತಿರುವ ಆಹಾರ, ಕೇಂದ್ರದ ಮೂಲಭೂತ ಸೌಕರ್ಯಗಳ ಬಗ್ಗೆಯೂ ಆ್ಯಪ್‌ನಲ್ಲಿ ಉಲ್ಲೇಖಿಸಲಾಗುತ್ತಿದೆ. ಇದು ಇಡೀ ದೇಶಕ್ಕೆ ಮಾದರಿಯಾಗಿದ್ದು, ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಲ್ಲಿ ಜಾರಿಗೆ ತಂದಿದೆ ಎಂದರು. ಶಾಸಕ ಜಿ.ಬಿ.ಜ್ಯೋತಿಗಣೇಶ್, 'ಅಂಗನವಾಡಿಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ಆರಂಭಿಸಲಾಗುತ್ತಿದೆ. ಇಲ್ಲಿ ಮಕ್ಕಳಿಗೆ ಗುಣಮಟ್ಟದ, ವೈಜ್ಞಾನಿಕ ಶಿಕ್ಷಣ ನೀಡಬೇಕು. ಇದಕ್ಕೆ ಪೂರಕವಾಗಿ ಅಂಗನವಾಡಿ ಕಾರ್ಯಕರ್ತರಿಗೆ ತರಬೇತಿ ನೀಡಬೇಕು ಎಂದರು.

**ವೈಜ್ಞಾನಿಕ ಶಿಕ್ಷಣ ನೀಡಬೇಕು**

## ಮಡಿವಾಳ ಸ್ವಯಂ ಭುವನೇಶ್ವರ ದೇವಾಲಯ ದುರಸ್ತಿಗೆ ಆಗ್ರಹ

• ಉದಯವಾಹಿನಿ, ಕೆಜಿಎಫ್

ಚೋಳರ ಕಾಲದಲ್ಲಿ ನಿರ್ಮಾಣವಾಗಿದ್ದ ತಾಲ್ಲೂಕಿನ ಕ್ಯಾಸಂಬಳ್ಳಿಯ ಮಡಿವಾಳ ಸ್ವಯಂ ಭುವನೇಶ್ವರ ದೇವಾಲಯದ ಒಂದು ಭಾಗ ಕುಸಿದಿದ್ದು, ಪ್ರಾಚೀನ ಪುರಾತತ್ವ ಇಲಾಖೆ ಅದರ ದುರಸ್ತಿಗೆ ಮುಂದಾಗದಿರುವುದು ದೇವಾಲಯ ಮತ್ತಷ್ಟು ಕುಸಿಯುವ ಆತಂಕ ಎದುರಾಗಿದೆ.

ಆಗಸ್ಟ್ ಕೊನೆ ವಾರದಲ್ಲಿ ಬಿದ್ದ ಭಾರೀ ಮಳೆಗೆ ದೇವಾಲಯದ ಕಲ್ಲು ಕಂಬ ಮತ್ತು ಅದಕ್ಕೆ ಹೊಂದಿಕೊಂಡಿದ್ದ ಚಾವಣಿ ನೆಲಕ್ಕುರುಳಿದೆ. ರಾತ್ರಿ ವೇಳೆ ಅವಘಡ ಸಂಭವಿಸಿದ್ದರಿಂದ ಯಾರಿಗೂ ತೊಂದರೆಯಾಗಲಿಲ್ಲ. ಪ್ರಾಚೀನ ಶಿಲ್ಪಕಲೆ ಹೊಂದಿರುವ ದೇವಾಲಯವನ್ನು ಕೂಡಲೇ ದುರಸ್ತಿ ಮಾಡಬೇಕೆಂದು ಗ್ರಾಮಸ್ಥರು ಜಿಲ್ಲಾಧಿಕಾರಿ ಸೇರಿದಂತೆ ಹಲವು ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಆದರೆ, ಇದುವರೆಗೂ ದುರಸ್ತಿಯಾಗಿಲ್ಲ. ಈಗಾಗಲೇ ಒಂದು ಭಾಗ ಕುಸಿದಿದೆ. ಅದಕ್ಕೆ ಹೊಂದಿಕೊಂಡಿರುವ ಕಂಬಗಳು ಕೂಡ ಕುಸಿಯುವ ಸಾಧ್ಯತೆ ಇದೆ. ಹಾಗಾಗಿ ಸುಮಾರು 800 ವರ್ಷಗಳ ಪುರಾತನ ದೇವಾಲಯ ನಾಶವಾಗುತ್ತಿದೆ ಎಂಬುದು ಗ್ರಾಮಸ್ಥರ ಆತಂಕವಾಗಿದೆ. ಶೈವ ಸಂಪ್ರದಾಯಕ್ಕೆ ಸೇರಿದ ಈ ದೇವಾಲಯ, 1265ರ ಆಸುಪಾಸಿನಲ್ಲಿ ನಿರ್ಮಾಣವಾಗಿದೆ. ದೇವಾಲಯದಲ್ಲಿ ಚೋಳ, ಹೊಯ್ಸಳ ಮತ್ತು ವಿಜಯನಗರ ಕಾಲದ ಶಾಸನಗಳು ಕನ್ನಡ ಮತ್ತು ತಮಿಳು ಭಾಷೆಯಲ್ಲಿ ಇವೆ.

ದೇವಾಲಯದಲ್ಲಿ ನಡೆಯುವ ಲಕ್ಷ ದೀಪೋತ್ಸವ, ಕಾವಡಿ ಜಾತ್ರೆ, ಬ್ರಹ್ಮ ರಥೋತ್ಸವ, ಮಹಾ ಶಿವರಾತ್ರಿ, ಕಾರ್ತಿಕ ಸೋಮವಾರದಂದು ಸಾವಿರಾರು ಭಕ್ತರು ಆಗಮಿಸುತ್ತಾರೆ. ದೇವಾಲಯವನ್ನು ಕೆಲ ವರ್ಷಗಳ ಹಿಂದೆ ಧರ್ಮಸ್ಥಳ ದೇವಾಲಯ ನೀಡಿದ ಅನುದಾನದಲ್ಲಿ ಪುನರುಜ್ಜೀವನ ಮಾಡಲಾಗಿತ್ತು. ಆದರೆ, ಮತ್ತೆ ವಿನಾಶದತ್ತ ತಲುಪಿದೆ. ಸುತ್ತಮುತ್ತಲಿನ ಗ್ರಾಮಸ್ಥರಿಗೆ ಶ್ರದ್ಧಾಕೇಂದ್ರವಾಗಿರುವ ದೇವಾಲಯದ ಕಲ್ಯಾಣಿ ಕಟ್ಟೆ ಸಂಪೂರ್ಣ ನಾಶವಾಗಿದೆ. ದೇವಾಲಯದ ಒಂದು ಭಾಗ ಶಿಥಿಲಗೊಂಡಿದೆ. ಹಾಗಾಗಿ ಕೂಡಲೇ ದುರಸ್ತಿಗೊಳಿಸಿ ಭಕ್ತರಿಗೆ ಅವಕಾಶ ಕಲ್ಪಿಸಬೇಕೆಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಉದಯವಾಹಿನಿ ಚಿತ್ರ


**ಲಕ್ಷ ದೀಪೋತ್ಸವ ಕಾರ್ಯಕ್ರಮ ಡಿ.3ರಂದು ನಡೆಯಲಿದೆ. ಸಾವಿರಾರು ಭಕ್ತರು ಆಗಮಿಸುತ್ತಾರೆ. ಅಷ್ಟರೊಳಗೆ ದೇಗುಲ ದುರಸ್ತಿಯಾಗಲಿ.**
**-ವೆಂಕಟರಾಮ ಮಡಿವಾಳ, ಗ್ರಾಮಸ್ಥರು**

## ಅರ್ಹರ ಪಡಿತರ ಚೀಟಿ ರದ್ದುಗೊಳಿಸಬೇಡಿ

• ಉದಯವಾಹಿನಿ, ಮಂಡ್ಯ

ತಾಲ್ಲೂಕಿನಲ್ಲಿ ಬಡವರ ಬಿಪಿಎಲ್ ಕಾರ್ಡ್‌ಗಳು ರದ್ದಾಗುತ್ತಿವೆ ಎಂಬ ದೂರುಗಳು ಕೇಳಿಬಂದಿವೆ. ಯಾವುದೇ ಕಾರಣಕ್ಕೂ ಅರ್ಹರ ಪಡಿತರ ಚೀಟಿ ರದ್ದಾಗಬಾರದು. ಪಡಿತರ ಚೀಟಿಗಳನ್ನು ಅನರ್ಹಗೊಳಿಸುವ ಮುನ್ನ ನನ್ನೊಂದಿಗೆ ಕಡ್ಡಾಯವಾಗಿ ಚರ್ಚೆ ಮಾಡಿ' ಎಂದು ಶಾಸಕ ಪಿ.ರವಿಕುಮಾರ್ ಅವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯಿತಿಯ ಕಾವೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಸಿಎಂ, ಆಯುಕ್ತರ ಸೂಚನೆಯಂತೆ, ವಾರ್ಷಿಕವಾಗಿ 1.20 ಲಕ್ಷ ಆದಾಯ ಹೊಂದಿರುವ ಮತ್ತು ಐಟಿ ಪಾವತಿಸಿರುವ ಕಾರಣದಿಂದ ಮಂಡ್ಯ ತಾಲ್ಲೂಕಿನಲ್ಲಿ 1667 ಪಡಿತರ ಚೀಟಿಗಳನ್ನು ಅನರ್ಹರೆಂದು ಗುರುತಿಸಿ, ಬಿಪಿಎಲ್‌ನಿಂದ ಎಪಿಎಲ್‌ಗೆ ಪರಿವರ್ತನೆ ಮಾಡಲಾಗಿದೆ ಎಂದು ಆಹಾರ ನಿರೀಕ್ಷಕ ರೇವಣ್ಣ ಮಾಹಿತಿ ನೀಡಿದರು. ನಿಗಮ, ಮಂಡಳಿಯಿಂದ ಸಹಾಯಧನ ಪಡೆದು ಕಾರು ಪಡೆದವರು ಮತ್ತು ಬಾಡಿಗೆ ಕಾರು ಖರೀದಿಸಿದವರು ಕಡ್ಡಾಯವಾಗಿ ಐಟಿ ರಿಟರ್ನ್ಸ್ ಸಲ್ಲಿಸಬೇಕಿರುತ್ತದೆ. ಆ ಕಾರಣಕ್ಕೆ ಬಡವರ ಬಿಪಿಎಲ್ ಕಾರ್ಡ್ ರದ್ದುಪಡಿಸಬಾರದು. ಮಾನದಂಡಗಳನ್ನು ವಿವೇಚನೆಯಿಂದ ಬಳಸಿ ಎಂದು ಶಾಸಕರು ಸಲಹೆ ನೀಡಿದರು.

**ರೈತ ಸಂಪರ್ಕ ಕೇಂದ್ರದಲ್ಲೇ ಅರ್ಜಿ ಸ್ವೀಕರಿಸಿ:** ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದ ಯೋಜನೆಗೆ ಅರ್ಜಿ ಸಲ್ಲಿಸಲು ಜಿಲ್ಲಾ ಕೇಂದ್ರಕ್ಕೆ ಬರಬೇಕು. ವಾರಕ್ಕೆ ಒಂದು ದಿನ ರೈತ ಸಂಪರ್ಕ ಕೇಂದ್ರದಲ್ಲಿಯೇ ಅರ್ಜಿ ಸ್ವೀಕರಿಸಲು ಕ್ರಮ ವಹಿಸಿ ಎಂದು ಶಾಸಕರು ಸೂಚಿಸಿದರು. ಗಿಡ ನೆಡುವ ವಿಚಾರಕ್ಕೆ ಸಂಬಂಧಿಸಿದಂತೆ ಈವರೆಗೆ ಎಲ್ಲೆಲ್ಲಿ ಸಸಿ ನೆಟ್ಟು ಪೋಷಣೆ ಮಾಡಿದ್ದಾರೆನ್ನುವ ಮಾಹಿತಿಯೇ ನನಗೆ ಗೊತ್ತಿಲ್ಲ. ಆದ್ದರಿಂದ ಈವರೆಗೂ ಆಗಿರುವ ಕಾರ್ಯಕ್ರಮದ ಫೋಟೋಗಳನ್ನು ತಂದು ತೋರಿಸಬೇಕೆಂದು ಶಾಸಕರು ಸಾಮಾಜಿಕ ಅರಣ್ಯ ಇಲಾಖೆ ಅಧಿಕಾರಿಗೆ ತಿಳಿಸಿದರು.

### ಕಳಪೆ ಪಶು ಆಹಾರ ಮಾರಾಟ

**ತಾಲ್ಲೂಕಿನ ಕೆಲ ಅಂಗಡಿಯಲ್ಲಿ ಕಳಪೆ ಪಶು ಆಹಾರ ನೀಡಲಾಗುತ್ತಿದೆ. ಇದು ಜಾನುವಾರು ಸಾವುಗಳಿಗೆ ಕಾರಣವಾಗುತ್ತಿದೆ ಎಂದು ಕೆಡಿಪಿ ಸದಸ್ಯ ರಮೇಶ್ ವಿಚಾರ ಪ್ರಸ್ತಾಪಿಸಿದರು. ಶಾಸಕರು ಪ್ರತಿಕ್ರಿಯಿಸಿ, ಆಹಾರ ಕಲುಷಿತವಾದರೆ ಪಶುಗಳ ಆರೋಗ್ಯಕ್ಕೆ ಕುತ್ತು ಬರುತ್ತದೆ. ಕೂಡಲೇ ಕ್ರಮವಹಿಸಿ ಎಂದರು.**

## ಮಿನಿ ನ್ಯೂಸ್

### ಏತ ನೀರಾವರಿ: ಹೆಚ್ಚುವರಿ ಅನುದಾನಕ್ಕೆ ಶಾಸಕ ಎಂ.ಟಿ.ಕೃಷ್ಣಪ್ಪ ಬೇಡಿಕೆ

• ಉದಯವಾಹಿನಿ, ತುರುವೇಕೆರೆ

ತಾಲ್ಲೂಕಿನ ದಬ್ಬಘಟ್ಟ ಹೋಬಳಿಯ 29 ಕೆರೆಗಳಿಗೆ ನೀರು ಹರಿಸುವ ಏತ ನೀರಾವರಿ ಯೋಜನೆಗೆ ಸರ್ಕಾರ ಹೆಚ್ಚುವರಿ ಅನುದಾನ ಮಂಜೂರು ಮಾಡಬೇಕು ಎಂದು ಶಾಸಕ ಎಂ.ಟಿ.ಕೃಷ್ಣಪ್ಪ ಒತ್ತಾಯಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಬ್ಬೆಘಟ್ಟ ಹೋಬಳಿಯ ಜನರಿಗೆ ಈ ಕಾಮಗಾರಿಯಿಂದ ಬಹುಪಾಲು ನೀರಿನ ಸಮಸ್ಯೆ ಬಗೆಹರಿದಂತಾಗುತ್ತದೆ. ಈಗಾಗಲೇ ಮಲ್ಲಾಘಟ್ಟ ಕೆರೆಯಿಂದ ಕಾಮಗಾರಿ ಆರಂಭವಾಗಿದೆ. ಮಲ್ಲಾಘಟ್ಟದ ಬಳಿ ಜಾಕ್‌ವಲ್ ನಿರ್ಮಿಸಲಾಗಿದೆ.

ಅಲ್ಲಿಂದ ನೀರು ಹರಿಸುವ ಸಲುವಾಗಿ ಪೈಪ್‌ಲೈನ್ ಕಾಮಗಾರಿ ಪ್ರಾರಂಭ ಮಾಡಲಾಗಿದೆ. ಈಗಾಗಲೇ ವೈಟಿ ರಸ್ತೆವರೆಗೆ ಪೈಪ್‌ಲೈನ್ ಕಾಮಗಾರಿ ಮುಗಿದಿದೆ. 48 ಕೋಟಿ ಯೋಜನೆಗೆ ಸರ್ಕಾರ ಕೇವಲ 9 ಕೋಟಿಯಷ್ಟು ಹಣ ಮಾತ್ರ ಬಿಡುಗಡೆಗೊಳಿಸಿದೆ. ಉಳಿದ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದರು. ಜಿಲ್ಲೆಯಲ್ಲಿ ಎತ್ತಿನಹೊಳೆ ಯೋಜನೆ ಚಾಲನೆಯಲ್ಲಿದೆ. ತಿಪಟೂರು, ಗುಬ್ಬಿ ತಾಲ್ಲೂಕಿನಲ್ಲಿ ಕಾಮಗಾರಿ ಮಾಡಲು ತಲಾ 50 ಕೋಟಿ ನೀಡಲಾಗಿದೆ. ಆದರೆ ತುರುವೇಕೆರೆಗೆ ಕೇವಲ 30 ಕೋಟಿ ನೀಡಲಾಗಿದೆ. ಇದು ತಾರತಮ್ಯ. ಈ ಬಗ್ಗೆ ಉಪ ಮುಖ್ಯಮಂತ್ರಿಯನ್ನು ಕೇಳಿದರೆ, ಲಿಂಕ್ ಕೆನಾಲ್‌ಗೆ ತಡೆ ಒಡ್ಡದಿದ್ದರೆ 50 ಕೋಟಿ ಕೊಡುತ್ತೇನೆ ಎಂದು ಆಮಿಷ ಒಡ್ಡುತ್ತಾರೆ. ಇದು ಸರಿಯಲ್ಲ. ನಮಗೆ ಜಿಲ್ಲೆಯ ರೈತ ಹಿತ ಮುಖ್ಯವೇ ಹೊರೆತು ಅವರು ನೀಡುವ ಆಮಿಷವಲ್ಲ.

ಅವರ ದುಡ್ಡ ಬೇಡ. ಗಣಿಭಾದಿತ ಪ್ರದೇಶವೆಂದು ಗಣಿ ಮಾಲೀಕರು 300 ಕೋಟಿ ನೀಡಿದ್ದಾರೆ. ಅದರಲ್ಲಿ ವಿತರಣೆ ಮಾಡಲು ಅವರಿಗೇನು ಕಷ್ಟ ಎಂದು ಕಿಡಿಕಾರಿದರು. ತಾಲ್ಲೂಕಿನ ಮಾಯಸಂದ್ರದಿಂದ ಕೆ.ಬಿ.ಕ್ರಾಸ್‌ವರೆಗಿನ 150-ಎ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ತ್ವರಿತಗತಿಯಲ್ಲಿ ಸಾಗಬೇಕು. ಕೂಡಲೇ ಗ್ರಾಮಾಂತರ ಪ್ರದೇಶಗಳಲ್ಲಿ ಸರ್ವೀಸ್ ರಸ್ತೆ ಮಾಡುವ ಮೂಲಕ ಜನರಿಗೆ ಸರಾಗವಾಗಿ ಓಡಾಡಲು ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

### ಇಂದು, ನಾಳೆ ಮೈಸೂರಿಗೆ ಸಿಎಂ ಸಿದ್ದರಾಮಯ್ಯ ಪ್ರವಾಸ

• ಉದಯವಾಹಿನಿ, ಮೈಸೂರು

ಸಿಎಂ ಸಿದ್ದರಾಮಯ್ಯ ಅವರು ನ. 20, 21ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. 20ರಂದು ಮಧ್ಯಾಹ್ನ 3.30ಕ್ಕೆ ಮೈಸೂರಿಗೆ ಆಗಮಿಸಲಿದ್ದು. ಇಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ. 21ರಂದು ಬೆಳಿಗ್ಗೆ 10.30ಕ್ಕೆ ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಜಿಲ್ಲಾ ಬಿಸಿಎಂ ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದ ಪ್ರಥಮ ವಾರ್ಷಿಕೋತ್ಸವ, ಡಿ. ದೇವರಾಜ ಅರಸು, ಎಲ್.ಜಿ. ಹಾವನೂರು ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ರಾಮಕೃಷ್ಣ ಆಶ್ರಮದ ಶತಮಾನೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಸಂಜೆ 6ಕ್ಕೆ ಮಾನಸಗಂಗೋತ್ರಿಯ ವಿಜ್ಞಾನ ಭವನದಲ್ಲಿ ಪ. ಮಲ್ಲೇಶ್ ಅವರ ಪುಸ್ತಕಗಳ ಇಂಗ್ಲಿಷ್ ಅನುವಾದಿತ ಕೃತಿ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ರಾತ್ರಿ ಬೆಂಗಳೂರಿಗೆ ತೆರಳಲಿದ್ದಾರೆ.

### ಎಚ್.ಡಿ.ಕೋಟೆ: ಸಫಾರಿ ಸ್ಥಗಿತಕ್ಕೆ ರೆಸಾರ್ಟ್ ಕಾರ್ಮಿಕರ ವಿರೋಧ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಎಚ್.ಡಿ.ಕೋಟೆ

ನಾಗರಹೊಳೆ ಅಭಯಾರಣ್ಯದಲ್ಲಿ ಸಫಾರಿ ಸ್ಥಗಿತ ವಿರೋಧಿಸಿ ಸುಮಾರು 12 ರೆಸಾರ್ಟ್‌ಗಳ ಕಾರ್ಮಿಕರು ಪಟ್ಟಣದ ತಾಲ್ಲೂಕು ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಶ್ರೀನಿವಾಸ ಅವರಿಗೆ ಮನವಿ ಸಲ್ಲಿಸಿದರು. ತಾಲ್ಲೂಕಿನ ತೆರಾ ವೈಲ್ಡ್ ಲೈಫ್ ರೆಸಾರ್ಟ್‌ನ ಹೊಸಮಾಳ ಸ್ವಾಮಿ ಮಾತನಾಡಿ, ನಾಗರಹೊಳೆ ಅಭಯಾರಣ್ಯದಲ್ಲಿ ಸಫಾರಿ ಬಂದ್ ಮಾಡಿರುವುದರಿಂದ ಪ್ರವಾಸಿಗರು ರೆಸಾರ್ಟ್‌ಗಳಿಗೆ ಬಾರದ ಹಿನ್ನೆಲೆಯಲ್ಲಿ ಸುಮಾರು 2 ಸಾವಿರ ನೌಕರರಿಗೆ ತೊಂದರೆ ಉಂಟಾಗಿದೆ ಎಂದರು. ತಾಲ್ಲೂಕು ಪ್ರಾಣಿ, ವನ್ಯ, ಜಲ ಸಂಪತ್ತಿನಿಂದ ಕೂಡಿರುವುದರಿಂದ ಹಲವು ರೆಸಾರ್ಟ್‌ಗಳು ತಲೆ ಎತ್ತಿವೆ. ಸುಮಾರು 2 ಸಾವಿರ ಜನರಿಗೆ ಉದ್ಯೋಗ ಸಹ ದೊರೆತಿದೆ. ಖಾಸಗಿ ಉದ್ಯೋಗ ಮಾಡುವ ಯುವಕರಿಗೆ ಯಾವುದೇ ಕಾರ್ಖಾನೆಗಳಿಲ್ಲ, ರೆಸಾರ್ಟ್‌ಗಳೇ ಇಲ್ಲಿನ ಜನರಿಗೆ ಉದ್ಯೋಗ ನೀಡಿವೆ. ಏಕಾಏಕಿ ಸಫಾರಿ ನಿಲ್ಲಿಸಿರುವುದರಿಂದ ನಮ್ಮ ಉದ್ಯೋಗಕ್ಕೆ ಕುತ್ತು ಬಂದಿದೆ' ಎಂದು ಅಳಲು ತೋಡಿಕೊಂಡರು.

ಸಂದೇಶ್ ವಾಟರ್ ಎಡ್ಜ್ ಸಿಬ್ಬಂದಿ ದೇವಯ್ಯ ಮಾತನಾಡಿ, ತಾಲ್ಲೂಕಿನಲ್ಲಿರುವ ಅಧಿಕೃತ ರೆಸಾರ್ಟ್‌ಗಳು ಸ್ಥಳೀಯರಿಗೆ ಆಸರೆಯಾಗಿವೆ. ಆದರೀಗ ರೆಸಾರ್ಟ್‌ಗಳಲ್ಲಿ ಕಾರ್ಯನಿರ್ವಹಿಸುವ ಉದ್ಯೋಗಿಗಳಿಗೆ ಊದ್ಯೋಗವಿಲ್ಲದೆ, ಕುಟುಂಬಗಳು ಬೀದಿಪಾಲಾಗಲಿವೆ. ಇದಕ್ಕೆ ಸರ್ಕಾರವೇ ನೇರ ಕಾರಣ' ಎಂದರು.

## ಪಿಎಂ ಜನ್ಮನ್ ಯೋಜನೆ ಕಾಮಗಾರಿಗಳಿಗೆ ಶಾಸಕ ಗಣೇಶ್ ಶಂಕುಸ್ಥಾಪನೆ

### ● ಮಗುವಿನಹಳ್ಳಿ ಹಾಡಿ 70 ಲಕ್ಷ, ಅಡಿನ ಕಣಿವೆ 65 ಲಕ್ಷ, ಕಾರೇಮಾಳ 37 ಲಕ್ಷ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ


• ಉದಯವಾಹಿನಿ, ಗುಂಡ್ಲುಪೇಟೆ

ಪಿಎಂ ಜನ್ಮನ್ ಯೋಜನೆಯಡಿ ತಾಲ್ಲೂಕಿನ ಮಗುವಿನಹಳ್ಳಿ ಕಾಲೋನಿ, ಕಾರೇಮಾಳ, ಆಡಿನಕಣಿವೆ, ಹಗ್ಗದಹಳ್ಳ ಹಾಡಿಗಳಲ್ಲಿ 3 ಕೋಟಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಎಚ್.ಎಂ ಗಣೇಶ್ ಪ್ರಸಾದ್ ಶಂಕುಸ್ಥಾಪನೆ ನೆರವೇರಿಸಿದರು. ಮಗುವಿನಹಳ್ಳಿ ಹಾಡಿ 70 ಲಕ್ಷ, ಅಡಿನ ಕಣಿವೆ 65 ಲಕ್ಷ, ಕಾರೇಮಾಳ 37 ಲಕ್ಷ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತ ಬುಡಕಟ್ಟು ಸಮುದಾಯದ ಸಮಸ್ಯೆಗಳನ್ನ ಬಗೆಹರಿಸುವ ನಿಟ್ಟಿನಲ್ಲಿ ಆಯಾ ಗ್ರಾಮಪಂಚಾಯತಿ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಲಾಗುವುದು, ಸಮುದಾಯದ ಜನರಿಗೆ ಮೂಲ ಸೌಕರ್ಯ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಕಾರೇಮಾಳಕ್ಕೆ ಬಸ್ ಸಂಪರ್ಕ:** ಕಾರೇಮಾಳಕ್ಕೆ ಕಳೆದ ಒಂದು ವಾರದಿಂದ ಬಸ್ ಸಂಪರ್ಕವಿಲ್ಲದೆ ಶಾಲಾ ಮಕ್ಕಳಿಗೆ ತೊಂದರೆಯಾಗಿದೆ ಎಂಬ ದೂರಿನನ್ವಯ ಡಿಪೋ ವ್ಯವಸ್ಥಾಪಕರೊಟ್ಟಿಗೆ ಫೋನ್ ಸಂಭಾಷಣೆ ನಡೆಸಿದ ಶಾಸಕ ಗಣೇಶ್ ಪ್ರಸಾದ್ ಕೂಡಲೇ ಬಸ್ ಸಂಪರ್ಕದ ವ್ಯವಸ್ಥೆ ಕಲ್ಪಿಸಲು ಸೂಚನೆ ನೀಡಿದರು. ರಸ್ತೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಾಗಿದ್ದು ಮಕ್ಕಳ ವಿದ್ಯಾಭ್ಯಾಸಕ್ಕೆ ತೊಡಕುಂಟಾಗದಂತೆ ಕಾರ್ಯನಿರ್ವಹಿಸಿ ಎಂದು ಸಲಹೆ ನೀಡಿದರು.

**ಮುಖ್ಯಮಂತ್ರಿಗಳ ವಿಶೇಷ ಅನುದಾನ ಸದ್ಬಳಕೆ ;** ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ತಾಲ್ಲೂಕಿನ ಕೆಕೆ ಹುಂಡಿ 30 ಲಕ್ಷ, ಕಲ್ಲಹಳ್ಳಿ 30 ಲಕ್ಷ, ಕಣ್ಣೇಗಾಲ, ಗ್ರಾಮದಲ್ಲಿ ಸಾಮಾನ್ಯ ವರ್ಗದ ಬೀದಿಯ ಸಿಸಿರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಕ್ಷೇತ್ರದಲ್ಲಿ ಬಹುತೇಕ ಗ್ರಾಮಾಂತರ ಪ್ರದೇಶಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದ್ದು ಬಹುತೇಕ ಭಾಗಗಳಲ್ಲಿ ಪೂರ್ಣವಾಗಿದ್ದು, ಕೆಲವೆಡೆ ಪ್ರಗತಿಯಲ್ಲಿವೆ ಹಾಗೆಯೇ ಮುಂದಿನ ದಿನಗಳಲ್ಲಿ ಹಂತಹಂತವಾಗಿ ಅಭಿವೃದ್ಧಿ ಕೆಲಸಗಳಿಗೆ ಪ್ರಾಶಸ್ತ್ಯ ನೀಡಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯೂತ್ ಕಾಂಗ್ರೆಸ್ ತಾಲ್ಲೂಕು ಅಧ್ಯಕ್ಷ ಆದರ್ಶ್, ಕೃಷಿಕ ಸಮಾಜ ಹಾಲಿ ನಿರ್ದೇಶಕ ರಾಜಶೇಖರ್, ಚಂದ್ರು ಕೊಡಸೋಗೆ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಶೇಖರ್, ಲೋಕೇಶ್ ಗೋಪಾಲಪುರ, ಗುರುಪ್ರಸಾದ್ ವೀರನಪುರ, ಪುರಸಭಾ ಮಾಜಿ ಅಧ್ಯಕ್ಷ ಮಧುಸೂದನ್ ಹಾಜರಿದ್ದರು.

**ಸಿಎಂಗಳ ವಿಶೇಷ ಅನುದಾನ ಸದ್ಬಳಕೆ**


ಉದಯವಾಹಿನಿ ಚಿತ್ರ

### ಕರಕಲಮಾದಹಳ್ಳಿ ರಾಡಿ ರಸ್ತೆಗೆ ಮುಕ್ತಿ

**ಮಳೆ ಸಂಧರ್ಭದಲ್ಲಿ ಕೆಸರು ಗದ್ದೆಯಂತಾಗುತ್ತಿದ್ದ ಕೆಕೆ ಹುಂಡಿ ಕರಕಲ ಮಾದಹಳ್ಳಿ ರಸ್ತೆಗೆ ಮುಕ್ತಿ ಸಿಕ್ಕಂತಾಗಿದೆ, ಮಳೆಗಾಲದಲ್ಲಿ ಸ್ಥಳೀಯ ರೈತರು ಜಮೀನುಗಳಿಗೆ ತೆರಳಲು ಆಗದಂತ ಪರಿಸ್ಥಿತಿ ನಿರ್ಮಾಣವಾಗಿತ್ತು, ಇದೆ ಮಾರ್ಗದಲ್ಲಿ ದ್ವಿಚಕ್ರ ವಾಹನ ಸವಾರರು ಪರದಾಡುವಂತ ದುಸ್ಥಿತಿ ಎದುರಾಗಿದ್ದ ಹಿನ್ನೆಲೆ ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಲಾಗಿದ್ದು ಗುಣಮಟ್ಟದ ಕಾಮಗಾರಿಗೆ ಒತ್ತು ನೀಡುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಿದರು.**

ಅಂತರಾಳದಿಂದ...
EDITORIAL

# ಡಿಜಿಟಲ್ ವೈಯಕ್ತಿಕ ದತ್ತಾಂಶ ಸುರಕ್ಷತಾ ಕಾಯ್ದೆ- 2025



ಖಾಸಗೀತನ, ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಮಾತನಾಡುವ ಹಕ್ಕಿನ ಮೇಲೆ ಕಾಯ್ದೆ ಬೀರಬಹುದಾದ ಪರಿಣಾಮಗಳ ಬಗ್ಗೆ ಸಾಕಷ್ಟು ಪ್ರಶ್ನೆಗಳು ಹಾಗೂ ಟೀಕೆಗಳು ಎದುರಾಗಿವೆ. ಮೂಲಭೂತ ಹಕ್ಕುಗಳ ಮೇಲೆ ಕಾಯ್ದೆ ಬೀರಬಹುದಾದ ಪರಿಣಾಮದ ಬಗ್ಗೆಯೂ ಚರ್ಚೆಗಳು ನಡೆದಿವೆ. 'ಡಿಪಿಡಿಪಿ' ಕಾಯ್ದೆಯ ಘೋಷಿತ ಉದ್ದೇಶವು ವ್ಯಕ್ತಿಯ ಖಾಸಗಿ ದತ್ತಾಂಶವನ್ನು ರಕ್ಷಿಸುವುದಾಗಿದೆ. ಆದರೆ, ಹಿಂಪಡೆಯಲಾಗದ ಒಪ್ಪಿಗೆ, ಉಲ್ಲಂಘನೆಯ ಮಾಹಿತಿ ಮತ್ತು ದತ್ತಾಂಶ ಅಳಿಸಿಹಾಕುವ ಹಕ್ಕುಗಳು ಇತ್ಯಾದಿ ಪ್ರಮುಖ ಹೊಣೆಗಾರಿಕೆಗಳಿಗೆ ಸಂಬಂಧಿಸಿದ ನಿಯಮಗಳು ತಕ್ಷಣದಿಂದೇನೂ ಜಾರಿಗೆ ಬರುವುದಿಲ್ಲ. 18 ತಿಂಗಳ ಬಳಿಕ ಜಾರಿಗೆ ಬರಲಿವೆ. ಕಾಯ್ದೆಯ ಕೆಲವು ಪ್ರಮುಖ ನಿಬಂಧನೆಗಳ ಜಾರಿಗೆ ಸಂಬಂಧಿಸಿದಂತೆ ನಿರ್ದಿಷ್ಟ ಕಾಲಾವಧಿಯನ್ನೂ ಗೊತ್ತುಪಡಿಸಲಾಗಿಲ್ಲ.

**ಡಿಜಿಟಲ್ ವೈಯಕ್ತಿಕ ದತ್ತಾಂಶ ಸುರಕ್ಷತಾ ಕಾಯ್ದೆ- 2025 (ಡಿಪಿಡಿಪಿ) ಕುರಿತ ಅಧಿಸೂಚನೆಯನ್ನು ಕೇಂದ್ರ ಸರ್ಕಾರ ಪ್ರಕಟಿಸುವುದರೊಂದಿಗೆ, ಆ ಕಾಯ್ದೆ ಜಾರಿಗೊಳ್ಳಲು ವೇದಿಕೆ ಸಿದ್ಧವಾಗಿದೆ. ಆದರೆ, ಕಾಯ್ದೆಗೆ ಸಂಬಂಧಿಸಿದಂತೆ ಎತ್ತಿದ್ದ ಪ್ರಶ್ನೆಗಳಿಗೆ ಈಗಲೂ ಉತ್ತರಗಳು ದೊರೆತಿಲ್ಲ. ವರ್ತಮಾನದ ಜಗತ್ತಿನಲ್ಲಿ ಖಾಸಗೀತನವು ಅತ್ಯಂತ ಮುಖ್ಯವಾಗಿದ್ದು, ಅದರ ಉಲ್ಲಂಘನೆಯು ಜೀವನದ ಎಲ್ಲಾ ಕ್ಷೇತ್ರಗಳ ಮೇಲೆ ಪರಿಣಾಮ ಬೀರಲಿದೆ. 2023ರಲ್ಲಿ ಸಂಸತ್ತಿನ ಅನುಮೋದನೆ ಪಡೆಯುವ ಮೊದಲಿನ 'ಡಿಪಿಡಿಪಿ' ಕರಡು ಮತ್ತು ನಂತರದ ಕಾಯ್ದೆಯ ಹಲವು ಆಯಾಮಗಳ ಬಗ್ಗೆ ವ್ಯಾಪಕ ಚರ್ಚೆಗಳು ನಡೆದಿವೆ.**

ಮಾಹಿತಿ ಹಕ್ಕಿನ (ಆರ್‌ಟಿಐ) ಮೇಲೆ ಈ ಕಾಯ್ದೆ ಬೀರಬಹುದಾದ ನಕಾರಾತ್ಮಕ ಪರಿಣಾಮಗಳ ಬಗ್ಗೆಯೂ ಆತಂಕ ವ್ಯಕ್ತವಾಗಿದೆ.

ಈ ಕಾನೂನಿನಡಿ ವೈಯಕ್ತಿಕ ಎಂದು ಪರಿಗಣಿಸಲಾದ ಮಾಹಿತಿಯನ್ನು, ಅದು ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ್ದಾದರೂ, ಬಹಿರಂಗಪಡಿಸುವ ಅಗತ್ಯವಿಲ್ಲ. ಆರ್‌ಟಿಐ' ಅನ್ವಯ ಪಡೆಯಬಹುದಾದ ಮಾಹಿತಿಯನ್ನು ನಿರಾಕರಿಸಲು ನೀಡಿರುವ ಈ ಸವಲತ್ತು. ಈಗಾಗಲೇ ದುರ್ಬಲಗೊಂಡಿರುವ ಮಾಹಿತಿ ಹಕ್ಕು ಕಾಯ್ದೆಯನ್ನು ಮತ್ತಷ್ಟು ಬಲಹೀನಗೊಳಿಸುತ್ತದೆ. ರಾಷ್ಟ್ರೀಯ ಭದ್ರತೆಯಂತಹ ವಿಷಯಗಳನ್ನು ಬಳಸಿಕೊಂಡು ವೈಯಕ್ತಿಕ ದತ್ತಾಂಶಗಳನ್ನು ನೀಡುವಂತೆ ಒತ್ತಾಯಿಸಲು ಸರ್ಕಾರಕ್ಕೆ ಅಪರಿಮಿತ ಅಧಿಕಾರವೂ ಕಾಯ್ದೆಯಿಂದ ದೊರೆಯಲಿದೆ. ಇದರಿಂದಾಗಿ, ಮಾಹಿತಿಯ ಮೇಲೆ ಹಾಗೂ ಮಾಹಿತಿಗೆ ಸಂಬಂಧಿಸಿದ ಜನರ ಮೇಲೆ ನಿಯಂತ್ರಣ ಸಾಧಿಸಲು ಸರ್ಕಾರಕ್ಕೆ ಅನುಕೂಲವಾಗಲಿದೆ ಹಾಗೂ ಸಾರ್ವಜನಿಕರನ್ನು ಕಣ್ಗಾವಲಿಗೆ ಒಳಪಡಿಸಲು ಅವಕಾಶ ಆಗಲಿದೆ.

ಪ್ರಜಾಪ್ರಭುತ್ವ ಹೊಂದಿರುವ ದೇಶಗಳಲ್ಲಿ ಸಾರ್ವಜನಿಕ ಹಿತಾಸಕ್ತಿ ದೃಷ್ಟಿಯಿಂದ ಪತ್ರಕರ್ತರು ದತ್ತಾಂಶಗಳನ್ನು ಸಂಗ್ರಹಿಸಲು ಅನುಕೂಲವಾಗುವಂತೆ ನಿಯಮಗಳಲ್ಲಿ ಸಡಿಲಿಕೆ ಇರುತ್ತದೆ. ಈ ವಿನಾಯಿತಿ ಡಿಪಿಡಿಪಿ ಕರಡಿನ ಮೊದಲ ಆವೃತ್ತಿಯಲ್ಲಿ ಇತ್ತು ಹಾಗೂ ನಂತರದಲ್ಲಿ ಅದನ್ನು ತೆಗೆದುಹಾಕಲಾಯಿತು. ಇದರಿಂದಾಗಿ, ಅಕ್ರಮ ಎಸಗಿದ ವ್ಯಕ್ತಿಗಳನ್ನು ಗುರ್ತಿಸುವುದು ಹಾಗೂ ಅವರ ಹೆಸರುಗಳನ್ನು ಬಹಿರಂಗಪಡಿಸುವುದು ಗೋಪ್ಯತೆಯ ಉಲ್ಲಂಘನೆ ಆಗುವುದರಿಂದ ಪತ್ರಕರ್ತರು ವಸ್ತುನಿಷ್ಠವಾಗಿ ಕಾರ್ಯನಿರ್ವಹಿಸುವುದು ಕಾನೂನುಬಾಹಿರ ಎನ್ನುವಂತಾಗುತ್ತದೆ; ಪ್ರಕರಣಗಳಿಗೆ ಸಂಬಂಧಿಸಿದ ವ್ಯಕ್ತಿಗಳ ಬಗ್ಗೆ ವರದಿ ಮಾಡಲು ಅನುಮತಿ ಪಡೆಯಬೇಕಾಗುತ್ತದೆ. ಕಾನೂನನ್ನು ಉಲ್ಲಂಘಿಸುವವರಿಗೆ 250 ಕೋಟಿಯವರೆಗೆ ದಂಡ ವಿಧಿಸಬಹುದಾಗಿದೆ. ಕಾನೂನಿನ ಪ್ರಸ್ತುತ ಸ್ವರೂಪ ನಾಗರಿಕರ ಮೇಲೆ ನಿಯಂತ್ರಣ ಸಾಧಿಸಲು ಸರ್ಕಾರಕ್ಕೆ ಅಪರಿಮಿತ ಅಧಿಕಾರ ದೊರಕಿಸಿಕೊಡುವಂತಿದೆ.

ಸರ್ಕಾರದ ಪ್ರಾಧಿಕಾರವೊಂದು, ಸಾರ್ವಜನಿಕರ ದತ್ತಾಂಶವನ್ನು ಬಳಸಿಕೊಂಡ ನಂತರ ಅದನ್ನು ಅಳಿಸಿಹಾಕುವ ಹೊಣೆಗಾರಿಕೆಯನ್ನು ಕಾಯ್ದೆ ಕಡ್ಡಾಯಗೊಳಿಸಿಲ್ಲ. ಇದರಿಂದ ವೈಯಕ್ತಿಕ ದತ್ತಾಂಶಗಳನ್ನು ಅನಿರ್ದಿಷ್ಟ ಅವಧಿಯವರೆಗೆ ಸರ್ಕಾರದ ಏಜೆನ್ಸಿಗಳು ಇರಿಸಿಕೊಳ್ಳಬಹುದಾಗಿದೆ: ಮಾಹಿತಿ ದುರುಪಯೋಗದ ಸಾಧ್ಯತೆಯನ್ನು ಮುಕ್ತಗೊಳಿಸಿದಂತಾಗಿದೆ. ನಾಗರಿಕರ ವೈಯಕ್ತಿಕ ದತ್ತಾಂಶದ ರಕ್ಷಣೆಯ ಹೊಣೆಯಿಂದ ತಪ್ಪಿಸಿಕೊಳ್ಳಲು ಸರ್ಕಾರಕ್ಕೆ ಅವಕಾಶ ಕಲ್ಪಿಸುವುದು, ಬೇಲಿಯೇ ಹೊಲ ಮೇಯುವ ಮಾತಿಗೆ ಅನುಗುಣವಾಗಿದೆ ಹಾಗೂ ಮಾಹಿತಿ ರಕ್ಷಣೆಯ ಮೂಲಕ ನಾಗರಿಕರನ್ನು ಸಬಲರನ್ನಾಗಿಸುವ ತತ್ತ್ವಕ್ಕೆ ವಿರುದ್ಧವಾಗಿದೆ.

ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ, ನೂತನ ಶೈಕ್ಷಣಿಕ ಭವನ ಉದ್ಘಾಟನೆ

# 20 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ


ಸಂಸ್ಥಾಪಕರ ದಿನಾಚರಣೆ ಸ್ಮರಣಾರ್ಥ 12.82 ಕೋಟಿ ವಿದ್ಯಾರ್ಥಿ ಪ್ರೋತ್ಸಾಹ ಧನವನ್ನು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 207 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪುರಸ್ಕಾರ, 18 ವಿದ್ಯಾರ್ಥಿಗಳಿಗೆ ಕ್ರೀಡಾ ಪ್ರತಿಭಾ ವೇತನ ಪುರಸ್ಕಾರ, 22 ವಿದ್ಯಾರ್ಥಿಗಳಿಗೆ ನಾಯಕತ್ವ ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿ ವೇತನ, 2112 ವಿದ್ಯಾರ್ಥಿಗಳಿಗೆ ಶುಲ್ಕ ರಿಯಾಯಿತಿ ನೀಡಿ ಗೌರವಿಸಲಾಯಿತು.

ಎಲ್ಲರಿಗೂ ಗುಣಾತ್ಮಕ ಶಿಕ್ಷಣ ದೊರಕಬೇಕು ಎಂಬ ಮಹತ್ವಾಕಾಂಕ್ಷೆ ಹೊಂದಿದ್ದ ಶ್ರೀ ಚಿಕ್ಕಮುನಿಯಪ್ಪ ರೆಡ್ಡಿ ಅವರ ದೂರದೃಷ್ಟಿಯ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪನಾ ದಿನಾಚರಣೆ ಸ್ಮರಣಾರ್ಥ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿ ವೇತನ ನೀಡಿ ಗೌರವಿಸುವ ಮೂಲಕ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಮತ್ತು ಸಿಎಂಆರ್ ವಿಶ್ವವಿದ್ಯಾಲಯ ಸಂಸ್ಥಾಪನಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿತು.

ನಗರದ ಬಾಗಲೂರಿನಲ್ಲಿರುವ ಸಿಎಂಆರ್ ವಿಶ್ವವಿದ್ಯಾಲಯ ಲೇಕ್ ಸೈಡ್ ಕ್ಯಾಂಪಸ್‌ನಲ್ಲಿ 19 ನವೆಂಬರ್, 2025, ಬುಧವಾರ ನಡೆದ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ ಶ್ರೀ ರಾಮಲಿಂಗಾ ರೆಡ್ಡಿ, ಡಾ. ಕೆ.ಪಿ. ಗೋಪಾಲಕೃಷ್ಣ, ಅಧ್ಯಕ್ಷರು, ಎನ್‌ಪಿಎಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್, ಎನ್‌ಎಫ್‌ಎಲ್ ಮತ್ತು ಟಿಐಎಸ್‌ಬಿ. ಡಾ.ಸಿ ಹೊನ್ನಪ್ಪ ಗೌಡ, ಅಂತಾರಾಷ್ಟ್ರೀಯ ಕಬ್ಬಡಿ ಆಟಗಾರ ಹಾಗೂ ಅರ್ಜುನ್ ಪ್ರಶಸ್ತಿ ಪುರಸ್ಕೃತ ಇವರುಗಳು ನೂತನವಾಗಿ ನಿರ್ಮಿಸಿರುವ ಸಿಎಂಆರ್ ವಿವಿ ಶೈಕ್ಷಣಿಕ ಭವನವನ್ನು ಉದ್ಘಾಟಿಸಿ ಲೋಕಾರ್ಪಣೆ ಮಾಡಿದರು.

ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾಧಕ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಪ್ರೋತ್ಸಾಹ ವಿದ್ಯಾರ್ಥಿ ವೇತನ ನೀಡಿ ಮಾತನಾಡಿದ ಶ್ರೀ ರಾಮಲಿಂಗಾ ರೆಡ್ಡಿ, ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರು ಬೆರಳೆಣಿಕೆಯಷ್ಟು ವಿದ್ಯಾರ್ಥಿಗಳಿಂದ ಆರಂಭವಾದ ಸಿಎಂಆರ್ ಶಿಕ್ಷಣ ಸಂಸ್ಥೆ ಇಂದು ಸಮೂಹ ಶಿಕ್ಷಣ ಸಂಸ್ಥೆಗಳಾಗಿ, ವಿಶ್ವವಿದ್ಯಾಲಯವಾಗಿ ಬೆಳೆದು 20 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುತ್ತಿದೆ. ಈ ಸಂಸ್ಥೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಉನ್ನತ ಮಟ್ಟದ ಉದ್ಯೋಗ ಪಡೆದು ದೇಶ-ವಿದೇಶಗಳಲ್ಲಿ ಸಿಎಂಆರ್ ಶಿಕ್ಷಣ ಸಂಸ್ಥೆಗಳ ಕೀರ್ತಿಯನ್ನು ಬೆಳಗಿಸಿದ್ದಾರೆ ಎಂದು ಶ್ಲಾಘಿಸಿದರು.

ಸಿಎಂಆರ್ ಸಂಸ್ಥಾಪನಾ ದಿನಾಚರಣೆ ಸ್ಮರಣಾರ್ಥ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿವೇತನ ನೀಡಿ ಯುವ ಪ್ರತಿಭೆಗಳನ್ನು ಪೋಷಿಸುವ



ಉದಯವಾಹಿನಿ ಚಿತ್ರ

ಮತ್ತು ಭವಿಷ್ಯದ ನಾಯಕರನ್ನು ರೂಪಿಸುತ್ತಿರುವ ಸಿಎಂಆರ್ ಆಡಳಿತ ಮಂಡಳಿಯ ಬದ್ಧತೆ ಶಿಕ್ಷಣ ಕ್ಷೇತ್ರಕ್ಕೆ ಮಾದರಿ ಎಂದರು. ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಮತ್ತು ಸಿಎಂಆರ್ ವಿಶ್ವವಿದ್ಯಾಲಯ ಅಧ್ಯಕ್ಷರು, ಮಾಜಿ ರಾಜ್ಯಸಭಾ ಸದಸ್ಯರಾದ ಡಾ.ಕೆ.ಸಿ ರಾಮಮೂರ್ತಿ ಅವರು ಮಾತನಾಡಿ ಪ್ರತಿವರ್ಷ ಪೂಜ್ಯಾ ನಮ್ಮ ತಂದೆ-ತಾಯಿಯವರ ಗೌರವಾರ್ಥ ಸಂಸ್ಥಾಪನಾ ದಿನಾಚರಣೆ ಆಚರಣೆ ಆಯೋಜಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಪುರಸ್ಕಾರ ಮತ್ತು ದೀರ್ಘಾವಧಿ ಸೇವೆ ಸಲ್ಲಿಸಿದ ಸಿಬ್ಬಂದಿಗಳಿಗೆ ಪ್ರಶಸ್ತಿ ಪುರಸ್ಕಾರ ನೀಡಿ ಗೌರವಿಸುವ ಮೂಲಕ ನಮ್ಮ ತಂದೆ-ತಾಯಿಯ ಶಿಕ್ಷಣದ ಮಹತ್ವಾಕಾಂಕ್ಷೆಯ ಆಶಯವನ್ನು ಸ್ಮರಣೀಯವಾಗಿಸಿದ್ದೇವೆ ಎಂದರು.

> **ತಂತ್ರಜ್ಞಾನವು ವಿಶೇಷವಾಗಿ ಇಂದಿನ ತಂತ್ರಜ್ಞಾನ ಯುಗದಲ್ಲಿ ಶಿಕ್ಷಣದಲ್ಲಿ ಕೃತಕ ಬುದ್ಧಿಮತ್ತೆ ಮೂಲಕ ಶಿಕ್ಷಣವನ್ನು ಪುನರ್ ರೂಪಿಸಬೇಕು. ತಂತ್ರಜ್ಞಾನವನ್ನು ಅರ್ಥಮಾಡಿಕೊಳ್ಳುವವರು ಭವಿಷ್ಯವನ್ನು ಮುನ್ನಡೆಸುತ್ತಾರೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಅದನ್ನು ಶಿಸ್ತಿನಿಂದ ಬಳಸಬೇಕು, ಅವಲಂಬನೆಯಿಂದಲ್ಲ ಎಂದು ಒತ್ತಿ ಹೇಳಿದರು.**
>
> -ಡಾ. ಕೆ.ಪಿ. ಗೋಪಾಲನ್ ಕೃಷ್ಣ

ಅದರಂತೆ ಈ ವರ್ಷ ಮೆರಿಟ್ ವಿದ್ಯಾರ್ಥಿಗಳನ್ನು ಗುರ್ತಿಸಿ ಪ್ರೋತ್ಸಾಹ ವಿದ್ಯಾರ್ಥಿ ವೇತನವಾಗಿ 12.82 ಕೋಟಿ ಧನ ಸಹಾಯ ನೀಡಿದ್ದೇವೆ. ಈ ನೆರವು ಪಡೆದ ವಿದ್ಯಾರ್ಥಿಗಳು ಇಂದು ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ ಎಂದು ಹರ್ಷವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಡಾ.ಸಬಿತಾ ರಾಮಮೂರ್ತಿ, ಕುಲಾಧಿಪತಿ ಸಿಎಂಆರ್ ವಿಶ್ವವಿದ್ಯಾಲಯ, ಶ್ರೀ ಕೆ.ಸಿ.ಜಗನ್ನಾಥ ರೆಡ್ಡಿ, ಕಾರ್ಯದರ್ಶಿ, ಸಿಎಂಆರ್ ಜ್ಞಾನಧಾರ ಟ್ರಸ್ಟ್, ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಿಇಒ ಹಾಗೂ ಸಿಎಂಆರ್ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಶ್ರೀ ಜಯದೀಪ್ ಕೆ.ಆರ್ ರೆಡ್ಡಿ, ಏಕ್ಯಾ ಸಮೂಹ ಶಾಲೆಗಳ ಸಂಸ್ಥಾಪಕರು ಸಿಎಂಆರ್ ವಿಶ್ವವಿದ್ಯಾಲಯದ ಪ್ರೊ.ವೋಸ್ಟ್ ಡಾ.ತ್ರಿಸ್ತಾ ರಾಮಮೂರ್ತಿ, ಕುಲಪತಿಗಳಾದ ಡಾ. ಎಚ್.ಬಿ.ರಾಘವೇಂದ್ರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

# ವಿಶ್ವ ಪುರುಷರ ದಿನ

ವಿಶ್ವಾಸ್.ಡಿ.ಗೌಡ




ಪ್ರತಿ ವರ್ಷ ನವೆಂಬರ್ 19 ಅನ್ನು ವಿಶ್ವದೆಲ್ಲೆಡೆ ವಿಶ್ವ ಪುರುಷರ ದಿನವಾಗಿ ಆಚರಿಸಲಾಗುತ್ತದೆ. ಸಮಾಜ ನಿರ್ಮಾಣದಲ್ಲಿ ಪುರುಷರು ವಹಿಸುವ ಮಹತ್ವದ ಪಾತ್ರ, ಅವರ ಮೌಲ್ಯ, ಜವಾಬ್ದಾರಿಗಳು ಮತ್ತು ಅವರು ಎದುರಿಸುವ ಸವಾಲುಗಳನ್ನು ಗುರುತಿಸಲು ಈ ದಿನವನ್ನು ವಿಶೇಷವಾಗಿ ನಿಡಿದೆ.

ಗಂಡಸಿನ ಜೀವನವನ್ನು ಸಾಮಾನ್ಯವಾಗಿ ಶಕ್ತಿ, ಧೈರ್ಯ ಮತ್ತು ಜವಾಬ್ದಾರಿಯ ಪ್ರತೀಕವಾಗಿ ನೋಡಲಾಗುತ್ತದೆ, ಆದರೆ ಈ ಬಲಿಷ್ಠ ಮುಖವಾಡದ ಹಿಂದೆ ಅನೇಕ ಮೌನದ ಸಂಕಷ್ಟಗಳು, ಆತಂಕಗಳು, ಭಾವನೆಗಳು ಮತ್ತು ಒತ್ತಡಗಳು ಅಡಗಿವೆ. ಈ ದಿನವು ಆ ಮೌನವನ್ನು ಕೇಳುವ, ಗುರುತಿಸುವ ಮತ್ತು ಅವರಿಗೆ ಮಾನವೀಯತೆ ಸಲ್ಲಿಸುವ ಒಳ್ಳೆಯ ಅವಕಾಶ. ಪುರುಷರು ಸಮಾಜದಲ್ಲಿ ಅನೇಕ ಪಾತ್ರಗಳನ್ನು ನಿರ್ವಹಿಸುತ್ತಾರೆತಂದೆಯಾಗಿ ಮಕ್ಕಳಿಗೆ ಭದ್ರ ಭವಿಷ್ಯ ಕಟ್ಟುವಲ್ಲಿ, ಪತಿಯಾಗಿ ಕುಟುಂಬಕ್ಕೆ ನಂಬಿಕೆಯ ಆಧಾರವಾಗುವಲ್ಲಿ, ಸಹೋದರನಾಗಿ ಪ್ರೀತಿ ಕಾಳಜಿಯನ್ನು ಹಂಚಿಕೊಳ್ಳುವಲ್ಲಿ, ಉದ್ಯೋಗದಲ್ಲಿ ಜವಾಬ್ದಾರಿಯನ್ನು ಹೊತ್ತು ಕೆಲಸ ಮಾಡುವಲ್ಲಿ, ಮತ್ತು ಸಮಾಜದ ಪ್ರಗತಿಗೆ ತಮ್ಮ ಶಕ್ತಿ, ಸಮಯ ಮತ್ತು ಬುದ್ಧಿವಂತಿಕೆಯನ್ನು ಹಂಚಿಕೊಳ್ಳುವಲ್ಲಿ ಅವರು ಪ್ರಮುಖ ಪಾತ್ರ ವಹಿಸುತ್ತಾರೆ. ಈ ಕೊಡುಗೆಗಳು ಬಹುಪಾಲು ಸಂದರ್ಭಗಳಲ್ಲಿ ಪ್ರಶಂಸೆಗೆ ಒಳಗಾಗದೇ ಮೌನದಲ್ಲೇ ಉಳಿದುಬಿಡುತ್ತವೆ. ವಿಶ್ವ ಪುರುಷರ ದಿನವು ಪುರುಷರ ಶಾರೀರಿಕ ಮತ್ತು ಮಾನಸಿಕ ಆರೋಗ್ಯ, ಸಮಾನತೆ, ಕುಟುಂಬದ ಕಲ್ಯಾಣ, ಮತ್ತು ಸಮಾಜಕ್ಕೆ ಒಳ್ಳೆಯ ಪುರುಷ ಮಾದರಿಗಳನ್ನು ನಿರ್ಮಿಸುವ ಅಗತ್ಯವನ್ನು ಬಲವಾಗಿ ಒತ್ತಿ ಹೇಳುತ್ತದೆ. ಗಂಡಸರಿಗೂ ಭಾವನೆಗಳಿವೆ, ಅವರಿಗೆ ಸಹ ಬೆಂಬಲ, ಪ್ರೋತ್ಸಾಹ ಮತ್ತು ಗೌರವ ಅಗತ್ಯವಿದೆ ಎಂಬ ವಿಷಯವನ್ನು ಸಮಾಜಕ್ಕೆ ಸ್ಪಷ್ಟಪಡಿಸುವ ದಿನ ಇದು.

**ಗಂಡಸರ ಮೌಲ್ಯ ಪಾತ್ರಕ್ಕೆ ಗೌರವದ ದಿನ**

ಈ ದಿನದ ಪ್ರಯುಕ್ತ ಗಂಡಸರ ಸೇವೆ, ತ್ಯಾಗ, ಶ್ರಮ, ಮೌನದ ಹೋರಾಟಕ್ಕೆ ಕೃತಜ್ಞತೆ ಸಲ್ಲಿಸುವ ಜವಾಬ್ದಾರಿ ನಮ್ಮದಾಗಿದೆ. ಸಮಾಜದ ಸಮತೋಲನ, ಶಾಂತಿ ಪ್ರಗತಿಯಲ್ಲಿ ಪುರುಷರು ಸಲ್ಲಿಸಿರುವ ಅಮೂಲ್ಯ ಸೇವೆಗಾಗಿ ಪ್ರತಿಯೊಬ್ಬ ಗಂಡಸರಿಗೂ ಗೌರವ ಮತ್ತು ಅಭಿನಂದನೆಗಳು. ವಿಶ್ವ ಪುರುಷರ ದಿನದ ಹೃತ್ಪೂರ್ವಕ ಶುಭಾಶಯಗಳು!



# ಸೌತೆಕಾಯಿ ತಿಂದ ತಕ್ಷಣ ನೀರು ಕುಡಿಯಬಾರದು, ಕುಡಿದ್ರೆ ಏನಾಗುತ್ತೆ?

ಒಂದು ಸಾಮಾನ್ಯ ನಂಬಿಕೆಯ ಪ್ರಕಾರ, ಸೌತೆಕಾಯಿ ತಿನ್ನುವಾಗ ಅಥವಾ ಸೌತೆಕಾಯಿ ತಿಂದ ತಕ್ಷಣ ನೀರು ಕುಡಿಯಬಾರದು ಎನ್ನಲಾಗುತ್ತದೆ. ಇದರ ಹಿಂದಿನ ಕಾರಣವೇನು ತಿಳಿಯೋಣ. ಕೆಲವೊಂದು ಆಹಾರಗಳನ್ನು ಸೇವಿಸಿದ ತಕ್ಷಣ ನೀರು ಕುಡಿಯಬಾರದು. ನೀರು ಕುಡಿಯೋದ್ರಿಂದ ಅಡ್ಡಪರಿಣಾಮಗಳುಂಟಾಗುತ್ತದೆ. ಅಂತಹ ಆಹಾರಗಳಲ್ಲಿ ಸೌತೆಕಾಯಿ ಕೂಡಾ ಒಂದು ಸೌತೆ ಕಾಯಿಯು ಸಾಕಷ್ಟು ನೀರನ್ನು ಹೊಂದಿರುವ ತರಕಾರಿಯಾಗಿದೆ. ವಿಟಮಿನ್ ಸಿ, ವಿಟಮಿನ್ ಕೆ, ತಾಮ್ರ, ಮ್ಯಾಂಗನೀಸ್ ಮೆಗ್ನೀಸಿಯಮ್ ಪೊಟ್ಯಾಸಿಯಮ್‌ನಂತಹ ಅನೇಕ ಪೋಷಕಾಂಶಗಳಿಂದ ಸಮೃದ್ಧವಾಗಿದೆ.

ಆದರೆ ಇದನ್ನು ತಿಂದ ತಕ್ಷಣ ನೀರು ಕುಡಿಯಬಾರದು ಯಾಕೆ ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

**ಕೆಲವು ಹಣ್ಣು ತರಕಾರಿ ತಿಂದ ತಕ್ಷಣ ನೀರನ್ನು ನಿಷೇಧಿಸಲು ಇದೇ ಕಾರಣ:** ಸೌತೆಕಾಯಿ ತಿಂದ ತಕ್ಷಣ ನೀರು ಕುಡಿಯುವುದರಿಂದ ಈ ಪೋಷಕಾಂಶಗಳು ದೇಹದಲ್ಲಿ ಸರಿಯಾಗಿ ಹೀರಲ್ಪಡುವುದಿಲ್ಲ. ನೀರು ಈ ಪೋಷಕಾಂಶಗಳನ್ನು ಕರಗಿಸುತ್ತದೆ ಮತ್ತು ಜೀರ್ಣಕ್ರಿಯೆಯ ಪ್ರಕ್ರಿಯೆಯನ್ನು ಅಡ್ಡಿಪಡಿಸುತ್ತದೆ, ಇದರಿಂದಾಗಿ ದೇಹವು ಅವುಗಳ ಸಂಪೂರ್ಣ ಪ್ರಯೋಜನವನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಹಾಗಾಗಿ ಸೌತೆಕಾಯಿ ಹಾಗೂ ಇತರ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸಿದ ತಕ್ಷಣ ನೀರು ಕುಡಿಯುವುದನ್ನು ನಿಷೇಧಿಸಲು ಇದೇ ಕಾರಣ.

**ಡಿಸೌತೆಕಾಯಿ ತಿಂದ ನಂತರ ನೀರು ಕುಡಿಯುವುದ ರಿಂದ ಉಂಟಾಗುವ ಸಮಸ್ಯೆಗಳು:** ಹೊಟ್ಟೆಯ pH ಮಟ್ಟ ಅಸಮತೋಲಗೊಳ್ಳುತ್ತದೆ


ಆಹಾರವನ್ನು ಜೀರ್ಣಿಸಿಕೊಳ್ಳಲು ದೇಹಕ್ಕೆ ನಿರ್ದಿಷ್ಟ pH ಮಟ್ಟ ಬೇಕಾಗುತ್ತದೆ. ಸೌತೆಕಾಯಿ ತಿಂದ ತಕ್ಷಣ ನೀರು ಕುಡಿಯುವುದರಿಂದ ದೇಹದ pH ಮಟ್ಟದ ಮೇಲೆ ಪರಿಣಾಮ ಬೀರುತ್ತದೆ, ಇದು ಜೀರ್ಣಕ್ರಿಯೆಯನ್ನು ಮತ್ತಷ್ಟು ಅಡ್ಡಿಪಡಿಸುತ್ತದೆ.

**ಸಡಿಲ ಚಲನೆ ಮತ್ತು ಅತಿಸಾರ:** pH ಮಟ್ಟದ ಅಸಮತೋಲನ ಮತ್ತು ಜೀರ್ಣಕ್ರಿಯೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುವುದರಿಂದ, ಸೌತೆಕಾಯಿ ತಿಂದ ತಕ್ಷಣ ನೀರು ಕುಡಿಯುವುದರಿಂದ ಲೂಸ್ ಮೋಷನ್ ಅಥವಾ ಅತಿಸಾರದಂತಹ ಸಮಸ್ಯೆಗಳು ಉಂಟಾಗಬಹುದು.

**ಎಷ್ಟು ಗಂಟೆ ನಂತರ ನೀರು ಕುಡಿಯಬೇಕು:** ಸಾಮಾನ್ಯವಾಗಿ ಸೌತೆಕಾಯಿ ತಿಂದ ನಂತರ ಕನಿಷ್ಠ 30 ನಿಮಿಷದಿಂದ 1 ಗಂಟೆಯವರೆಗೆ ನೀರು ಕುಡಿಯಬಾರದು ಎಂದು ತಜ್ಞರು ಸೂಚಿಸುತ್ತಾರೆ. ಸೌತೆಕಾಯಿಯನ್ನು ಸರಿಯಾಗಿ ಜೀರ್ಣಿಸಿಕೊಳ್ಳಲು ಮತ್ತು ಅದರ ಪೋಷಕಾಂಶಗಳನ್ನು ಹೀರಿಕೊಳ್ಳಲು ಇಷ್ಟು ಸಮಯ ಸಾಕಾಗುತ್ತದೆ. ಇದು ನಿಮ್ಮ ಜೀರ್ಣಾಂಗ ವ್ಯವಸ್ಥೆಗೆ ಪೋಷಕಾಂಶಗಳನ್ನು ಹೀರಿಕೊಳ್ಳಲು ಮತ್ತು pH ಮಟ್ಟವನ್ನು ಸ್ಥಿರವಾಗಿ ಡಲು ಸಾಕಷ್ಟು ಸಮಯವನ್ನು ನೀಡುತ್ತದೆ.

**ಇವುಗಳನ್ನು ತಿಂದ ನಂತರವೂ ನೀರು ಕುಡಿಯಬಾರದು:** ಸೌತೆಕಾಯಿ ಮಾತ್ರವಲ್ಲ, ಕಲ್ಲಂಗಡಿ, ಮತ್ತು ಅನಾನಸ್ ಮತ್ತು ಸ್ಟ್ರಾಬೆರಿಯಂತಹ ನೀರಿನಂಶವಿರುವ ಹಣ್ಣು ಮತ್ತು ತರಕಾರಿಗಳನ್ನು ಸೇವಿಸಿದ ನಂತರ ನೀರು ಕುಡಿಯದಂತೆ ತಜ್ಞರು ಎಚ್ಚರಿಸುತ್ತಾರೆ ಇದು ಈ ನೀರಿನಂಶವಿರುವ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸುವುದರಿಂದಾಗುವ ಹೆಚ್ಚಿನ ಪ್ರಯೋಜನಗಳನ್ನು ತಡೆಯುತ್ತದೆ.



# ರಾಮಾಯಣ

ಶ್ರೀರಾಮನು ಲಕ್ಷ್ಮಣನನ್ನು ಸಂಧಿಸಿದ್ದು

• ಹಿಂದಿನ ಸಂಚಿಕೆಯಿಂದ

120 ನೆಯ ಅಧ್ಯಾಯ


ಆಮೇಲೆ ರಾವಣನು ಸೀತಾದೇವಿಗೆ ಅತ್ಯಂತ ಭಯವು ಹುಟ್ಟುವಂತೆ ಆಕೆಯನ್ನು ಕುರಿತು ಎಲೇ ಸೀತೆ, ನಿನ್ನ ಕಲ್ಲೆದೆಯನ್ನು ಕಂಡೆನು. ನಾನು ಹನ್ನೆರಡು ತಿಂಗಳುಗಳ ಕಾಲ ನಿನ್ನನ್ನು ಪ್ರತೀಕ್ಷಿಸುತ್ತೇನೆ. ಅಷ್ಟರೊಳಗಾಗಿ ನೀನು ನನಗೆ ಅನುಕೂಲಳಾಗದಿದ್ದರೆ ಹನ್ನೆರಡು ತಿಂಗಳಾದ ಕೂಡಲೆ ನನ್ನ ಅಡಿಗೆಯದರು ನಿನ್ನ ಶರೀರವನ್ನು ತುಂಡುತುಂಡಾಗಿ ಕತ್ತರಿಸಿ ಬೆಳಗಿನೂಟಕ್ಕಾಗಿ ಪಚನಮಾಡುತ್ತಾರೆ ಎಂದು ನುಡಿದು ರಾಕ್ಷಸಸ್ತ್ರೀಯರನ್ನು ಕರೆದು ಅತಿಕೋಪದಿಂದ ಎಲೇ ಸ್ತ್ರೀಯರುಗಳಿರಾ, ಈಕೆಯ ಕಣ್ಣುಮುಂದೆ ರಕ್ತಮಾಂಸಾಹಾರಗಳನ್ನು ಮಾಡುತ್ತ ಭಯಂಕರವಾಗಿ ನಡೆಯುತ್ತ ಇವಳ ಅಹಂಕಾರವನ್ನು ಮುರಿಯಿರಿ ಎಂದು ಆಜ್ಞಾಪಿಸಿದನು. ಈ ಮಾತನ್ನು ಕೇಳಿ ಆ ರಾಕ್ಷಸಯರು ಕೈ ಮುಗಿದುಕೊಂಡು ಮಹಾಪ್ರಸಾದವೆಂದು ಆತನ ಆಜ್ಞೆಯನ್ನು ಶಿರಸಾವಹಿಸಿ ಸೀತಾದೇವಿಯನ್ನು ಸುತ್ತಿಕೊಂಡರು. ಆಗ ರಾವಣನು ಕೋಪಾತಿಶಯದಿಂದ ಭೂಮಂಡಲವು ಒಡೆಯುವಂತೆ ಕಾಲಿನಿಂದ ನೆಲವನ್ನು ಒದ್ದು ಆ ರಾಕ್ಷಸಸ್ತ್ರೀಯರನ್ನು ಕುರಿತು ಎಲೈ ರಾಕ್ಷಸಿಯರಿರಾ, ಈ ಸೀತೆಯನ್ನು ಅಶೋಕವನಕ್ಕೆ ಹಿಡಿದು ಕೊಂಡು ಹೋಗಿ ಯಾರೂ ಕಾಣದ ಸ್ಥಳದಲ್ಲಿಟ್ಟುಕೊಂಡು ಅದರಣೆ ಮಾಡುತ್ತ, ನಿಷ್ಠುರವಾಗಿ ನುಡಿದು ಬೆದರಿಸುತ್ತ, ಮೃದುನುಡಿಗಳಿಂದ ಸಂತವಿಡುತ್ತ ನಯಭಯಗಳಿಂದ ಕಾಡಾನೆಯನ್ನು ವಶಮಾಡುವಂತೆ ನನ್ನ ವಶಮಾಡಿರಿ ಎಂದು ಆಜ್ಞಾಪಿಸಿದನು. ಆ ಮಾತನ್ನು ಕೇಳಿ ಆ ರಾಕ್ಷಸಸ್ತ್ರೀಯರು ಸೀತಾದೇವಿಯನ್ನು ನಾನಾ ಫಲಪುಷ್ಪಗಳಿಂದ ಪರಿಪೂರ್ಣವಾಗಿ ನಾನಾ ಬಗೆಯ ಪಕ್ಷಿಗಳ ಸ್ವರದಿಂದ ರಮಣೀಯವಾದ ಅಶೋಕವನಕ್ಕೆ ಕರೆದುಕೊಂಡು ಹೋದರು. ಆ ಅಶೋಕವನದಲ್ಲಿ ರಾಕ್ಷಸಸ್ತ್ರೀಯರ ಮಧ್ಯದಲ್ಲಿ ಸೀತಾದೇವಿಯು ವ್ಯಾಘ್ರಗಳ ಮಧ್ಯದಲ್ಲಿರುವ ಚಿಗರಿಯಂತೆಯೂ ಬಲೆಗೆ ಸಿಕ್ಕಿದ ಹೆಣ್ಣುಹುಲ್ಲೆಯಂತೆಯೂ ದಿಕ್ಕುಗಾಣದೆ ಭಯಗ್ರಸ್ಥಳಾದಳು. ಅವಳು ಭಯಂಕರವಾದ ದೃಷ್ಟಿಯುಳ್ಳ ಆ ರಾಕ್ಷಸಸ್ತ್ರೀಯರನ್ನು ನೋಡಿ ಚೈತನ್ಯ ಗುಂದಿ ಶೋಕಾಕ್ರಾಂತಳಾಗಿ ತನ್ನ ಪತಿಯಾದ ಶ್ರೀರಾಮನನ್ನೇ ತನ್ನ ಇಷ್ಟ ದೈವವೆಂದು ಧ್ಯಾನಮಾಡುತ್ತಿದ್ದಳು.ಇತ್ತ ಶ್ರೀರಾಮನು ಮಾಯಾಮೃಗರೂಪದಿಂದ ಬಂದಿದ್ದ ಕಾಮರೂಪಿಯಾದ ಮಾರೀಚನನ್ನು ಕೊಂದು ಸೀತಾದೇವಿಯನ್ನು ನೋಡಬೇಕೆಂಬ ಇಚ್ಛೆಯಿಂದ ತನ್ನ ಆಶ್ರಮಕ್ಕೆ ಬೇಗಬೇಗನೆ ಹಿಂದಿರುಗಿ ಬರುತ್ತಿದ್ದನು. ಆಗ ಹಿಂದುಗಡೆಯಲ್ಲಿ ಒಂದು ನರಿಯು ಕೂಗುತ್ತಿರಲು ಭಯಂಕರವಾದ ಆ ಸ್ವರವನ್ನು ಕೇಳಿ ಮನಸ್ಸಿನಲ್ಲಿ ಹೀಗೆ ಚಿಂತಿಸಲಾರಂಭಿಸಿದನು: ಹಿಂದುಗಡೆಯಲ್ಲಿ ನರಿಯು ಕೂಗುವುದಕ್ಕೆ ಏನಾದರೂ ಕಾರಣವಿರಬೇಕು. ಸೀತಾದೇವಿಯು ಸುಖದಲ್ಲಿದ್ದಾಳೆಯೋ ಇಲ್ಲವೋ ನಾನು ಮೃಗರೂಪನಾದ ಮಾರೀಚನನ್ನು ಕೊಂದಾಗ ಆತನು ಹಾ ಲಕ್ಷ್ಮಣಾ ಹತನಾದೆ ಎಂದು ಕೂಗಿಕೊಂಡನು.

ಮುಂದುವರಿಯುವುದು...

# ಪೂರ್ವ ಝೆನ್‌ಟೆಕ್ ಪಾರ್ಕ್‌ನಲ್ಲಿ ಐಕಿಯಾ ಮಳಿಗೆಗಾಗಿ ಪುರವಂಕರ ಜೊತೆ ಒಪ್ಪಂದ

• ಉದಯವಾಹಿನಿ, ಬೆಂಗಳೂರು

ಭಾರತದ ಅತ್ಯಂತ ವಿಶ್ವಾಸಾರ್ಹ ರಿಯಲ್ ಎಸ್ಟೇಟ್ ಸಂಸ್ಥೆಗಳಲ್ಲಿ ಒಂದಾದ ಪುರವಂಕರ ಲಿಮಿಟೆಡ್, ಬೆಂಗಳೂರಿನ ಕನಕಪುರ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ತನ್ನ ಪೂರ್ವ ಝೆನ್‌ಟೆಕ್ ಪಾರ್ಕ್‌ನಲ್ಲಿ ರಿಟೇಲ್ ಮಳಿಗೆಗಾಗಿ ಐಕಿಯಾ ಇಂಡಿಯಾ ಜೊತೆಗೆ ಗುತ್ತಿಗೆ ಒಪ್ಪಂದಕ್ಕೆ ಸಹಿ ಹಾಕಿದೆ.




ಉದಯವಾಹಿನಿ ಚಿತ್ರ

ಈ ಒಪ್ಪಂದದ ಅನ್ವಯ, ಐಕಿಯಾ ಸಂಸ್ಥೆಯು ಪೂರ್ವ ಝೆನ್‌ಟೆಕ್ ಪಾರ್ಕ್‌ನ ಮೊದಲ ಮತ್ತು ಎರಡನೇ ಮಹಡಿಗಳಲ್ಲಿ 1.2 ಲಕ್ಷ ಚದರ ಅಡಿಗೂ ಅಧಿಕ ವಿಸ್ತೀರ್ಣದ ಗುತ್ತಿಗೆಯೋಗ್ಯ ಜಾಗವನ್ನು ಪಡೆಯಲಿದೆ. ಇದು ದಕ್ಷಿಣ ಬೆಂಗಳೂರಿನ ವೇಗವಾಗಿ ಬೆಳೆಯುತ್ತಿರುವ ಭಾಗದಲ್ಲಿ ನಡೆದ ಅತಿದೊಡ್ಡ ರಿಟೇಲ್ ವ್ಯವಹಾರಗಳಲ್ಲಿ ಒಂದಾಗಿದೆ.

ಈ ಜಾಗವನ್ನು 2026ರ ಮೊದಲ ತ್ರೈಮಾಸಿಕದಲ್ಲಿ ಹಸ್ತಾಂತರಿಸಲು ನಿರ್ಧರಿಸಲಾಗಿದ್ದು, ಶೀಘ್ರದಲ್ಲೇ ಐಕಿಯಾ ತನ್ನ ಕಾರ್ಯಾಚರಣೆಯನ್ನು ಆರಂಭಿಸುವ ನಿರೀಕ್ಷೆಯಿದೆ. ಈ ವ್ಯವಹಾರದಲ್ಲಿ ಕಾಲ್ಲಿಯರ್ಸ್ ಸಂಸ್ಥೆಯು ಸಲಹೆಗಾರರಾಗಿ ಕಾರ್ಯನಿರ್ವಹಿಸಿದೆ.

ಪೂರ್ವ ಝೆನ್‌ಟೆಕ್ ಪಾರ್ಕ್ ಸುಮಾರು 9.6 ಲಕ್ಷ ಚದರ ಅಡಿ ಗುತ್ತಿಗೆಯೋಗ್ಯ ಮತ್ತು ಮಾರಾಟಯೋಗ್ಯ ವಿಸ್ತೀರ್ಣವನ್ನು ಹೊಂದಿರುವ ಒಂದು ಮಿಶ್ರ-ಬಳಕೆಯ ವಾಣಿಜ್ಯ ಯೋಜನೆಯಾಗಿದೆ. ದೊಡ್ಡ ಗಾತ್ರದ ಮತ್ತು ಮಧ್ಯಮ ಗಾತ್ರದ ಕಂಪನಿಗಳಿಗೆ ಅನುಕೂಲವಾಗುವಂತೆ ವಿನ್ಯಾಸಗೊಳಿಸಲಾಗಿದೆ. ಕೋಣನಕುಂಟೆ ಮೆಟ್ರೋ ನಿಲ್ದಾಣ ಮತ್ತು ಫೋರಂ ಮಾಲ್‌ನಿಂದ ನಡೆದುಹೋಗುವಷ್ಟು ಸಮೀಪದಲ್ಲಿರುವ ಈ ಯೋಜನೆಯು, ಇಂಡಿಯನ್ ಗ್ರೀನ್ ಬಿಲ್ಡಿಂಗ್ ಕೌನ್ಸಿಲ್'(IGBC)ನಿಂದ 'ಗೋಲ್ಡ್' ಮಾನ್ಯತೆ ಪಡೆದಿದೆ. ಇದು ಸುಸ್ಥಿರ ವಿನ್ಯಾಸಕ್ಕೆ ಪುರವಂಕರ ಸಂಸ್ಥೆಯ ಬದ್ಧತೆಯನ್ನು ತೋರಿಸುತ್ತದೆ.

# ಬ್ಯಾನರ್ ರಾಜಕೀಯಕ್ಕೆ ಅಧಿಕಾರಿ ಬಲಿ

• ಉದಯವಾಹಿನಿ, ಬೆಂಗಳೂರು



ನಿಷೇಧಿತ ಪ್ರದೇಶದಲ್ಲಿ ಅಳವಡಿಸಲಾಗಿದ್ದ ಬ್ಯಾನರ್ ತೆಗೆಸಿಹಾಕಿದ ಮಹಾನಗರ ಪಾಲಿಕೆ ಅಧಿಕಾರಿಯನ್ನು ಅಮಾನತುಗೊಳಿಸಿರುವ ರಾಜ್ಯ ಸರ್ಕಾರದ ಕ್ರಮಕ್ಕೆ ತಡೆ ನೀಡಿರುವ ಹೈಕೋರ್ಟ್, ಸರ್ಕಾರದ ಈ ನಡೆ ಸಕ್ರಮ ಪ್ರಾಧಿಕಾರವೊಂದರ ಅಧಿಕಾರ ದುರುಪಯೋಗಕ್ಕೆ ಹಿಡಿದ ಕೈಗನ್ನಡಿ' ಎಂದು ಚಾಟಿ ಬೀಸಿದೆ.

ನನ್ನನ್ನು ಅಮಾನತುಗೊಳಿಸಿ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಅಕ್ಟೋಬರ್ 9ರಂದು ಹೊರಡಿಸಿರುವ ಆದೇಶವನ್ನು ರದ್ದುಗೊಳಿಸಬೇಕು' ಎಂದು ಕೋರಿ ಬಳ್ಳಾರಿ ಮಹಾನಗರ ಪಾಲಿಕೆಯ ಪರಿಸರ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮುನಾಫ್ ಪಟೇಲ್ ಖಾದರ್ ಪಟೇಲ್ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಕುರಿತಂತೆ ಮಧ್ಯಂತರ ತಡೆ ಆದೇಶ ನೀಡಿದೆ. 'ಸರ್ಕಾರಿ ಅಧಿಕಾರಿಗಳ ಅಮಾನತು ಆದೇಶಗಳನ್ನು ನಿರ್ದೇಶಿಸುವವರು ರಾಜಕೀಯ ಯಜಮಾನರೇ ಆಗಿರುತ್ತಾರೆ.

**ಇಂಜಿನಿಯರ್ ಅಮಾನತು ಆದೇಶಕ್ಕೆ ಹೈಕೋರ್ಟ್ ಚಾಟಿ**

ಹೀಗಾಗಿ, ಇಂತಹ ಅಮಾನತು ಆದೇಶಗಳ ಹಿಂದೆ ಸಾಕಷ್ಟು ವೈಯಕ್ತಿಕ ಹಿತಾಸಕ್ತಿಗಳು ಅಡಗಿರುತ್ತವೆ. ಈ ಪ್ರಕರಣದಲ್ಲಿ ಅರ್ಜಿದಾರರನ್ನು ಅಮಾನತುಗೊಳಿಸಿರುವುದು ಮೇಲ್ನೋಟಕ್ಕೆ ದುರುದ್ದೇಶಪೂರಿತ ಮತ್ತು ಅಧಿಕಾರ ದುರುಪಯೋಗದಿಂದ ಕೂಡಿದೆ ಎಂದು ಅತೃಪ್ತಿ ವ್ಯಕ್ತಪಡಿಸಿದೆ.

ಪಾಲಿಕೆಯೇ ಕೈಗೊಂಡಿದ್ದ ಠರಾವಿನ ಅನುಸಾರ ಬಳ್ಳಾರಿಯ ಸಂಗಮ ವೃತ್ತದಲ್ಲಿ ಬ್ಯಾನರ್, ಕಟೌಟ್ ಅಥವಾ ಯಾವುದೇ ರೀತಿಯ ಜಾಹೀರಾತು ಪ್ರದರ್ಶಿಸುವುದನ್ನು ಸ್ಪಷ್ಟವಾಗಿ ನಿಷೇಧಿಸಲಾಗಿದೆ ಮತ್ತು ಅಂತಹ ಪ್ರದರ್ಶನಗಳು ಕರ್ನಾಟಕ ಮುಕ್ತ ಸ್ಥಳಗಳ ವಿರೂಪಗೊಳಿಸುವಿಕೆ ತಡೆಗಟ್ಟುವಿಕೆ ಕಾಯ್ದೆ-1981ರ ಉಲ್ಲಂಘನೆ ಯಾಗುತ್ತದೆ ಎಂದೂ ವಿವರಿಸಲಾಗಿದೆ. ಹೀಗಾಗಿಯೇ, ಅರ್ಜಿದಾರ ಮುನಾಫ್ ಪಟೇಲ್ ನಿಷ್ಪಕ್ಷಪಾತವಾಗಿ ತಮ್ಮ ಅಧಿಕಾರ ಚಲಾಯಿಸಿ ಸಂಗಮ ವೃತ್ತದಲ್ಲಿ ಅಳವಡಿಸಿದ್ದ ಬ್ಯಾನರ್‌ಗಳನ್ನು ತೆಗೆದುಹಾಕಿದ್ದಾರೆ' ಎಂದು ನ್ಯಾಯಪೀಠ ವಿವರಿಸಿದೆ. ಅಳವಡಿಸಲಾಗಿದ್ದ ಬ್ಯಾನರ್ ಕಾರ್ಪೊರೇಟರ್ ಒಬ್ಬರ ಪತಿಯದ್ದಾಗಿತ್ತು ಎಂಬ ಕಾರಣಕ್ಕಾಗಿ ಅರ್ಜಿದಾರರಿಗೆ ಅಮಾನತು ಶಿಕ್ಷೆ ವಿಧಿಸಿರುವುದು ಆಘಾತಕಾರಿ.

ಕಾನೂನಿನ ಪ್ರಕಾರ ತಮ್ಮ ಕರ್ತವ್ಯ ನಿರ್ವಹಿಸಿದ ಅರ್ಜಿದಾರರು ಈಗ ರಾಜಕೀಯ ಕಾರಣಗಳಿಗಾಗಿ ಅಮಾನತಿನ ಕೋಪವನ್ನು ಎದುರಿಸುವಂತಾಗಿದೆ. ಪಾಲಿಕೆಯ ಠರಾವಿಗೆ ಸಹಿ ಹಾಕಿದ್ದ ಆಯುಕ್ತರೇ ಅರ್ಜಿದಾರರನ್ನು ಅಮಾನತುಗೊಳಿಸಬೇಕು ಎಂದು ಶಿಫಾರಸು ಮಾಡಿದ್ದು ಇದರ ಅನುಸಾರ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಅಮಾನತು ಆದೇಶವನ್ನು ಹೊರಡಿಸಿರುವುದು ಚೋದ್ಯದ ಸಂಗತಿ' ಎಂದು ನ್ಯಾಯಪೀಠ ಕಿಡಿ ಕಾರಿದೆ.

# ಮಕ್ಕಳಲ್ಲಿನ ಪ್ರತಿಭೆ ಗುರುತಿಸಲು ಪ್ರತಿಭಾ ಕಾರಂಜಿ ಸೂಕ್ತ ವೇದಿಕೆ: ಬಿಇಓ ವಿ.ಲಕ್ಷ್ಮಯ್ಯ

**• ಉದಯವಾಹಿನಿ, ಚಿಂಚೋಳಿ**

ಶಾಲಾಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ಬರಲು ಪ್ರತಿಭಾ ಕಾರಂಜಿಯಂಥಹ ಕಾರ್ಯಕ್ರಮಗಳು ಸೂಕ್ತ ವೇದಿಕೆಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಿ.ಲಕ್ಷ್ಮಯ್ಯ ಹೇಳಿದರು.

ತಾಲ್ಲೂಕಿನ ಸುಲೇಪೇಟ ಗ್ರಾಮದ ಸರಕಾರಿ ಉರ್ದು ಹಿರಿಯ ಪ್ರಥಾಮೀಕ ಶಾಲೆಯಲ್ಲಿ ಸಮೂಹ ಸಂಪನ್ಮೂಲ ಕೇಂದ್ರ, ಚಿಂಚೋಳಿ ಉರ್ದು ಮತ್ತು ಸುಲೇಪೇಟ ಉರ್ದು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಮಕ್ಕಳ ಪ್ರತಿಭೆ ಗುರುತಿಸುವ ಕ್ರಿಯಾಶೀಲ ಕಾರ್ಯಕ್ರಮಗಳನ್ನು ನಿರಂತರವಾಗಿ ಕೈಗೊಳ್ಳಬೇಕು.

ಪ್ರತಿಯೊಬ್ಬ ವಿದ್ಯಾರ್ಥಿಗಳಲ್ಲಿ ಪ್ರತಿಭೆ ಇರುತ್ತದೆ, ಬಹುತೇಕರು ಕೀಳರಿಮೆಯಿಂದ ಸದಾ ಹಿಂದುಳಿದಿರುತ್ತಾರೆ, ಶಿಕ್ಷಕರು ಪ್ರತಿಭೆ ಇರುವ ಶಾಲಾಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸಿ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಬೇಕು.


ಉದಯವಾಹಿನಿ ಚಿತ್ರ

ಇದರಿಂದ ವಿದ್ಯಾರ್ಥಿಗಳು ಹೊಸ ಪ್ರತಿಭಾವಂತರು ಬೆಳಕಿಗೆ ಬರಲು ಸಾಧ್ಯ ಎಂದು ಹೇಳಿದರು. ಸಲೀಂ ಮಕ್ಸೂದ್‌ಅಲಿ ಸ್ವಾಗತಿಸಿದರು,ಮಹ್ಮದ್ ಫಾಜೀಲ್ ನಿರೂಪಿಸಿದರು,ಮಹ್ಮದ್ ಶಕೀಲ ವಂದಿಸಿರು.

ಈ ಸಂದರ್ಭದಲ್ಲಿ ಜೋಹರಾಖಾನಂ ಅಧ್ಯಕ್ಷತೆ ವಹಿಸಿದರು,ಸುರೇಶ ಕೊರವಿ,ಮಲ್ಲಿಕಾರ್ಜುನ ಪಾಲಾಮೂರ, ಮಹ್ಮದ್ ಫಾರೂಕ್,ಮಕ್ಸೂದ್ ಅಲಿ,ನುಶರತ್ ಮೊಯೋದ್ದಿನ್ ,ಗೋಪಾಲ ಯಂಪಳ್ಳಿ,ಮಹೆಮೂದ ಪಠಾಣ,ಸಲಾರ ಮಸೂದ್ ,ಅನ್ವರಶಾ,ಶಕೀಲ್ ಅಹ್ಮದ,ಸೀರಾಜ ನಾಮಜಗಿ,ಹಮೀದ ಮಿಯ್ಯ,ಅಕ್ಬರ್ ಅಲಿ,ತಯ್ಯಾಬ್ ಮೋಮಿನ ಅನೇಕರಿದ್ದರು.

> ಮಕ್ಕಳ ಚಿಂತನೆ ಮತ್ತು ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದ್ದು ಪ್ರತಿ ಮಗುವೂ ತನ್ನದೇ ಆದ ಪ್ರತಿಭೆ ಹೊಂದಿದ್ದು ಒಂದಲ್ಲಾ ಒಂದು ಕ್ಷೇತ್ರದಲ್ಲಿ ಮುಂದಿರುತ್ತದೆ. ರಾಜ್ಯದಾದ್ಯಂತ ನಡೆಯುವ ಈ ಕಾರ್ಯಕ್ರಮ ಮಕ್ಕಳ ಸೂಕ್ತ ಪ್ರತಿಭೆಯನ್ನು ಪ್ರದರ್ಶಿಸಲು ಸಹಕಾರಿಯಾಗಿದೆ ಇದರಿಂದ ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಸಹಕಾರಿ ಎಂದು ಹೇಳಿದರು.
>
> – ಸರಕಾರಿ ನೌಕರರ ಸಂಘದ ಅಧ್ಯಕ್ಷ ದೇವಿಂದ್ರಪ್ಪ ಹೋಳ್ಕರ್

# ವಿಷಮುಕ್ತ ಆಹಾರ ಉತ್ಪನ್ನಗಳಿಗೆ ಬೇಡಿಕೆ


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಬಸವನಬಾಗೇವಾಡಿ**

ವಿಷಮುಕ್ತ ಆಹಾರ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ಭಾರಿ ಬೇಡಿಕೆ ಇದೆ. ಹೀಗಾಗಿ ರೈತರು ಸಾವಯವ ಆಹಾರ ಧಾನ್ಯಗಳು ಹಾಗೂ ಕೃಷಿ ಉತ್ಪನ್ನಗಳನ್ನು ಬೆಳೆಯುವ ಮೂಲಕ ಆರ್ಥಿಕ ಸಬಲೀಕರಣ ಸಾಧಿಸುವಲ್ಲಿ ಗ್ರಾಮೀಣ ಯುವ ರೈತರು, ರೈತ ಮಹಿಳೆಯರು ಸಾಧನೆ ಮಾಡುವಂತೆ ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಕರೆ ನೀಡಿದರು. ಬುಧವಾರ ತಾಲ್ಲೂಕಿನ ಮನಗೂಳಿ ಗ್ರಾಮದ ರೆಡ್ಡಿ ಫಾರ್ಮನಲ್ಲಿ ಸಾವಯವ ಬೆಲ್ಲ ಉತ್ಪಾದನೆಯ ಆಲೇಮನೆ ಗಾಣಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು, ಸ್ವಾತಂತ್ರ್ಯ ನಂತರದ ಭಾರತದ ಗ್ರಾಮೀಣ ಉದ್ಯಮ ಗುಡಿ ಕೈಗಾರಿಕೆಯನ್ನೇ ಅವಲಂಬಿಸಿತ್ತು. ಹೀಗಾಗಿ ದೇಶದ ಗ್ರಾಮೀಣ ಅಭಿವೃದ್ಧಿಗೆ ಪೂರಕವಾಗಿರುವ ಗುಡಿ ಕೈಗಾರಿಕೆ ಅಭಿವೃದ್ಧಿಗೆ ಸಹಕಾರಿ ಕ್ಷೇತ್ರದ ಕೊಡುಗೆ ಅಪಾರವಾಗಿದೆ ಎಂದರು. ಮನಗೂಳಿಯಂಥ ಗ್ರಾಮೀಣ ಭಾಗದಲ್ಲಿ ಸಾವಯವ ಬೆಲ್ಲ ಉತ್ಪಾದನೆಗೆ ಮುಂದಾಗಿದ್ದಾರೆ. ಗ್ರಾಮೀಣ ಮಹಿಳೆಯೊಬ್ಬರು ಕೃಷಿ ಆಧಾರಿತ ಗುಡಿ ಕೈಗಾರಿಕೆ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವುದು ಶ್ಲಾಘನೀಯ ಹಾಗೂ ಜಿಲ್ಲೆಯ ಮಟ್ಟಿಗೆ ಅನುಕರಣೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಅಭಿನವ ಸಂಗನಬಸವ ಶ್ರೀಗಳು ಸಾನ್ನಿಧ್ಯವಹಿಸಿದ್ದರು. ಚಂದ್ರಶೇಖರಗೌಡ ಪಾಟೀಲ, ಸಂಯುಕ್ತ ಪಾಟೀಲ, ಐ.ಸಿ.ಪಟ್ಟಣಶೆಟ್ಟಿ, ಆರ್.ಎಸ್.ಪಾಟೀಲ ಕೂಚಬಾಳ, ಮುಖಂಡರಾದ ಪ್ರಭು ದೇಸಾಯಿ, ಸುರೇಶ ಹಾರಿವಾಳ, ಶಿವನಗೌಡ ಗುಜಗೊಂಡ, ಶಿವನಗೌಡ ಪಾಟೀಲ ಸೇರಿದಂತೆ ಇತರರು ವೇದಿಕೆ ಮೇಲೆ ಇದ್ದರು. ಅಶ್ವಿನಿ ಚಂದ್ರಶೇಖರ ರೆಡ್ಡಿ ಸ್ವಾಗತಿಸಿದರು. ಚಂದ್ರಶೇಖರ ರೆಡ್ಡಿ ನಿರೂಪಿಸಿದರು. ಭಾಗ್ಯರಾಜ ಸೊನ್ನದ ವಂದಿಸಿದರು.

# ಖಂಡ್ರೆ ಟೈಮ್ ಪಾಸ್ ವಿಸಿಟ್: ಖೂಬಾ ಟೀಕೆ

## ರೈತರ ಧರಣಿ ಸ್ಥಳಕ್ಕೆ ಮೂರು ದಿನಗಳ ಹಿಂದೆ ನಾನು ಹೋಗಿ ಬೆಂಬಲ ಸೂಚನೆ

**• ಉದಯವಾಹಿನಿ, ಬೀದರ್**


ಉದಯವಾಹಿನಿ ಚಿತ್ರ

**ನ್ಯಾಯಯುತ ಬೇಡಿಕೆ ಈಡೇರಿಸಿಲ್ಲ**

ಕಬ್ಬಿಗೆ ಬೆಲೆ ನಿಗದಿಪಡಿಸಬೇಕೆಂದು ರೈತರು ನಗರದಲ್ಲಿ ನಡೆಸುತ್ತಿರುವ ಅಹೋರಾತ್ರಿ, ಧರಣಿ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಭೇಟಿ ಕೊಟ್ಟು, ಅವರ ನ್ಯಾಯಯುತ ಬೇಡಿಕೆ ಈಡೇರಿಸಿಲ್ಲ. ಇಲ್ಲಸಲ್ಲದ ಹೇಳಿಕೆಗಳನ್ನು ಕೊಟ್ಟು, ಸಿಎಂ ಜೊತೆ ಚರ್ಚಿಸುತ್ತೇನೆ ಎಂದು ಹೇಳಿ ಟೈಮ್ ಪಾಸ್ ವಿಸಿಟ್ ಕೊಟ್ಟಿದ್ದಾರೆ ಎಂದು ಬಿಜೆಪಿ ಮುಖಂಡರೂ ಆದ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಟೀಕಿಸಿದ್ದಾರೆ. ರೈತರ ಧರಣಿ ಸ್ಥಳಕ್ಕೆ ಮೂರು ದಿನಗಳ ಹಿಂದೆ ನಾನು ಹೋಗಿ ಬೆಂಬಲ ಸೂಚಿಸಿದ್ದೆ. ಖಂಡ್ರೆ ರಾಜಕಾರಣದ ವಿರುದ್ಧ ಹರಿಹಾಯ್ದಿದ್ದಾರೆ. ಇದಾದ ಬಳಿಕ ಖಂಡ್ರೆ, ಧರಣಿ ಸ್ಥಳಕ್ಕೆ ಭೇಟಿ ಕೊಟ್ಟಿದ್ದಾರೆ. ಧರಣಿ ಸ್ಥಳದಲ್ಲಿ ಪೊಲೀಸ್ ಸರ್ಪಗಾವಲಿನಲ್ಲಿ ರೈತರೊಂದಿಗೆ ಸಭೆ ಮಾಡಿರುವುದು ಖಂಡನಾರ್ಹ. ಶಾಂತ ರೀತಿಯಿಂದ ಧರಣಿ ನಡೆಸುತ್ತಿರುವ ರೈತರ ಮುಂದೆ ಈಶ್ವರ ಖಂಡ್ರೆ, ಪೊಲೀಸ್ ಶಕ್ತಿ ತೋರಿಸಿದ್ದಾರೆ.

ಇದು ರೈತರನ್ನು ಅವಮಾನಿಸುವ, ಹೆದರಿಸುವ ತಂತ್ರ ಎಂದು ಹೊರಡಿಸಿರುವ ಪ್ರಕಟಣೆಯಲ್ಲಿ ಆರೋಪಿಸಿದ್ದಾರೆ. ರೈತ ಮಹಿಳೆ ಶೀಲಾತಾಯಿ ಹೊಳಸಮುದ್ರ ಅವರು 'ಮುಖ್ಯಮಂತ್ರಿಗಳೇ ಬೆಳಗಾವಿಯಲ್ಲಿ ಪ್ರತಿ ಟನ್ ಕಬ್ಬಿಗೆ 3,300 ನೀಡುವಂತೆ ಸೂಚಿಸಿದ್ದಾರೆ. ನಮಗೂ ಕೊಡಿಸಬೇಕು' ಎಂದು ಮನವಿ ಮಾಡಿದಾಗ. ನಿಮಗೆ ಗೌಂಡ್ ರಿಯಾಲಿಟಿ ಗೊತ್ತಿಲ್ಲಮ್ಮ ಎಂದು ಸಚಿವರು ಗದರಿ, ದರ್ಪ ತೋರಿದ್ದಾರೆ. ರೈತ ಮಹಿಳೆ ಕೇಳಿರುವುದರಲ್ಲಿ ತಪ್ಪೇನಿದೆ ಬೆಳಗಾವಿ ಏನು ಬೇರೆ ರಾಜ್ಯದಲ್ಲಿದೆಯಾ ಬೆಳಗಾವಿಗೊಂದು ನ್ಯಾಯ, ಬೀದರ್ ಜಿಲ್ಲೆಗೊಂದು ನ್ಯಾಯಾನಾ ಕೂಡಲೇ ಆ ರೈತ ಮಹಿಳೆಗೆ ಖಂಡ್ರೆ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಧರಣಿ 6ನೇ ದಿನಕ್ಕೆ ಪ್ರತಿ ಟನ್ ಕಬ್ಬಿಗೆ 3200 ದರ ನಿಗದಿಪಡಿಸಬೇಕೆಂದು ಆಗ್ರಹಿಸಿ ಬೀದರ್ ಜಿಲ್ಲಾ ಸಂಯುಕ್ತ ಕಿಸಾನ್ ಮೋರ್ಚಾ ನೇತೃತ್ವದಲ್ಲಿ ರೈತರು ಬೀದರ್‌ನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಸಮೀಪ ನಡೆಸುತ್ತಿರುವ ಅಹೋರಾತ್ರಿ, ಧರಣಿ ಸತ್ಯಾಗ್ರಹ ಮಂಗಳವಾರ ಆರನೇ ದಿನಕ್ಕೆ ಕಾಲಿರಿಸಿದೆ. ವಿವಿಧ ಭಾಗಗಳ ರೈತರು ಧರಣಿಯಲ್ಲಿ ಭಾಗವಹಿಸಿ ಬೆಂಬಲ ಸೂಚಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ ಅವರು ಧರಣಿ ಸ್ಥಳಕ್ಕೆ ಭೇಟಿ ಕೊಟ್ಟು ರೈತರ ಮನವೊಲಿಕೆಗೆ ಪ್ರಯತ್ನಿಸಿದರು. ಆದರೆ ರೈತರು ಬೇಡಿಕೆ ಈಡೇರಿಸುವ ತನಕ ಧರಣಿ ಕೈಬಿಡುವುದಿಲ್ಲ ಎಂದು ಹೇಳಿದ್ದರಿಂದ ಮಾತುಕತೆ ಫಲಪ್ರದವಾಗಿರಲಿಲ್ಲ.

> ಉಸ್ತುವಾರಿ ಸಚಿವರಾಗಿ ಈಶ್ವರ ಖಂಡ್ರೆ ಅವರು ಜವಾಬ್ದಾರಿಯಿಂದ ನುಣುಚಿಕೊಳ್ಳುವುದು ಬಿಡಬೇಕು. ಸ್ವಾರ್ಥ ಬದಿಗಿಟ್ಟು ರೈತರಿಗೆ ಅವರ ಬೇಡಿಕೆಯಂತೆ ಪ್ರತಿ ಟನ್ ಕಬ್ಬಿಗೆ ದರ ಕೊಡಿಸಬೇಕು. ಇಲ್ಲವಾದಲ್ಲಿ ಮುಂಬರುವ ದಿನಗಳಲ್ಲಿ ಇದೆ ರೈತರು ತಕ್ಕ ಪಾಠ ಕಲಿಸುತ್ತಾರೆ ಎಂದು ಎಚ್ಚರಿಸಿದ್ದಾರೆ.

# ವಿದ್ಯುತ್ ಅವಘಡ ಸಂಭವಿಸದಿರಲಿ: ಸಚಿವ ಈಶ್ವರ ಬಿ. ಖಂಡ್ರೆ

**• ಉದಯವಾಹಿನಿ, ಬೀದರ್**

ಗುಲ್ಬರ್ಗ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ ಜೆಸ್ಕಾಂ ಬೀದರ್ ಕಾರ್ಯ ಮತ್ತು ಪಾಲನಾ ವಿಭಾಗ ನೂತನ ಕಚೇರಿ ಕಟ್ಟಡ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ನಗರದಲ್ಲಿ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಖಂಡ್ರೆ, ಜಿಲ್ಲೆಯಲ್ಲಿ ಯಾವುದೇ ರೀತಿಯ ವಿದ್ಯುತ್ ಅವಘಡಗಳು ಆಗದ ರೀತಿಯಲ್ಲಿ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಜೆಸ್ಕಾಂ ಬೀದರ್ ವಿಭಾಗೀಯ ಹಳೆಯ ಕಚೇರಿ ಶಿಥಿಲಾವಸ್ಥೆಗೆ ತಲುಪಿರುವುದರಿಂದ ಸಾರ್ವಜನಿಕರು ಹಾಗೂ ಸಿಬ್ಬಂದಿಗೆ ಉಂಟಾಗುತ್ತಿದ್ದ ಅನಾನುಕೂಲ ನಿವಾರಿಸಲು ಸರ್ಕಾರ ರೂ.10 ಕೋಟಿ ವೆಚ್ಚದಲ್ಲಿ ನೂತನ ಕಚೇರಿ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ಈ ಕೆಲಸ ಕಾಲಮಿತಿಯಲ್ಲಿ ಹಾಗೂ ಗುಣಮಟ್ಟದ ಕಟ್ಟಡ ನಿರ್ಮಿಸಬೇಕೆಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ರೈತರಿಗೆ ಈಗಾಗಲೇ 7 ಗಂಟೆ ಗುಣಮಟ್ಟದ ವಿದ್ಯುತ್ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಬೆಳೆ ಬೆಳೆಯದ ಪ್ರದೇಶದಲ್ಲಿ ಸೌರವಿದ್ಯುತ್ ಸ್ಥಾಪಿಸಲು ಯೋಜನೆ ಹಾಕಿಕೊಂಡಿದ್ದು ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಸೌರ ವಿದ್ಯುತ್ ಉತ್ಪಾದಿಸಿ ಬೇರೆ ರಾಜ್ಯಗಳಿಗೆ ರಫ್ತು ಮಾಡುವ ಉದ್ದೇಶವಿದೆ ಎಂದರು. ಜೆಸ್ಕಾಂನಲ್ಲಿ ಈಗಾಗಲೇ ಸಿಬ್ಬಂದಿ ಕೊರತೆ ಇದೆ. ಅವುಗಳನ್ನು ಶೀಘ್ರ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯಲ್ಲಿ ಇನ್ನೂ 15 ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲು ಈಗಾಗಲೇ ಇಂಧನ ಸಚಿವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಪೌರಾಡಳಿತ ಸಚಿವ ರಹೀಂ ಖಾನ್ ಮಾತನಾಡಿ. ಜಿಲ್ಲೆಯಲ್ಲಿ ಅಭಿವೃದ್ಧಿಗೆ ಕಾಮಗಾರಿಗೆ ಎಲ್ಲರೂ ಒಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದ ತಿಳಿಸಿದರು.

ಕಾಡಾ ಅಧ್ಯಕ್ಷ ಬಾಬು ಹೊನ್ನಾ ನಾಯ್ಕ, ಕಲಬುರಗಿ ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಬೀದರ್ ಮಹಾನಗರ ಪಾಲಿಕೆ ಅಧ್ಯಕ್ಷ ಮುಹಮ್ಮದ್ ಗೌಸ್, ಜೆಸ್ಕಾಂ ಸೂಪರಿಟೆಂಡೆಂಟ್ ವೀರಭದ್ರಪ್ಪ ಸಾಲಿಮನಿ, ಕಾರ್ಯನಿರ್ವಾಹಕ ಎಂಜಿನಿಯರ್ ರಮೇಶ ಪಾಟೀಲ, ಜೆಸ್ಕಾಂ ವೃತ್ತ ಕಚೇರಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಆನಂದ್ ಎಮ್.ಪಾಂಚಾಳ ಹಾಜರಿದ್ದರು.

> ಶಾಸಕ ಡಾ. ಶೈಲೇಂದ್ರ ಕೆ.ಬೆಲ್ದಾಳೆ ಮಾತನಾಡಿ, ಟ್ರಾನ್ಸ್‌ಫಾರ್ಮರ್ ಇರುವ ಕಂಬಗಳಿಗೆ ತಂತಿ ಬೇಲಿ ಹಾಕುವ ಕಾರ್ಯ ಹೆಚ್ಚಿನ ರೀತಿಯಲ್ಲಿ ಆಗಬೇಕಾಗಿದೆ. ರೈತರಿಗೆ ಇನ್ನೂ ಹೆಚ್ಚಿನ ವಿದ್ಯುತ್ ನೀಡಿ ರೈತರಿಗೆ ಸಹಕಾರ ಸಿಗುವಂತಾಗಬೇಕು. ಎಂದರು.

# ಕುದುರೆ ಹಾವಳಿ: ರೈತರಿಗೆ ತೊಂದರೆ

**• ಉದಯವಾಹಿನಿ, ನಾಲತವಾಡ**

ಪಟ್ಟಣದ ಮುಖ್ಯ ರಸ್ತೆಗಳಲ್ಲಿ ಕುದುರೆಗಳ ಕಾಟ ಹೆಚ್ಚಾಗಿದ್ದು, ಸಂಚಾರಕ್ಕೆ ಸಮಸ್ಯೆಯಾಗಿದೆ. ಹಗಲಿನಲ್ಲಿ ರೈತರ ಹೊಲಗಳಿಗೆ ದಾಂಗುಡಿ ಇಡುವ ಕುದುರೆಗಳ ಹಿಂಡು, ಸಂಜೆ ಆಗುತ್ತಿದ್ದಂತೆ ರಸ್ತೆಗೆ ಅಡ್ಡಲಾಗಿ ಬರುತ್ತಿವೆ. ನಾಲತವಾಡ ಸುತ್ತಮುತ್ತಲ ಹೊಲಗಳು ಸೇರಿದಂತೆ ಸಮೀಪದ ಅರಸನಾಳ, ಆಲೊರ, ಕಸಾಪೂರ, ಮುರಾಳ, ನಾಗರಬೆಟ್ಟ, ವೀರೇಶನಗರ, ನಾಗಬೇನಾಳ, ಆರೇಶಂಕರ ಸೇರಿದಂತೆ ನದಿದಂಡೆ ಗ್ರಾಮ ಬಿಟ್ಟೂರ, ಲೊಟಗೇರಿ, ಘಾಳಪೂಜಿ ಸೇರಿ ವಿವಿಧೆಡೆ ಬೀಡಾಡಿ ಕುದುರೆಗಳು ಹಿಂಡು ಹಿಂಡಾಗಿ ಲಗ್ಗೆ ಹಾಕುತ್ತಿವೆ. ಇದರಿಂದ ಬೆಳೆಗಳಿಗೆ ರಕ್ಷಣೆ ಇಲ್ಲದಂತಾಗಿದ್ದು, ತೊಗರಿ ಕಾಳುಕಟ್ಟುವ ಹಂತದಲ್ಲಿ ಕುದುರೆಗಳ ಹಾವಳಿಗೆ ರೈತರು ಬೇಸತ್ತಿದ್ದಾರೆ.

ಬಿತ್ತಿದ ಬೆಳೆ ವಿಪರೀತ ಮಳೆಯಿಂದ ಈಗಾಗಲೇ ಹಾಳಾಗಿದೆ. ಉಳಿದ ಅಲ್ಪಸ್ವಲ್ಪ ಬೆಳೆಯನ್ನೂ ಕುದುರೆಗಳಿಂದ ಕಾಪಾಡಿಕೊಳ್ಳಲು ಆಗದ ಸ್ಥಿತಿ ನಿರ್ಮಾಣವಾಗಿದೆ' ಎನ್ನುತ್ತಾರೆ ರೈತ ನಿಂಗಪ್ಪ ಪೂಜಾರಿ. ಒಣ ಬೇಸಾಯದ ಬೆಳೆಗಳಾದ ತೊಗರಿ, ಹತ್ತಿ, ಸಜ್ಜೆ ಮೆಣಸಿನಕಾಯಿ,


ಉದಯವಾಹಿನಿ ಚಿತ್ರ


ಹಿಂಗಾರು ಜೋಳ, ಕಡಲೆ, ಗೋದಿ ಸೇರಿ ಹಿಂಗಾರು ಬೆಳೆಗಳನ್ನು ಕುದುರೆ ಹಿಂಡು ಹಾಳು ಮಾಡುತ್ತಿವೆ. ಒಂದೊಂದು ಗುಂಪಿನಲ್ಲಿ 20ರಿಂದ 30 ಕುದುರೆಗಳಿವೆ. ರೈತರು ಅವುಗಳನ್ನು ಓಡಿಸಿದರೂ ಒಬ್ಬರ ಹೊಲದಿಂದ ಮತ್ತೊಬ್ಬರ ಹೊಲಕ್ಕೆ ಲಗ್ಗೆ ಹಾಕುತ್ತಿವೆ. ಕಳೆದ ಎರಡು ತಿಂಗಳಿನಿಂದ ಬಿಡಾಡಿ ಕುದುರೆಗಳ ಹಾವಳಿಗೆ ರೈತರು ಬೆಳೆದ ಬೆಳೆಗಳನ್ನು ನಾಶ ಮಾಡುತ್ತಿದ್ದು, ಬೇಸತ್ತ ಬಹುತೇಕ ರೈತರು ಕುದುರೆಯನ್ನು ತಾವೇ ಸ್ವತಃ ಹಿಡಿದು ಕಟ್ಟಿ ಹಾಕಲು ಮುಂದಾದರೂ ಕೈಗೆ ಸಿಗುತ್ತಿಲ್ಲ. ಕುದುರೆ ಹಿಡಿಯುವಾಗ ಅನೇಕರು ಬಿದ್ದು, ಮತ್ತೆ ಕೆಲವರಿಗೆ ಕುದುರೆ ಕಚ್ಚಿ ಗಾಯಗಳಾಗಿವೆ.

# ನೀರಿನ ಕೊರತೆ, ರೋಗ ಭೀತಿ: ಉತ್ತರ ಕರ್ನಾಟಕದ ನಾಲ್ಕು ಜಿಲ್ಲೆಗಳ ಕೃಷಿ ಕಾರ್ಮಿಕರ ವಲಸೆ

**• ಉದಯವಾಹಿನಿ, ಕೊಪ್ಪಳ**

ಉತ್ತರ ಕರ್ನಾಟಕದ ನಾಲ್ಕು ಜಿಲ್ಲೆಗಳಾದ ಕೊಪ್ಪಳ, ರಾಯಚೂರು, ವಿಜಯನಗರ ಮತ್ತು ಬಳ್ಳಾರಿಗಳಲ್ಲಿ ಕೃಷಿ ಮತ್ತು ಅಕ್ಕಿ ಗಿರಣಿ ಕಾರ್ಮಿಕರ ವಲಸೆ ಹೆಚ್ಚಾಗುತ್ತಿದೆ. ನೀರಿನ ಸಮಸ್ಯೆ ಮತ್ತು ಭತ್ತದ ಬೆಳೆಗೆ ಬ್ಯಾಕ್ಟೀರಿಯಾದ ಕಾಯಿಲೆ ಬರುವ ಭೀತಿಯಿಂದಾಗಿ ಈ ಜಿಲ್ಲೆಗಳಲ್ಲಿ ಕೃಷಿ ಮತ್ತು ಅಕ್ಕಿ ಗಿರಣಿ ಕಾರ್ಮಿಕರ ವಲಸೆ ಹೆಚ್ಚಾಗುತ್ತಿದೆ ಎಂದು ವರದಿಯಾಗಿದೆ.

ಈ ಜಿಲ್ಲೆಗಳಲ್ಲಿ ಸುಮಾರು 300 ಅಕ್ಕಿ ಗಿರಣಿಗಳಿವೆ, ಸಾವಿರಾರು ಕಾರ್ಮಿಕರು ಇದ್ದಾರೆ. ಈ ಪ್ರದೇಶದಲ್ಲಿ ಸಾವಿರಾರು ಕೃಷಿ ಕಾರ್ಮಿಕರು ಗುತ್ತಿಗೆ ಪಡೆದ ಹೊಲಗಳಲ್ಲಿಯೂ ಭತ್ತ ಬೆಳೆಯುತ್ತಾರೆ. ತುಂಗಭದ್ರಾ ನದಿಯಲ್ಲಿ ನೀರಿನ ಕೊರತೆ ಮತ್ತು ದುಂಡಾನು (ಬ್ಯಾಕ್ಟೀರಿಯಾದ ಎಲೆ ರೋಗ) ರೋಗವು ಬೆಳೆಗಳಿಗೆ ಹಾನಿ ಮಾಡುವ ಭಯದಿಂದಾಗಿ ಜನರು ಈ ವರ್ಷ ಮಹಾರಾಷ್ಟ್ರ, ಗೋವಾ ಮತ್ತು ತೆಲಂಗಾಣದಂತಹ ರಾಜ್ಯಗಳಿಗೆ ವಲಸೆ ಹೋಗಬೇಕಾದ ಪರಿಸ್ಥಿತಿ ಬಂದಿದೆ. ಸರ್ಕಾರವು ಭತ್ತದ ಗದ್ದೆಗಳ ಮಾಲೀಕರಿಗೆ ಪರಿಹಾರ


ಉದಯವಾಹಿನಿ ಚಿತ್ರ

ನೀಡಲಿದ್ದರೂ, ಪರಿಸ್ಥಿತಿ ಹದಗೆಟ್ಟರೆ ಜಮೀನುಗಳನ್ನು ಗುತ್ತಿಗೆ ಪಡೆದ ಕಾರ್ಮಿಕರು ನಷ್ಟದ ಭೀತಿ ಎದುರಿಸುತ್ತಿದ್ದಾರೆ.

ಕೊಪ್ಪಳದ ಕೃಷಿ ವಿಜ್ಞಾನಿಗಳು ಜಿಲ್ಲೆಯಲ್ಲಿ ಸುಮಾರು 1,00,000 ಹೆಕ್ಟೇರ್ ಭೂಮಿ ಹೆಚ್ಚುವರಿ ರಸಗೊಬ್ಬರ ಬಳಕೆಯಿಂದಾಗಿ ಮಣ್ಣಿನ ಗುಣಮಟ್ಟವನ್ನು ಕಳೆದುಕೊಂಡಿದೆ ಎಂದು ಹೇಳಿದ್ದಾರೆ. ಇದು ಭತ್ತದ ರೈತರ ವಲಸೆಗೆ ಮತ್ತೊಂದು ಕಾರಣವಾಗಿದೆ.

ಕೊಪ್ಪಳದ ರೈತ ಮುಖಂಡರು ಭಾಗವಹಿಸಿದ್ದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ, ಅಣೆಕಟ್ಟು ರಚನೆಯ ರಕ್ಷಣೆ ಮುಖ್ಯವಾಗಿದ್ದು, ಎರಡನೇ ಬೆಳೆಗೆ ನೀರು ಪೂರೈಸಲು ಸಾಧ್ಯವಿಲ್ಲ ಎಂದು ನಿರ್ಧರಿಸಲಾಯಿತು. ಭತ್ತದ ಬೆಳೆಗಾರರು ಈ ನಿರ್ಧಾರವನ್ನು ಸ್ವಾಗತಿಸಿದರೂ, ಸಾವಿರಾರು ಜನರು ಉದ್ಯೋಗ ಅರಸಿ ಮಹಾನಗರಗಳು ಮತ್ತು ಇತರ ದೊಡ್ಡ ನಗರಗಳಿಗೆ ವಲಸೆ ಹೋಗುವಂತೆ ಆಗಿದೆ.

ಗಂಗಾವತಿಯ ಅಕ್ಕಿ ಗಿರಣಿ ಕಾರ್ಮಿಕ ಪರಶು ಮಾದಿನೂರು, ನೀರಿನ ಕೊರತೆಯು ಬೆಳೆ ಕೊರತೆಗೆ ಕಾರಣವಾಗುತ್ತದೆ. ಅಕ್ಕಿ ಗಿರಣಿಗಳಿಗೆ ಸಮಸ್ಯೆಯಾಗಿದೆ. ಇದರಿಂದ ಅಕ್ಕಿ ಗಿರಣಿ ಕಾರ್ಮಿಕರು ಮತ್ತು ಗುತ್ತಿಗೆ ಮೇಲೆ ಹೊಲಗಳನ್ನು ತೆಗೆದುಕೊಂಡ ಭತ್ತದ ಬೆಳೆಗಾರರು ಬೇರೆ ಸ್ಥಳಗಳಿಗೆ ವಲಸೆ ಹೋಗುತ್ತಿದ್ದಾರೆ. ದುಂಡಾಣು ಹುಳು ರೋಗವು ರೈತರಲ್ಲಿ ಭಯವನ್ನು ಹರಡುತ್ತಿದೆ ಎಂದು ಹೇಳಿದರು

# ಗದ್ದುಗೆ ಹಿಡಿಯಲು ಕಾಂಗ್ರೆಸ್ ಒಳಗೆ ಕಸರತ್ತು

## ಕೆಂಭಾವಿ ಪುರಸಭೆ ಅಧ್ಯಕ್ಷ ಸ್ಥಾನ: ಬಿಜೆಪಿಯ ಐವರು ಸದಸ್ಯರು ಕಾಂಗ್ರೆಸ್ ಸೇರ್ಪಡೆ

**• ಉದಯವಾಹಿನಿ, ಕೆಂಭಾವಿ**

ಅಧಿಕಾರ ಹಸ್ತಾಂತರದ ಒಳ ಒಪ್ಪಂದದ ಪಟ್ಟಣದ ಪುರಸಭೆಗೆ ತಟ್ಟಿದೆ. ಹಲವು ಅಡೆತಡೆಗಳನ್ನು ದಾಟಿದ್ದ 4ನೇ ವಾರ್ಡ್ ಕಾಂಗ್ರೆಸ್ ಸದಸ್ಯ ರಹಮಾನ್ ಪಟೇಲ್ ಯಲಗೋಡ ಅವರು ಪುರಸಭೆ ಅಧ್ಯಕ್ಷ ಗಾದಿಗೆ ಏರುವಲ್ಲಿ ಯಶಸ್ವಿಯಾಗಿದ್ದರು.

ಈಗ ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ. ಒಟ್ಟು 23 ಸದಸ್ಯ ಬಲದ ಪುರಸಭೆಯಲ್ಲಿ ಸ್ಪಷ್ಟ ಬಹುಮತ ಹೊಂದಿದ್ದರೂ ಬಿಜೆಪಿ ಅಧಿಕಾರದ ಚುಕ್ಕಾಣಿ ಹಿಡಿಯುವಲ್ಲಿ ವಿಫಲವಾಗಿತ್ತು. ಕಾಂಗ್ರೆಸ್ ಮುಖಂಡರು ಬೀಸಿದ ಬಲೆಯಲ್ಲಿ ಸಿಲುಕಿ, ಅಧಿಕಾರವನ್ನು ಕೈಚಲ್ಲಿದರು.

ಸದಸ್ಯರ ಸಂಖ್ಯಾ ಬಲದ ಕೊರತೆ ಇದ್ದರೂ ಒಬ್ಬ ಪಕ್ಷೇತರ ಸದಸ್ಯರ ಬೆಂಬಲ ಪಡೆದು ಪುರಸಭೆ ಗದ್ದುಗೆ ಏರುವ ಆಸೆಯು ಕಾಂಗ್ರೆಸ್‌ನಲ್ಲಿ ಮತ್ತೆ ಚಿಗುರಿತ್ತು.

ರಾಜಕೀಯ ದಾಳಗಳನ್ನು ಎಸೆಯುವ ಹಲವು ಪ್ರಹಸನಗಳು ನಡೆದಿದ್ದು, ಬಿಜೆಪಿಯ ಐವರು ಸದಸ್ಯರು ಅಧಿಕೃತವಾಗಿ ಕಾಂಗ್ರೆಸ್ ಕೈ ಹಿಡಿದಿದ್ದಾರೆ. ಮತ್ತೊಮ್ಮೆ ಕೈ ಪಡೆ ಅಧಿಕಾರದ ಗದ್ದುಗೆ ಏರಲು ತನ್ನೆಲ್ಲ ಪಟ್ಟುಗಳನ್ನು ಪ್ರಯೋಗಿಸಿದೆ. ಅಧಿಕಾರದ ಹಂಚಿಗೆ ಬಂದಿದ್ದರೂ 'ಕಮಲ' ಪಾಳೆಯಕ್ಕೆ ಗದ್ದುಗೆ ಹತ್ತಲು ಆಗುತ್ತಿಲ್ಲ.



ಉದಯವಾಹಿನಿ ಚಿತ್ರ

**ಸಂಖ್ಯಾ ಬಲದ ಕೊರತೆ**

ಪುರಸಭೆಗೆ ನಡೆದ ಚುನಾವಣೆಯಲ್ಲಿ ಬಿಜೆಪಿಯಿಂದ 13, ಕಾಂಗ್ರೆಸ್‌ನಿಂದ 8 ಹಾಗೂ ಇಬ್ಬರು ಪಕ್ಷೇತರ ಗೆಲುವು ಸಾಧಿಸಿದ್ದರು.

ಅಧ್ಯಕ್ಷ ಸ್ಥಾನಕ್ಕೆ ನಡೆದಿದ್ದ ಚುನಾವಣೆಯಲ್ಲಿ ಬಿಜೆಪಿಯ ಐವರು ಸದಸ್ಯರು ತಟಸ್ಥ ನಿಲುವು ತಳಿದಿದ್ದರು. ಇಬ್ಬರು ಪಕ್ಷೇತರ ಬೆಂಬಲದೊಂದಿಗೆ ಕಾಂಗ್ರೆಸ್‌ನ ಸದಸ್ಯರ ಬಲ 10ಕ್ಕೆ ಏರಿಕೆಯಾಗಿ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿತ್ತು. ಮೊದಲ 30 ತಿಂಗಳ ಅಧಿಕಾರಾದ ಅಧಿಯ ಅಧ್ಯಕ್ಷ ಸ್ಥಾನ ಬಿಸಿಎಗೆ ಮೀಸಲಾಗಿತ್ತು. ರಹಮಾನ್ ಪಟೇಲ್ ಅವರು ಕಳೆದ ಫೆಬ್ರವರಿ ತಿಂಗಳಲ್ಲಿ ಅಧ್ಯಕ್ಷ ಸ್ಥಾನ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದರು. ಪಕ್ಷದ ಆಂತರಿಕ ಅಧಿಕಾರದ ಒಳ ಒಪ್ಪಂದ ಅನ್ವಯ ಒಂಬತ್ತು ತಿಂಗಳ ನಂತರ ಈಗ ಅಧ್ಯಕ್ಷ ಹುದ್ದೆಗೆ ರಾಜೀನಾಮೆ ಸಲ್ಲಿಸಿದ್ದಾರೆ. ಕಾಂಗ್ರೆಸ್‌ನಲ್ಲಿ ತೀವ್ರ ಪೈಪೋಟಿ ಕಂಡು ಬರುವ ಲಕ್ಷಣಗಳು ಕಾಣಿಸುತ್ತಿವೆ. ಪುರಸಭೆ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಜಯಗಳಿಸಿದ ನಂತರ ಕಾಂಗ್ರೆಸ್‌ಗೆ ಬೆಂಬಲ ಸೂಚಿಸಿದ್ದ 11ನೇ ವಾರ್ಡನ್ ಪ್ರಿಯಾ ರಾಮನಗೌಡ ಅವರ ಹೆಸರು 2ನೇ ಅವಧಿಯ ಅಧ್ಯಕ್ಷ ಸ್ಥಾನಕ್ಕೆ ಕೇಳಿ ಬರುತ್ತಿದೆ. ಇದರ ಜೊತೆಗೆ ಬಿಜೆಪಿ ಪಕ್ಷದಿಂದ ಹಾರಿ ಬಂದಿದ್ದ ಕೆಲವು ಸದಸ್ಯರೂ ಅಧ್ಯಕ್ಷ ಸ್ಥಾನದ ಆಕಾಂಕ್ಷಿಗಳಾಗಿ ಇದ್ದಾರೆ ಎಂಬ ಮಾತುಗಳು ಸಹ ಇವೆ. ನ.25ರಂದು ಚುನಾವಣೆ ರಹೆಮಾನ್ ಪಟೇಲ್ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ನವೆಂಬರ್ 25ರಂದು ಚುನಾವಣೆ ನಿಗದಿ ಮಾಡಿ ಚುನಾವಣಾಧಿಕಾರಿಯೂ ಆದ ಉಪ ವಿಭಾಗಾಧಿಕಾರಿ ಶ್ರೀಧರ ಗೊಟೂರ ಆದೇಶ ಹೊರಡಿಸಿದ್ದಾರೆ. ಅಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 12ರವರೆಗೆ ನಾಮಪತ್ರ ಸಲ್ಲಿಕೆ ಮಧ್ಯಾಹ್ನ 12ರಿಂದ ನಾಮಪತ್ರ ಪರಿಶೀಲನೆ ನಡೆಯಲಿದೆ. ಒಂದಕ್ಕಿಂತ ಹೆಚ್ಚು ನಾಮಪತ್ರಗಳು ಸಲ್ಲಿಕೆಯಾದರೆ ಅದೇ ದಿನ ಚುನಾವಣೆಯನ್ನು ನಡೆಸಲಾಗುವುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

> ನಮ್ಮ ನಾಯಕರಾದ ಶರಣಬಸಪ್ಪ ದರ್ಶನಾಪುರ ಅವರ ತೀರ್ಮಾನವೆ ಅಂತಿಮವಾಗಿದೆ. ಪಕ್ಷ ಸೂಚಿಸಿದ ಹಿನ್ನೆಲೆಯಲ್ಲಿ ರಾಜೀನಾಮೆ ಸಲ್ಲಿಸಿದ್ದೇನೆ. ನನ್ನ ಸೇವಾ ಅವಧಿಯಲ್ಲಿ ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ ತೃಪ್ತಿ ಇದೆ.
>
> –ರಹಮಾನ್ ಪಟೇಲ್ ಯಲಗೋಡ ಪುರಸಭೆ ಅಧ್ಯಕ್ಷ

**ಜಿಲ್ಲಾ ಉಸ್ತುವಾರಿ ಸಚಿವರೆ ಹೈಕಮಾಂಡ್**

ಪುರಸಭೆ ಗದ್ದುಗೆ ಏರುವಲ್ಲಿ ಸ್ಥಳೀಯ ಕಾಂಗ್ರೆಸ್ ಪಕ್ಷದ ಮುಖಂಡರ ಹಲವು ಪ್ರಯತ್ನಗಳು ಮಾಡಿದ್ದರೂ ಪಕ್ಷ ಅಧಿಕಾರಕ್ಕೆ ತರುವಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರೇ ಹೈ ಕಮಾಂಡ್. ಪಕ್ಷ ಅಧಿಕಾರಕ್ಕೆ ತರುವಲ್ಲಿ ಪ್ರಯತ್ನಿಸಿದ್ದ ಸಚಿವರೇ ಅಧ್ಯಕ್ಷ ಚುನಾವಣೆಯ ಹಿಂದಿನ ಮಾಸ್ಟರ್ ಮೈಂಡ್ ಆಗಿದ್ದಾರೆ ಎನ್ನಲಾಗುತ್ತಿದೆ. 2ನೇ ಅವಧಿಯ ಅಧ್ಯಕ್ಷ ಸ್ಥಾನದ ಮುಂದಿನ ನಡೆ ತೀವ್ರ ಕುತೂಹಲ ಕೆರಳಿಸಿದೆ. ಮುಂದಿನ ಅವಧಿಯ ಅಧ್ಯಕ್ಷ ಗಾದಿಗೆ ಯಾರು ಹತ್ತುವರು ಎಂಬ ಕುತೂಹಲ ಸ್ಥಳೀಯರಲ್ಲಿ ಮೂಡಿದೆ.

# ಮಿನಿ ನ್ಯೂಸ್

## ಸಾಲು ಮರದ ತಿಮ್ಮಕ್ಕ ಅವರಿಗೆ ಭಾವಪೂರ್ವ ಶ್ರದ್ಧಾಂಜಲಿ


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ವನ್ಯಜೀವಿ ಅರಣ್ಯ ಇಲಾಖೆ ವಲಯದಿಂದ ಚಿಕ್ಕಲಿಂಗದಳ್ಳಿ ಗ್ರಾಮದಲ್ಲಿ ಪದ್ಮಶ್ರೀ ಪುರಸ್ಕೃತರು ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಅವರಿಗೆ ಭಾವಪೂರ್ವ ಶ್ರದ್ಧಾಂಜಲಿ ಸಲ್ಲಿಸಿ ಆತ್ಮಶಾಂತಿಗಾಗಿ ಮೌನಾಚರಣೆ ಸಲ್ಲಿಸಲಾಯಿತು. ತದನಂತರ ಸವಿನೆನಪಿಗಾಗಿ ಚಿಕ್ಕಲಿಂಗದಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಆಲದ ಮರ ಹಾಗೂ ಅರಳಿ ಮರ ನೆಡಲಾಯಿತು.

ಈ ಸಂದರ್ಭದಲ್ಲಿ ವನ್ಯಜೀವಿ ವಲಯ ಅರಣ್ಯಾಧಿಕಾರಿ ಸಂಜುಕುಮಾರ ಚವ್ಹಾಣ,ರಮೇಶ್ ರಾಠೋಡ್,ಮಲ್ಲಿಕಾರ್ಜುನ,ನರಸಿಂಹಮಲು, ಸುರೇಶ ರಾಠೋಡ್,ಗೋವಿಂದ,ಶಾದಿಪೂರ ಶಾಖೆಯ ಉಪ ವಲಯ ಅರಣ್ಯಾಧಿಕಾರಿ ಮದರಸಾಬ್, ಚಂದ್ರಂಪಲ್ಲಿ ಶಾಖೆಯ ಉಪ ವಲಯ ಅರಣ್ಯ ಅಧಿಕಾರಿ ಸಿದ್ಧಾರೂಢ ಹೊಕ್ಕುಂಡಿ ಗಸ್ತು ಅರಣ್ಯ ಪಾಲಕ ಹಾಲೇಶ ಕೋರವಾರ ಅನೇಕರಿದ್ದರು

## ಸಿಂಧನೂರು ಮರಳು ಅಕ್ರಮ ಸಾಗಣೆ: ಟಿಪ್ಪರ್ ವಶಕ್ಕೆ

**• ಉದಯವಾಹಿನಿ, ಸಿಂಧನೂರು**

ತಾಲ್ಲೂಕಿನ ತುರ್ವಿಹಾಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಂಬರ್ ಪ್ಲೇಟ್ ಇಲ್ಲದೆ ಮರಳು ಅಕ್ರಮವಾಗಿ ಸಾಗಿಸುತ್ತಿದ್ದ ಮೂರು ಟಿಪ್ಪರ್ ಲಾರಿಗಳನ್ನು ಪೊಲೀಸರು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ನವಲಿ ಗ್ರಾಮದಿಂದ ಉಮಲೂಟಿ ಮೂಲಕ ಮರಳನ್ನು ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಖಚಿತ ಮಾಹಿತಿಯ ಮೇರೆಗೆ ತುರ್ವಿಹಾಳ ಪೊಲೀಸರು ದಾಳಿ ನಡೆಸಿದ್ದಾರೆ. ಚಾಲಕರು ಲಾರಿಗಳನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಈ ಟಿಪ್ಪರ್ ಲಾರಿಗಳು ಸೋಮಲಿಂಗ, ರಜಾಕ್, ಅನಿಲಕುಮಾರ ಎನ್ನುವವರಿಗೆ ಸೇರಿವೆ ಎಂದು ತಿಳಿದು ಬಂದಿದೆ.

## ಭೂ ವಂಚಿತರಾಗುತ್ತಿರುವ ರೈತ ಸಮುದಾಯ

**• ಉದಯವಾಹಿನಿ, ಜಗಳೂರು**

ಪವನ ವಿದ್ಯುತ್ (ವಿಂಡ್ ಮಿಲ್) ಮತ್ತು ಸೌರ ವಿದ್ಯುತ್ ಕಂಪನಿಗಳ ಭೂ ಮಾಫಿಯಾದಿಂದ ರೈತರು ಜಮೀನುಗಳನ್ನು ಕಳೆದುಕೊಂಡು ದಿವಾಳಿ ಸ್ಥಿತಿಗೆ ತಲುಪಿದ್ದಾರೆ ಎಂದು ಸಿಪಿಐ ಜಿಲ್ಲಾ ಘಟಕದ ಸಹ ಕಾರ್ಯದರ್ಶಿ ಆವರಗೆರೆ ಉಮೇಶ್ ಆರೋಪಿಸಿದರು. ಪಟ್ಟಣದಲ್ಲಿ ಭಾರತೀಯ ಕಮ್ಯುನಿಸ್ಟ್ ಪಕ್ಷದ ಕಾರ್ಯಕರ್ತರು ಮಹಾತ್ಮಗಾಂಧಿ ವೃತ್ತದ ಬಳಿ ಪ್ರತಿಭಟನೆ ನಡೆಸಿದರು. ರಾಜ್ಯದಲ್ಲಿ ಸೌರ ವಿದ್ಯುತ್ ಮತ್ತು ಪವನ ವಿದ್ಯುತ್ ಕಂಪನಿಗಳು ರೈತರ ಜಮೀನುಗಳನ್ನು ಕಬಳಿಸುತ್ತಿವೆ. ಕೇಂದ್ರ, ಸರ್ಕಾರ ರೈತರು, ಕಾರ್ಮಿಕರು, ದಲಿತರ ಹಕ್ಕುಗಳನ್ನು ದಮನ ಮಾಡುವ ಹುನ್ನಾರ ನಡೆಸುತ್ತಿದೆ. ಮೆಕ್ಕೆಜೋಳಕ್ಕೆ ಬೆಂಬಲ ಬೆಲೆಯಿಲ್ಲ. ದಲ್ಲಾಳಿಗಳು ಕ್ವಿಂಟಲ್‌ಗೆ ರೂ.1,500 ರಿಂದ ರೂ. 1,700 ದರಕ್ಕೆ ಖರೀದಿಸುತ್ತಿದ್ದಾರೆ ಎಂದು ಆರೋಪಿಸಿದರು. ದೇಶದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ, ಅತ್ಯಾಚಾರ ಪ್ರಕರಣಗಳು ಕೊನೆಯಾಗಬೇಕು. ಮಹಿಳೆಯರಿಗೆ ಎಲ್ಲಾ ವಲಯಗಳಲ್ಲೂ ಸಮಾನ ಅವಕಾಶ ಮತ್ತು ಹಕ್ಕುಗಳಿಗಾಗಿ ನಿರಂತರ ಹೋರಾಟ ಅನಿವಾರ್ಯ ಎಂದು ಎನ್‌ಎಫ್‌ಐಡಬ್ಲ್ಯೂ ಸಂಘಟನೆ ತಾಲ್ಲೂಕು ಅಧ್ಯಕ್ಷ ಬೊಮ್ಮಕ್ಕ ಹೇಳಿದರು. ಪ್ರತಿ ವರ್ಷ ಸರ್ಕಾರಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯಬೇಕು. ಖಾಸಗಿವಲಯದ ಉದ್ಯೋಗಿಗಳಿಗೂ ಸಾಮಾಜಿಕ, ಆರ್ಥಿಕ ಭದ್ರತೆ ಒದಗಿಸಬೇಕು ಎಂದು ಸಿಪಿಐ ತಾಲ್ಲೂಕು ಘಟಕದ ಕಾರ್ಯದರ್ಶಿ ಮಾದಿಹಳ್ಳಿ ಮಂಜುನಾಥ್ ಒತ್ತಾಯಿಸಿದರು.

## ನಾಲೆ ಸೇವಾರಸ್ತೆ ನಿರ್ಮಾಣಕ್ಕೆ ಮುಂದಾದ ರೈತರು


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಮಲೇಬೆನ್ನೂರು**

ಸರ್ಕಾರ ಮಾಡಬೇಕಾದ ಕೆಲಸ ವಿಳಂಬವಾದ ಕಾರಣ, 9ಎ ಭದ್ರಾ ಉಪನಾಲೆ ಸೇವಾರಸ್ತೆಯ ನಿರ್ಮಾಣ ಕಾರ್ಯವನ್ನು ರೈತರೇ ಒಗ್ಗೂಡಿ ಆರಂಭಿಸಿ ಮಾದರಿಯಾಗಿದ್ದಾರೆ. ಈ ರಸ್ತೆಯು ಹರಿಹರ ತಾಲ್ಲೂಕಿನ ವ್ಯಾಪ್ತಿಯಲ್ಲಿದ್ದು, ಜಲ ಸಂಪನ್ಮೂಲ ಇಲಾಖೆಯ ಬಸವಾಪಟ್ಟಣ ಉಪವಿಭಾಗದ ಸರಹದ್ದಿನಲ್ಲಿದೆ. 2 ವರ್ಷದಿಂದ ಹಾಳಾಗಿರುವ ಈ ರಸ್ತೆಯನ್ನು ಸರಿಪಡಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿರಲಿಲ್ಲ. ಕಾಡಾ ಅನುದಾನ ಪ್ರಕೃತಿ ವಿಕೋಪ ನಿಧಿ, ವಿವಿಧ ಯೋಜನೆಗಳ ಅನುದಾನದ ಅಡಿಯಲ್ಲಿ ರಸ್ತೆ ನಿರ್ಮಿಸಲು ಕೋರಿದರೂ, ಹಣ ಮಂಜೂರಾಗಿಲ್ಲ ಎಂದು ರೈತ. ಪುರಸಭೆ ಸದಸ್ಯ ರೇವಣಸಿದ್ದೇಶ್ ಬೇಸರ ವ್ಯಕ್ತಪಡಿಸಿದರು.

'ಕಳೆದ ಬಾರಿ ಭತ್ತದ ಕಟಾವು ಯಂತ್ರ, ಟ್ರ್ಯಾಕ್ಟರ್, ದ್ವಿಚಕ್ರವಾಹನಗಳ ಸಂಚಾರ ಈ ರಸ್ತೆಯಲ್ಲಿ ಕಷ್ಟವಾಗಿತು. ಈ ಬಾರಿಯ ಮುಂಗಾರು ಹಂಗಾಮಿನಲ್ಲಿ ಅಧಿಕ ಮಳೆ ಸುರಿದ ಕಾರಣ ರಸ್ತೆ ಸಂಪೂರ್ಣ ಹಾಳಾಗಿಹೋಯಿತು. ನೂರಾರು ಎಕರೆ ಪ್ರದೇಶದಲ್ಲಿ ಬೆಳೆದ ಭತ್ತವು ಕಟಾವಿಗೆ ಬಂದಿದ್ದು, ಸಾಗಣೆ ಮಾಡಲು ಕಷ್ಟವಾಗಿದೆ. ಹೀಗಾಗಿ ಸಮಾನ ಮನಸ್ಕ ರೈತರು ಒಗ್ಗೂಡಿ ಹಣ ಸಂಗ್ರಹಿಸಿ ರಸ್ತೆಯ ಹೊಂಡ, ಗುಂಡಿಗಳನ್ನು ಮುಚ್ಚಿ, ಜರಗು ತುಂಬಲು ನಿರ್ಧರಿಸಿ ಕಾಮಗಾರಿ ಪ್ರಾರಂಭಿಸಿದೆವು' ಎಂದು ರೈತರಾದ ಜಯಣ್ಣ, ಮಂಜುನಾಥ್, ಕುಮಾರ್ ಒದೋಗೌಡ್ರ, ರಮೇಶ್ ಹೊಸಳ್ಳಿ ಕರಿಬಸಣ್ಣ ಮಾಹಿತಿ ನೀಡಿದರು.

## ಮಿನಿ ನ್ಯೂಸ್

# ಏರ್ ಶೋನಲ್ಲಿ ತೇಜಸ್ ಶೋ ಸ್ಟಾಫರ್ ಪ್ರದರ್ಶನಕ್ಕೆ ನೆಟ್ಟಿಗರು ಫಿದಾ

**ದುಬೈ:** ನವೆಂಬರ್ 17–18ರಂದು ದುಬೈನಲ್ಲಿ ನಡೆದ ಈ ಪ್ರತಿಷ್ಠಿತ ದುಬೈ ಏರ್ ಶೋ 2025ರಲ್ಲಿ ಹಲವು ದೇಶಗಳ ಫೈಟರ್ ಜೆಟ್‌ಗಳು ತಮ್ಮ ಬಲ ಪ್ರದರ್ಶನ ಮಾಡಿವೆ. ಆದರೆ ಈವೆಲ್ಲದರ ಮಧ್ಯೆ ಭಾರತದ ತೇಜಸ್ ಫೈಟರ್ ಜೆಟ್ ತನ್ನ ಅದ್ಭುತ ಪ್ರದರ್ಶನದಿಂದ ಎಲ್ಲರ ಗಮನ ಸೆಳೆಯುವ ಮೂಲಕ ಶೋ ಸ್ಟಾಫರ್ ಆಗಿದೆ.

**ದುಬೈ ಏರ್ ಶೋನಲ್ಲಿ ಭಾರತದ ತೇಜಸ್ MK- 2 LAC ಕಮಾಲ್:** ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಅಭಿವೃದ್ಧಿಪಡಿಸಿದ ತೇಜಸ್ MK- 2 ಲೈಟ್ ಕಾಂಬ್ಯಾಟ್ ಏರ್‌ಕ್ರಾಫ್ಟ್‌ನ ಮಾದರಿಯನ್ನು ಪ್ರದರ್ಶಿಸಲಾಯಿತು. ಭಾರತೀಯ ವಾಯುಪಡೆಯ ಸೂರ್ಯಕಿರಣ್ ಏರೋಬ್ಯಾಟಿಕ್ ತಂಡದೊಂದಿಗೆ ತೇಜಸ್ ಜೆಟ್ ಕೂಡ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರೀ ಮೆಚ್ಚುಗೆಗೆ ಪಾತ್ರವಾಗಿದ್ದು, ಈ ಪ್ರದರ್ಶನವು ಭಾರತದ ವೈಮಾನಿಕ ಸಾಮರ್ಥ್ಯವನ್ನು ಜಾಗತಿಕ ಮಟ್ಟದಲ್ಲಿ ಎತ್ತಿ ತೋರಿಸಿದೆ.

**ಸಾಮಾಜಿಕ ಜಾಲತಾಣದಲ್ಲಿ ಮೋಡಿ ಮಾಡಿದ ತೇಜಸ್ LAC:** ದುಬೈ ಏರ್ ಶೋ 2025, ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ನಡೆದಿದ್ದು, ಈ ಕಾರ್ಯಕ್ರಮದಲ್ಲಿ ಭಾರತದ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಅವರು ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದರು. ಭಾರತೀಯ ವಾಯುಪಡೆಯ ಸೂರ್ಯಕಿರಣ್ ಏರೋಬ್ಯಾಟಿಕ್ ತಂಡ ಮತ್ತು ತೇಜಸ್ LAC, ನವೆಂಬರ್ 15, 2025 ರ ಶನಿವಾರದಂದು ಅಲ್ ಮಕ್ತೌಮ್ ಏರ್‌ಬೇಸ್‌ಗೆ ಆಗಮಿಸಿದ್ದವು. ಈ ಜೆಟ್‌ನ ವೈಮಾನಿಕ ಕಸರತ್ತುಗಳ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಭಾರೀ ಜನಪ್ರಿಯತೆ ಗಳಿಸಿದೆ. ತೇಜಸ್ ಫೈಟರ್ ಜೆಟ್, ತನ್ನ ವೈಮಾನಿಕ ಕಸರತ್ತುಗಳ ಮೂಲಕ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿತ್ತು. ಆಕಾಶದಲ್ಲಿ ಲೂಪ್, ವರ್ಟಿಕಲ್ ಚಾರ್ಲಿ, ಬ್ಯಾರೆಲ್ ರೋಲ್‌ಗಳಂತಹ ಸಂಕೀರ್ಣ ವಿನ್ಯಾಸಗಳನ್ನು ಪ್ರದರ್ಶಿಸುವ ಮೂಲಕ ತನ್ನ ಚುರುಕುತನ, ಸಾಮರ್ಥ್ಯವನ್ನು ಅಂತಾರಾಷ್ಟ್ರೀಯ ಪ್ರೇಕ್ಷಕರಿಗೆ ತೋರಿಸಿದೆ. ನೆಲದ ಮೇಲೆಯೂ, ಅದರ ಸ್ಥಿರ ಪ್ರದರ್ಶನವು ಛಾಯಾಚಿತ್ರಗಳನ್ನು ಕ್ಲಿಕ್ಕಿಸಲು ಮತ್ತು ವಿಮಾನವನ್ನು ಹತ್ತಿರದಿಂದ ನೋಡಲು ಉತ್ಸುಕರಾಗಿದ್ದ ಪ್ರೇಕ್ಷಕರನ್ನು ಆಕರ್ಷಿಸಿತು. ಈ ಪ್ರದರ್ಶನವು, ಪಾಕಿಸ್ತಾನದ ವಿರುದ್ಧ ಆಪರೇಷನ್ ಸಿಂಧೂರ್‌ನಲ್ಲಿ ಭಾರತದ ವಿಜಯಕ್ಕೆ ಕಾರಣವಾದ ವಿಮಾನವನ್ನು ನೋಡುವ ಅವಕಾಶವನ್ನು ಪ್ರೇಕ್ಷಕರಿಗೆ ನೀಡಿದೆ. ತೇಜಸ್‌ನ ವೈಮಾನಿಕ ಮತ್ತು ನೆಲದ ಮೇಲಿನ ಪ್ರಬಲ ಉಪಸ್ಥಿತಿಯು, ಈ ವರ್ಷದ ಜಾಗತಿಕ ವೈಮಾನಿಕ ಪ್ರದರ್ಶನದಲ್ಲಿ ಭಾರತದ ಪ್ರಭಾವವನ್ನು ಇನ್ನಷ್ಟು ಬಲಪಡಿಸಿದೆ.

**ಭಾರತದ ವಿಜಯಕ್ಕೆ ಕಾರಣ**



**ದ್ವಿವಾರ್ಷಿಕವಾಗಿ ನಡೆಯುವ ದುಬೈ ಏರ್ ಶೋ:** ದುಬೈ ಏರ್‌ಶೋ, ದ್ವಿವಾರ್ಷಿಕವಾಗಿ ನಡೆಯುವ ಒಂದು ಪ್ರತಿಷ್ಠಿತ ಕಾರ್ಯಕ್ರಮವಾಗಿದೆ. ಈ ಬಾರಿ 1500ಕ್ಕೂ ಹೆಚ್ಚು ಪ್ರದರ್ಶಕರು, 150 ದೇಶಗಳ 148,000 ಕ್ಕೂ ಹೆಚ್ಚು ಉದ್ಯಮಿಗಳು ಭಾಗವಹಿಸಿದ್ದರು.


### ಅಂತಾರಾಷ್ಟ್ರೀಯ ಮಟ್ಟದಲ್ಲಿ ಮೆಚ್ಚುಗೆ

**ಈ ವರ್ಷದ ಆವೃತ್ತಿಯಲ್ಲಿ ಬೊಂಬಾರ್ಡಿಯರ್, ಡಸಾಲ್ಟ್ ಏವಿಯೇಷನ್, ಎಮ್ಬ್ರೇರ್, ಥೇಲ್ಸ್, ಏರ್‌ಬಸ್, ಲಾಕ್‌ಹೀಡ್ ಮಾರ್ಟಿನ್, ಕ್ಯಾಲಿಡಸ್‌ನಂತಹ ಪ್ರಮುಖ ಜಾಗತಿಕ ಏರೋಸ್ಪೇಸ್ ಕಂಪನಿಗಳು ತಮ್ಮ ಉಪಸ್ಥಿತಿಯನ್ನು ತೋರಿದ್ದವು. ಈ ಎಲ್ಲಾ ಕಂಪನಿಗಳ ನಡುವೆಯೂ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಪ್ರದರ್ಶಿಸಿದ ತೇಜಸ್ MK- 2 ಲೈಟ್ ಕಾಂಬ್ಯಾಟ್ ಏರ್‌ಕ್ರಾಫ್ಟ್‌ನ ಮಾದರಿಯು, ಪ್ರದರ್ಶನದ ಆರಂಭದಿಂದಲೇ ಎಲ್ಲರ ಗಮನ ಸೆಳೆದಿದೆ. ಇದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರೀ ಮೆಚ್ಚುಗೆಗೆ ಪಾತ್ರವಾಗಿದೆ.**

## ಆಂಧ್ರಪ್ರದೇಶದಲ್ಲಿ ಮುಂದುವರೆದ ಕಾರ್ಯಾಚರಣೆ: 7 ನಕ್ಸಲರ ಹತ್ಯೆ

**ಅಮರಾವತಿ:** ಆಂಧ್ರಪ್ರದೇಶದ ಮಾರೆಡುಮಿಲ್ಲಿಯಲ್ಲಿ ನಕ್ಸಲ್ ಹತ್ಯಾ ಕಾರ್ಯಾಚರಣೆ ಮುಂದುವರೆದಿದೆ. ನಿನ್ನೆಯಿಂದ ನಿರಂತರವಾಗಿ ನಡೆಸಲಾಗುತ್ತಿರುವ ಈ ಕಾರ್ಯಾಚರಣೆಯಲ್ಲಿ ಇದುವರೆಗೂ 7 ನಕ್ಸಲರನ್ನು ಹತ್ಯೆ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ನಿನ್ನೆಯ ಕಾರ್ಯಾಚರಣೆಯು ಮುಂದುವರಿದಿದ್ದು, ಇಲ್ಲಿಯವರೆಗೆ ಏಳು ಮಾವೋವಾದಿಗಳು ಸಾವನ್ನಪ್ಪಿದ್ದಾರೆ ಎಂದು ಎಪಿ ಗುಪ್ತಚರ ಎಡಿಜಿ ಮಹೇಶ್ ಚಂದ್ರ ಲಡ್ಡಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಗುರುತಿನ ಪ್ರಕ್ರಿಯೆ ನಡೆಯುತ್ತಿರುವಾಗಲೂ ಸತ್ತವರಲ್ಲಿ ಮೂವರು ಮಹಿಳಾ ಮಾವೋವಾದಿಗಳು ಸೇರಿದ್ದಾರೆ ಎಂದು ಅವರು ಹೇಳಿದ್ದಾರೆ. ಒಬ್ಬ ವ್ಯಕ್ತಿಯನ್ನು ಮೇತುರಿ ಜೋಖಾ ರಾವ್ ಅಲಿಯಾಸ್ ಶಂಕರ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು. ಶ್ರೀಕಾಕುಲಂ ಮೂಲದ ಶಂಕರ್ ಆಂಧ್ರ, ಒಡಿಶಾ ಗಡಿಯ ಉಸ್ತುವಾರಿ ಆಗಿದ್ದರು ಮತ್ತು ತಾಂತ್ರಿಕ ವಿಷಯಗಳು, ಶಸ್ತ್ರಾಸ್ತ್ರ ತಯಾರಿಕೆ, ಸಂವಹನದಲ್ಲಿ ಪರಿಣತಿ ಹೊಂದಿದ್ದರು ಎಂದು ಪ್ರಾಥಮಿಕ ಮಾಹಿತಿಯ ಆಧಾರದ ಮೇಲೆ ಅಧಿಕಾರಿ ತಿಳಿಸಿದ್ದಾರೆ.

## ಕೆಂಪು ಕೋಟೆ ಸ್ಫೋಟಕ್ಕೂ ಮುನ್ನ ತಮ್ಮನಿಗೆ ತನ್ನ ಮೊಬೈಲ್ ನೀಡಿದ್ದ ಉಗ್ರ ಉಮರ್



**ನವದೆಹಲಿ:** ಕೆಂಪು ಕೋಟೆ ಸಮೀಪ ಉಗ್ರ ಉಮರ್ ಕಾರ್ ಸ್ಫೋಟಿಸಿಕೊಳ್ಳುವ ಒಂದು ವಾರದ ಮೊದಲು ಆತ ಪುಲ್ವಾಮಾದಲ್ಲಿರುವ ತನ್ನ ಮನೆಗೆ ಹೋಗಿ ಬಂದಿದ್ದ ಎನ್ನುವ ವಿಷಯ ಇದೀಗ ಬಹಿರಂಗಗೊಂಡಿದೆ. ದಾಳಿ ನಡೆಸುವುದಕ್ಕೆ ಒಂದು ವಾರ ಮೊದಲು ಉಗ್ರ ಉಮರ್ ಪುಲ್ವಾಮಾನದಲ್ಲಿರುವ ತನ್ನ ಮನೆಗೆ ಹೋಗಿದ್ದ, ತನ್ನ ಮೊಬೈಲ್ ಅನ್ನು ಸಹೋದರನಿಗೆ ಕೊಟ್ಟು ಬಂದಿದ್ದ ಎನ್ನುವ ಮಾಹಿತಿ ಸಿಕ್ಕಿದೆ. ಉಮರ್‌ನಿಂದ ಫೋನ್ ಪಡೆದಿದ್ದ ಆತನ ಸಹೋದರ ಜಹೂರ್ ಇಲಾಹಿಯನ್ನು ಬಂಧಿಸಿ ವಿಚಾರಣೆ ನಡೆಸಲಾಗಿದೆ. ಅಕ್ಟೋಬರ್ 26 ಹಾಗೂ 29ರ ನಡುವೆ ಉಮರ್ ತನ್ನ ಫೋನ್ ನೀಡಿದ್ದಾಗಿ ಜಹೂರ್ ಹೇಳಿದ್ದಾರೆ. ತನ್ನ ಬಗ್ಗೆ ಏನಾದರೂ ಸುದ್ದಿ ಬಂದರೆ ಆ ಫೋನ್ ಅನ್ನು ನೀರಿಗೆ ಎಸೆಯುವಂತೆ ನನಗೆ ಉಮರ್ ಹೇಳಿದ್ದ. ನವೆಂಬರ್ 9ರಂದು ಅಲ್ ಫಲಾಹಾ ವಿಶ್ವವಿದ್ಯಾಲಯದಲ್ಲಿ ಉಮರ್ ತನ್ನ ಒಡನಾಡಿ ಬಂಧನದ ಸುದ್ದಿಯನ್ನು ಕೇಳಿದಾಗ ಜಹೂರ್ ಭಯಗೊಂಡು ಆ ಮೊಬೈಲ್ ಅನ್ನು ತನ್ನ ಮನೆ ಬಳಿಯ ಕೊಳಕ್ಕೆ ಎಸೆದಿದ್ದೇ ಎಂದು ಆತ ಹೇಳಿಕೊಂಡಿದ್ದಾನೆ.


ತನಿಖಾ ಸಂಸ್ಥೆಗಳು ಉಮರ್‌ನ 2 ಫೋನ್‌ಗಳನ್ನು ಪತ್ತೆಹಚ್ಚಲು ಪ್ರಯತ್ನಿಸಿದಾಗ, ಅವು ಸ್ವಿಚ್ ಆಫ್ ಆಗಿದ್ದವು. ಒಂದು ಫೋನ್‌ನ ಕೊನೆಯ ಸ್ಥಳ ದೆಹಲಿಯಲ್ಲಿ ಮತ್ತು ಇನ್ನೊಂದು ಫೋನ್ ಪುಲ್ವಾಮಾದಲ್ಲಿತ್ತು. ಜಮ್ಮು, ಕಾಶ್ಮೀರ ಪೊಲೀಸರು ಜಹೂರ್‌ನನ್ನು ವಿಚಾರಣೆ ನಡೆಸುತ್ತಿರುವಾಗ, ದೆಹಲಿಯಲ್ಲಿ ಆತ್ಮಹತ್ಯಾ ದಾಳಿ ಸಂಭವಿಸಿದೆ. ಸ್ವಲ್ಪ ಸಮಯದ ನಂತರ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಯಿತು. ನೀರಿನಲ್ಲಿ ಫೋನ್ ಮುಳುಗಿದ್ದರಿಂದ ಹಾನಿಗೊಳಗಾಗಿತ್ತು, ಅದರ ಮದರ್‌ಬೋರ್ಡ್ ಕೂಡ ಅಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿತ್ತು. ಕೆಲವು ದಿನಗಳ ನಂತರ ಉಮರ್ ಆತಹತ್ಯಾ ದಾಳಿ ಕುರಿತಂತೆ ಮಾಡಿಕೊಂಡಿದ್ದ ವಿಡಿಯೋ ಬಹಿರಂಗಗೊಂಡಿತ್ತು. ಕೆಂಪು ಕೋಟೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ ಎಂಟು ಜನರನ್ನು ಬಂಧಿಸಲಾಗಿದ್ದು, ಅವರಲ್ಲಿ ಐದು ಮಂದಿ ವೈದ್ಯರಾಗಿದ್ದಾರೆ. ತನಿಖಾ ಸಂಸ್ಥೆಗಳು ಹೇಳುವಂತೆ ಡಾ. ಉಮರ್ ತನ್ನಂತೆಯೇ ಹೆಚ್ಚಿನ ಆತ್ಮಹತ್ಯಾ ಬಾಂಬರ್‌ಗಳಿಗೆ ತರಬೇತಿ ನೀಡುತ್ತಿದ್ದ. ಯುವಕರಿಗೆ ಈ ಕುರಿತು ಪ್ರೇರಣೆ ನೀಡುವ ವಿಡಿಯೋಗಳನ್ನು ಮಾಡಿ ಬ್ರೈನ್‌ವಾಶ್ ಮಾಡಲು ಯತ್ನಿಸುತ್ತಿದ್ದ ಎಂದ ಎನ್‌ಐಎ ಮೂಲಗಳು ತಿಳಿಸಿವೆ.

### ನಿತೀಶ್ ಕುಮಾರ್ 10ನೇ ಬಾರಿ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸುವ ಪ್ರಕ್ರಿಯೆ ಆರಂಭ

# ನಿತೀಶ್ ಕುಮಾರ್ ಸಿಎಂ ಸ್ಥಾನಕ್ಕೆ ರಾಜೀನಾಮೆ

**ಪಾಟ್ನಾ:** ಬಿಹಾರದಲ್ಲಿ ನಿತೀಶ್ ಕುಮಾರ್ ಅವರು ಬುಧವಾರ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ. ಇದರೊಂದಿಗೆ ಅವರು ದಾಖಲೆಯ 10ನೇ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ಪ್ರಕ್ರಿಯೆ ಆರಂಭವಾಗಲಿದೆ. ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದೆ. ನಿತೀಶ್ ಕುಮಾರ್ ಅವರು ಮೊದಲು ಜೆಡಿಯು ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಲಿದ್ದಾರೆ. ಬೆಳಗ್ಗೆ 11 ಗಂಟೆಗೆ ಪಕ್ಷದ ಹಿರಿಯ ನಾಯಕರು ರಾಜ್ಯ ಕಚೇರಿಯಲ್ಲಿ ಸಭೆ ಸೇರಿದ್ದಾರೆ. ನಂತರ, ಮಧ್ಯಾಹ್ನ 3:30 ಕ್ಕೆ, ಎನ್‌ಡಿಎಯ ಐದು ಮಿತ್ರ ಪಕ್ಷಗಳ ಶಾಸಕರು ಬಿಹಾರ ವಿಧಾನಸಭೆಯ ಕೇಂದ್ರ ಸಭಾಂಗಣದಲ್ಲಿ ಸೇರಿ, ನಿತೀಶ್ ಕುಮಾರ್ ಅವರನ್ನು ಒಕ್ಕೂಟದ ನಾಯಕರಾಗಿ ಔಪಚಾರಿಕವಾಗಿ ಆಯ್ಕೆ ಮಾಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಳಿಕ, ಅವರು ರಾಜ್ ಭವನಕ್ಕೆ ತೆರಳಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿ, ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಅವರಿಗೆ ಸರ್ಕಾರ ರಚನೆಗೆ ಬೆಂಬಲ ಪತ್ರಗಳನ್ನು ನೀಡಲಿದ್ದಾರೆ. ಇದರೊಂದಿಗೆ, ಹಾಲಿ ವಿಧಾನಸಭೆಯನ್ನು ವಿಸರ್ಜಿಸಲಾಗುವುದು. ಕಳೆದ ವಾರ ನಡೆದಿದ್ದ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಭರ್ಜರಿಯಾಗಿ ಗೆಲುವು ಸಾಧಿಸಿದೆ. 243 ಸದಸ್ಯರ ಸದನದಲ್ಲಿ 202 ಸ್ಥಾನಗಳನ್ನು ಪಡೆದುಕೊಂಡಿದೆ. ಬಿಜೆಪಿ 89 ಸ್ಥಾನಗಳೊಂದಿಗೆ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಜೆಡಿಯು 85 ಸ್ಥಾನಗಳನ್ನು ಗಳಿಸಿದೆ. ಚಿರಾಗ್ ಪಾಸ್ವಾನ್ ಅವರ ಎಲ್ಜೆಪಿ 19 ಸ್ಥಾನ, ಎಚ್‌ಎಎಂ 5 ಸ್ಥಾನ, ಆರ್‌ಎಲ್‌ಎಂ 4 ಸ್ಥಾನಗಳೊಂದಿಗೆ ಮಿತ್ರ ಪಕ್ಷಗಳು ಒಕ್ಕೂಟಕೆ ದೊಡ್ಡ ಬಹುಮತವನ್ನು ನೀಡಿದೆ.



**ಪ್ರಮಾಣವಚನ ಸಮಾರಂಭ:** ಮೂಲಗಳ ಪ್ರಕಾರ, ನಿತೀಶ್ ಕುಮಾರ್ ಅವರು ಗುರುವಾರ ಬೆಳಿಗ್ಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಪಾಟ್ನಾದ ಗಾಂಧಿ ಮೈದಾನದಲ್ಲಿ ಅವರೊಂದಿಗೆ ಹಲವು ಸಚಿವರು ಕೂಡ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿಯ ಹಿನ್ನೆಲೆಯಲ್ಲಿ, ಐತಿಹಾಸಿಕ ಗಾಂಧಿ ಮೈದಾನದಲ್ಲಿ ಭಾರಿ ಭದ್ರತಾ ವ್ಯವಸ್ಥೆ ಮಾಡಲಾಗುತ್ತಿದೆ. ಸಮಾರಂಭಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ಹಲವು ಕೇಂದ್ರ ಸಚಿವರು, ಎನ್‌ಡಿಎ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು ಕೂಡ ಭಾಗವಹಿಸುವ ನಿರೀಕ್ಷೆಯಿದೆ. ಈ ಉನ್ನತ ನಾಯಕರ ಉಪಸ್ಥಿತಿಯು, ಬಿಹಾರದ ಜನಾದೇಶವನ್ನು ಎನ್‌ಡಿಎಗೆ ದೊರೆತ ದೊಡ್ಡ ರಾಜಕೀಯ ಬೆಂಬಲವಾಗಿ ಬಿಂಬಿಸುವ ಉದ್ದೇಶವನ್ನು ತೋರಿಸುತ್ತದೆ.

**ಸಚಿವ ಸ್ಥಾನಗಳಿಗಾಗಿ ಮಿತ್ರಪಕ್ಷಗಳ ಜಗಳ:** ಪ್ರಮಾಣವಚನ ಸಮಾರಂಭಕ್ಕೆ ಒಂದು ದಿನ ಮೊದಲು, ಸಚಿವ ಸ್ಥಾನಗಳ ಹಂಚಿಕೆ ಕುರಿತು ಗುಪ್ತ ಮಾತುಕತೆಗಳು ತೀವ್ರಗೊಂಡಿದೆ. ಅತಿ ದೊಡ್ಡ ಜಗಳಕ್ಕೆ ಕಾರಣವಾಗಿರುವುದು ಗೃಹ ಖಾತೆ. ಈ ಖಾತೆ ಇದುವರೆಗೆ ನಿತೀಶ್ ಕುಮಾರ್ ಅವರ ಬಳಿಯೇ ಇತ್ತು.

**ಮಾತುಕತೆ ತೀವ್ರ**

**ಬಿಹಾರದಲ್ಲಿ ನಿತೀಶ್ ಕುಮಾರ್ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದು, ದಾಖಲೆಯ 10ನೇ ಬಾರಿಗೆ ಪ್ರಮಾಣವಚನ ಸ್ವೀಕಾರ ಪ್ರಕ್ರಿಯೆ ಶುರುವಾಗಿದೆ. ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ಭರ್ಜರಿ ಗೆಲುವು ಸಾಧಿಸಿದ್ದು, ನಿತೀಶ್ ಕುಮಾರ್ ಅವರನ್ನು ಒಕ್ಕೂಟದ ನಾಯಕರಾಗಿ ಆಯ್ಕೆ ಮಾಡಲಾಗುತ್ತದೆ. ಸಚಿವ ಸ್ಥಾನಗಳ ಹಂಚಿಕೆ, ವಿಶೇಷವಾಗಿ ಗೃಹ ಖಾತೆ ಮತ್ತು ಸ್ಪೀಕರ್ ಸ್ಥಾನಕ್ಕಾಗಿ ಮಿತ್ರಪಕ್ಷಗಳ ನಡುವೆ ಮಾತುಕತೆಗಳು ತೀವ್ರಗೊಂಡಿವೆ.**

ಜೆಡಿಯು ಮೂಲಗಳ ಪ್ರಕಾರ, ಪಕ್ಷವು ಈ ಪ್ರಮುಖ ಖಾತೆಯನ್ನು ಬಿಟ್ಟುಕೊಡಲು ಸಿದ್ಧವಿಲ್ಲ. ಆದರೆ, ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಕಾರಣ, ಬಿಜೆಪಿ ಪ್ರಮುಖ ಖಾತೆಗಳಲ್ಲಿ ಹೆಚ್ಚಿನ ಪಾಲು ಕೇಳುತ್ತಿದೆ.ಸ್ಪೀಕರ್ ಸ್ಥಾನಕ್ಕೂ ಈ ಜಗಳ ವಿಸ್ತರಿಸಿದೆ. ಎರಡೂ ಪಕ್ಷಗಳು ಈ ಸ್ಥಾನವನ್ನು ತಮಗೆ ಬೇಕು ಎಂದು ಕೇಳುತ್ತಿವೆ. ಬಿಜೆಪಿ ಸ್ಪೀಕರ್ ಸ್ಥಾನವನ್ನು ತಾನೇ ಉಳಿಸಿಕೊಳ್ಳಬೇಕು ಎಂದು ಪಟ್ಟು ಹಿಡಿದಿದೆ.

ಹಾಲಿ ವಿಧಾನಸಭೆಯಲ್ಲಿ, ಬಿಜೆಪಿಯ ನಂದ ಕಿಶೋರ್ ಯಾದವ್ ಸ್ಪೀಕರ್ ಆಗಿದ್ದರು ಮತ್ತು ಜೆಡಿಯುನ ನರೇಂದ್ರ ನಾರಾಯಣ್ ಯಾದವ್ ಉಪ ಸಭಾಪತಿ ಆಗಿದ್ದರು. ಜೆಡಿಯು ತನ್ನ ಹಾಲಿ ಸಚಿವರಲ್ಲಿ ಹೆಚ್ಚಿನವರನ್ನು ಉಳಿಸಿಕೊಳ್ಳುವ ನಿರೀಕ್ಷೆಯಿದೆ. ಆದರೆ ಬಿಜೆಪಿ ಹೊಸ ಮುಖಗಳನ್ನು ಪರಿಚಯಿಸಬಹುದು ಎಂದು ಪಿಟಿಐ ವರದಿ ಮಾಡಿದೆ.


### 14 ಸಚಿವರ ಪ್ರಮಾಣವಚನ

**ವಿಸ್ತೃತ ಸಂಪುಟದಲ್ಲಿ ಎರಡೂ ಪಕ್ಷಗಳಿಂದ ಐದರಿಂದ ಆರು ಹೊಸ ಸದಸ್ಯರು ಸೇರುವ ಸಾಧ್ಯತೆಯಿದೆ. ಎಲ್‌ಜೆಪಿ ಮೂರು ಸಚಿವ ಸ್ಥಾನಗಳನ್ನು ಪಡೆಯಬಹುದು, ಆದರೆ ಎಚ್‌ಎಎಂ ಮತ್ತು ಆರ್‌ಎಲ್‌ಎಂ ತಲಾ ಒಂದು ಸ್ಥಾನ ಪಡೆಯುವ ನಿರೀಕ್ಷೆಯಿದೆ. ನವೆಂಬರ್ 20ರಂದು ಬಿಜೆಪಿಯಿಂದ ಗರಿಷ್ಠ 16 ಸಚಿವರು ಮತ್ತು ಜೆಡಿಯು ಯಿಂದ ನಿತೀಶ್ ಕುಮಾರ್ ಅವರೊಂದಿಗೆ 14 ಸಚಿವರು ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ತಿಳಿಸಿದೆ.**

## ಮೋದಿ ಅಯೋಧ್ಯೆ ಭೇಟಿ ಹಿನ್ನೆಲೆಯಲ್ಲಿ ಮಸೀದಿಗಳ ಶೋಧ ಅಗತ್ಯ

**ಅಯೋಧ್ಯೆ:** ಪ್ರಧಾನಿ ನರೇಂದ್ರ ಮೋದಿ ಅವರು ಅಯೋಧ್ಯೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಇಲ್ಲಿನ ಎಲ್ಲಾ ಮಸೀದಿಗಳನ್ನು ಶೋಧಿಸಬೇಕು ಎಂದು ಬಿಜೆಪಿ ನಾಯಕರೊಬ್ಬರು ಆಗ್ರಹಿಸಿದ್ದಾರೆ. ಕೆಂಪು ಕೋಟೆ ಸ್ಫೋಟದ ನಂತರ ಮತ್ತು ನ. 25 ರಂದು ಪ್ರಧಾನಿ ನರೇಂದ್ರ ಮೋದಿ ನಗರಕ್ಕೆ ಭೇಟಿ ನೀಡಲಿರುವ ಹಿನ್ನೆಲೆಯಲ್ಲಿ, ಇಲ್ಲಿನ ಮಸೀದಿಗಳನ್ನು ನಿಯಮಿತವಾಗಿ ಶೋಧಿಸಿ, ಸಂದರ್ಶಕರ ವಿವರಗಳನ್ನು ದಾಖಲಿಸಬೇಕೆಂದು ಸ್ಥಳೀಯ ಬಿಜೆಪಿ ನಾಯಕ ರಜನೀಶ್ ಸಿಂಗ್ ಒತ್ತಾಯಿಸಿದ್ದಾರೆ. ನಗರದಲ್ಲಿರುವ ಎಲ್ಲಾ ಮದರಸಾಗಳು ಮತ್ತು ಶುಕ್ರವಾರದ ಪ್ರಾರ್ಥನೆಗಳನ್ನು ತಕ್ಷಣ ಮುಚ್ಚುವಂತೆ ಕೋರಿ ಅವರು ಪ್ರಧಾನಿಗೆ ಪತ್ರ ಬರೆದಿದ್ದಾರೆ. ನ. 18ರಂದು ಬರೆದ ತಮ್ಮ ಪತ್ರದಲ್ಲಿ, ಮಸೀದಿಗಳನ್ನು ಕಾಲಕಾಲಕ್ಕೆ ಶೋಧಿಸಬೇಕು ಮತ್ತು ಅವುಗಳಿಗೆ ಭೇಟಿ ನೀಡುವ ಜನರ ವಿವರಗಳನ್ನು ದಾಖಲಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ. ಎಲ್ಲಾ ಮಸೀದಿಗಳಲ್ಲಿ ಸಿಸಿಟಿವಿ ಕ್ಯಾಮರಾಗಳು ಇರಬೇಕು, ಅವುಗಳ ಪ್ರವೇಶವನ್ನು ಸ್ಥಳೀಯ ಪೊಲೀಸ್ ಠಾಣೆಯೊಂದಿಗೆ ಹಂಚಿಕೊಳ್ಳಬೇಕು ಎಂದು ಅವರು ಹೇಳಿದರು.

ರಜನೀಶ್ ಸಿಂಗ್ ಭಯೋತ್ಪಾದಕ ಅಂಶಗಳು ರಹಸ್ಯವಾಗಿ ಕಾರ್ಯನಿರ್ವಹಿಸುತ್ತಿವೆ, ಧಾರ್ಮಿಕ ಸ್ಥಳಗಳನ್ನು ಆವರಿಸಿಕೊಳ್ಳುವ ಮೂಲಕ ತಮ್ಮ ಚಟುವಟಿಕೆಗಳನ್ನು ವಿಸ್ತರಿಸುತ್ತಿವೆ ಎಂದು ಆರೋಪಿಸಿದ್ದಾರೆ.



# ಶಬರಿಮಲೆಗೆ ಹರಿದುಬಂದ ಭಕ್ತಸಾಗರ, ನೂಕು ನುಗ್ಗಲು, ಉಸಿರು ಗಟ್ಟಿ ಮಹಿಳೆ ಸಾವು

**ತಿರುವನಂತಪುರಂ:** ಕೇರಳದ ಶಬರಿಮಲೆಯಲ್ಲಿ ಸುಮಾರು 2 ಲಕ್ಷಕ್ಕೂ ಅಧಿಕ ಮಂದಿ ಭಕ್ತರು ಜಮಾಯಿಸಿದ್ದು, ನೂಕು–ನುಗ್ಗಲುನಲ್ಲಿ ಉಸಿರು ಗಟ್ಟಿ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ನಡೆದಿದೆ. ನಿರೀಕ್ಷೆಗೂ ಮೀರಿ ಭಕ್ತರ ದಂಡು ಆಗಮಿಸಿದ್ದರಿಂದಾಗಿ ಒತ್ತಡ ಹೆಚ್ಚಾಗಿದ್ದು, ನಿಲ್ಲಲು ಜಾಗವಿಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಪಂಪಾದಿಂದ ದೇಗುಲದವರೆಗೂ ಸುಮಾರು 70 ಸಾವಿರ ಜನ ನಿಲ್ಲಲು ಅವಕಾಶವಿದ್ದು, 2 ಲಕ್ಷಕ್ಕೂ ಅಧಿಕ ಮಂದಿ ಜಮಾಯಿಸಿದ್ದಾರೆ.

ಭಕ್ತರಿಗೆ ಶೌಚಾಲಯ, ನೀರಿನ ವ್ಯವಸ್ಥೆ ಸಾಲದೆ ಪರದಾಡುವಂತಾಗಿದೆ, ದರ್ಶನಕ್ಕೆ ಸುಮಾರು 14 ಗಂಟೆಗಳಿಗೂ ಹೆಚ್ಚಿನ ಸಮಯ ಹಿಡಿಯುತ್ತಿದ್ದು, ಊಟ, ನೀರು, ಶೌಚಾಲಯದಂತಹ ಮೂಲ ಸೌಲಭ್ಯಗಳಿಗೆ ಪರದಾಡುತ್ತಿದ್ದಾರೆ. ಭಕ್ತರು ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಂಡು ಅವಕಾಶ ಸಿಕ್ಕರೆ ಮಾತ್ರ ಶಬರಿಮಲೆಗೆ ಬರುವಂತೆ ಅಲ್ಲಿನ ಆಡಳಿತ ಮಂಡಳಿ ಮನವಿ ಮಾಡಿದೆ ಎಂದರು. ಭಕ್ತರಿಗೆ ನೀರಿನ ಸೌಲಭ್ಯ ಕಲ್ಪಿಸಲು ಕಷ್ಟವಾಗುತ್ತಿದೆ. ಯಾತ್ರೆಯನ್ನು ಮಾಲಾಧಾರಿಗಳು ಮುಂದೂಡ ಬೇಕೆಂದು ಆಡಳಿತ ಮಂಡಳಿ ಮನವಿ ಮಾಡಿದೆ. ಎರುಮೇಲಿ, ಪಂಪಾ, ರಾಣಿಪಂಪಾ, ಪ್ಲಾಪಳ್ಳಿ, ನೀಲಕ್ಕಲ್ ರಸ್ತೆಯುದ್ದಕ್ಕೂ ವಾಹನಗಳು ಸಾಲುಗಟ್ಟಿ ನಿಂತಿವೆ. ಹಿಂದೆ–ಮುಂದೆ ಸಂಚರಿಸಲಾಗದೆ ಸಿಲುಕಿ ಪರದಾಡುತ್ತಿದ್ದಾರೆ. ಹಿಂದೆಂದೂ ಇಲ್ಲದಷ್ಟು ಭಕ್ತರ ದಂಡು ಹರಿದು ಬರುತ್ತಿದೆ. ಪ್ರತಿ ದಿನ ಒಂದು ಲಕ್ಷದಷ್ಟು ಆನ್‌ಲೈನ್ ಬುಕ್ಕಿಂಗ್ ಮತ್ತು 20 ಸಾವಿರ ಸ್ಪಾಟ್ ಬುಕ್ಕಿಂಗ್‌ಗೆ ಸೀಮಿತಗೊಳಿಸಿಲಾಗಿತ್ತು. ಆದರೆ ಅದನ್ನು ಮೀರಿ ಜನ ಟಿಕೆಟ್ ಪಡೆದು ದರ್ಶನಕ್ಕೆ ಮುಂದಾಗಿದ್ದಾರೆ.



ಮೆದುಳು ತಿನ್ನುವ ಮಾರಣಾಂತಿಕ ನೆಗ್ಲೇರಿಯಾ ಫೌಲೇರಿ ಅಮೀಬಾ ಸೋಂಕಿನ ನಡುವೆಯೂ ಯಾತ್ರಿಕರ ಭೇಟಿ ತಗ್ಗಿಲ್ಲ. ಜನವರಿಯಲ್ಲಿ ಮಕರ ಸಂಕ್ರಾಂತಿ ವೇಳೆ ಮಂಡಲ ಪೂಜೆಗಾಗಿ ಲಕ್ಷಾಂತರ ಭಕ್ತರು ಆಗಮಿಸುವ ಸಾಧ್ಯತೆಯಿದೆ. ಅದಕ್ಕಾಗಿ ನವೆಂಬರ್, ಡಿಸೆಂಬರ್‌ನಲ್ಲೇ ಯಾತ್ರೆ ಪೂರ್ಣಗೊಳಿಸಿಕೊಳ್ಳುವ ಉದ್ದೇಶದಿಂದ ಬಹಳಷ್ಟು ಮಂದಿ ತೆರಳುತ್ತಿದ್ದಾರೆ.

ಶಬರಿಮಲೆಗೆ ಯಾತ್ರೆ ಕೈಗೊಂಡು ಮರಳಿದವರ ಪ್ರಕಾರ, ಅಲ್ಲಿ ನೂಕುನುಗ್ಗಲು ಸಿಲುಕಿ ಉಸಿರಾಡಲು ಸಾಧ್ಯವಾಗದೇ 58 ವರ್ಷದ ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ ಎನ್ನಲಾಗಿದೆ. ಜನಸಂದಣಿಯಲ್ಲಿ ಸಿಲುಕಿದ ಮಕ್ಕಳನ್ನು ರಕ್ಷಿಸಲು ಪೋಷಕರು ಹರಸಹಾಸ ಪಡುತ್ತಿರುವುದು ಕಂಡು ಬಂದಿದೆ. ವೈದ್ಯಕೀಯ ಶಿಬಿರಗಳು ಸೇರಿದಂತೆ ನಾನಾ ರೀತಿಯ ಸೌಲಭ್ಯಗಳು ಸಾಲದೇ ಭಕ್ತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

## ಭಾರತ-ಪಾಕ್ ಸಂಘರ್ಷ ನಿಲ್ಲಿಸಿದ್ದು ಎಂದು ಮತ್ತೆ ಕನವರಿಸಿದ ಟ್ರಂಪ್

**ನವದೆಹಲಿ:** ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷವನ್ನು ತಾವು ನಿಲ್ಲಿಸಿದ್ದೇವೆ ಎಂಬ ತಮ್ಮ ಹೇಳಿಕೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪುನರುಚ್ಚರಿಸುತ್ತಿರುವುದಕ್ಕೆ ಬುಧವಾರ ಕಾಂಗ್ರೆಸ್ ಮತ್ತೆ ನರೇಂದ್ರ ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ. ಟ್ರಂಪ್ ಈ ರೀತಿ ಹೇಳುತ್ತಿರುವುದು 60ನೇ ಬಾರಿಯಾಗಿದೆ ಎಂದು ಕಾಂಗ್ರೆಸ್ ಪಕ್ಷದ ಮುಖಂಡ ಜೈರಾಮ್ ರಮೇಶ್ ಎಕ್ಸ್ ಮಾಡಿ ಮೋದಿ ಕಾಲೆಳೆದಿದ್ದಾರೆ. ವಾಷಿಂಗ್ಟನ್‌ನಲ್ಲಿ ನಿನ್ನೆ ನಡೆದ ಸೌದಿ ಕ್ರೌನ್ ಪ್ರಿನ್ಸ್ ಜೊತೆಗಿನ ಸಭೆಯಲ್ಲಿ, ಆಪರೇಷನ್ ಸಿಂಧೂರ್ ಅನ್ನು ನಿಲ್ಲಿಸಲು ತಾವು ಮಧ್ಯಪ್ರವೇಶಿಸಿದ್ದೇವೆ ಎಂಬ ತಮ್ಮ ಹೇಳಿಕೆಯನ್ನು ಟ್ರಂಪ್ ಪುನರುಚ್ಚರಿಸಿದ್ದಾರೆ ಎಂದು ರಮೇಶ್ ಎಕ್ಸ್‌ನಲ್ಲಿ ಹೇಳಿದರು. ಖಂಡಿತ, ಅವರು ಇದನ್ನು ಸೌದಿ ಅರೇಬಿಯಾದಲ್ಲಿಯೇ ಅಲ್ಲದೆ ಕತಾರ್, ಈಜಿಪ್ಟ್, ಯುಕೆ, ನೆದರ್ಲ್ಯಾಂಡ್ಸ್ ಮತ್ತು ಜಪಾನ್‌ನಲ್ಲಿಯೂ ಸಹ ಅನೇಕ ಇತರ ಪತ್ರಿಕಾ ಸಂವಾದಗಳಲ್ಲಿ ಹೇಳಿದ್ದಾರೆ ಎಂದು ಅವರು ಹೇಳಿದರು. ಸೌದಿ ಕ್ರೌನ್ ಪ್ರಿನ್ಸ್ ಜೊತೆಗಿನ ದ್ವಿಪಕ್ಷೀಯ ಸಭೆಯಲ್ಲಿ ಟ್ರಂಪ್, ನಾನು ಎಂಟು ಯುದ್ಧಗಳನ್ನು ನಿಲ್ಲಿಸಿದ್ದೇನೆ.

ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಜೊತೆ ಮಾತನಾಡಲು ಇನ್ನೂ ಒಂದು ಯುದ್ಧವಿದೆ. ಪುಟಿನ್ ಬಗ್ಗೆ ನನಗೆ ಸ್ವಲ್ಪ ಆಶ್ಚರ್ಯವಾಗಿದೆ. ಇದು ನಾನು ಅಂದುಕೊಂಡಿದ್ದಕ್ಕಿಂತ ಹೆಚ್ಚು ಸಮಯ ತೆಗೆದುಕೊಂಡಿತು, ಆದರೆ ನಾವು ಭಾರತ ಮತ್ತು ಪಾಕಿಸ್ತಾನವನ್ನು ನಿಲ್ಲಿಸಿದ್ದೇವೆ ಎಂದಿದ್ದರು. ಭಾರತ ಯಾವುದೇ ಪಕ್ಷದ ಹಸ್ತಕ್ಷೇಪವನ್ನು ನಿರಂತರವಾಗಿ ನಿರಾಕರಿಸುತ್ತಲೇ ಬಂದಿದೆ. ಈ ತಿಂಗಳ ಆರಂಭದಲ್ಲಿ, ಭಾರತ ರಷ್ಯಾದಿಂದ ತೈಲ ಖರೀದಿಯನ್ನು ಹೆಚ್ಚಾಗಿ ನಿಲ್ಲಿಸಿದೆ ಎಂಬ ಟ್ರಂಪ್ ಅವರ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪ್ರಧಾನಿ ಮೋದಿ ಅವರನ್ನು ಟೀಕಿಸಿತು.ಇದೆಲ್ಲದರ ಬಗ್ಗೆ ಹೌಡಿ ಮೋದಿ ಏನು ಹೇಳುತ್ತಾರೆ? ಎಂದು ವಿರೋಧ ಪಕ್ಷ ಕೇಳಿದೆ.

## ವೀರ ವನಿತೆ ರಾಣಿ ಲಕ್ಷ್ಮಿಬಾಯಿ ಜನ್ಮದಿನ ನಮನ ಸಲ್ಲಿಸಿದ ಪ್ರಧಾನಿ ಮೋದಿ

**ನವದೆಹಲಿ:** ವೀರ ವನಿತೆ ರಾಣಿ ಲಕ್ಷ್ಮಿಬಾಯಿ ಅವರಿಗೆ ಪ್ರಧಾನ ಮಂತ್ರಿ, ನರೇಂದ್ರ ಮೋದಿ ಅವರು ಜನ್ಮ ದಿನದ ನಮನ ಸಲ್ಲಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಬುಧವಾರ ಯೋಧ ರಾಣಿ ಲಕ್ಷ್ಮಿಬಾಯಿ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಗೌರವ ಸಲ್ಲಿಸಿ ಎಕ್ಸ್ ಮಾಡಿದ್ದಾರೆ. ಭಾರತದ ಮೊದಲ ಸ್ವಾತಂತ್ರ್ಯ ಸಂಗ್ರಾಮವಾದ 1857ರ ದಂಗೆಯಲ್ಲಿ ಬ್ರಿಟಿಷರ ವಿರುದ್ಧ ಲಕ್ಷ್ಮಿಬಾಯಿ ಪ್ರಮುಖ ಪಾತ್ರ ವಹಿಸಿದರು.ತನ್ನ ರಾಜ್ಯವನ್ನು ವಶಪಡಿಸಿಕೊಳ್ಳಲು ಪ್ರಯತ್ನಿಸಿದ ಬ್ರಿಟಿಷ್ ಪಡೆಗಳ ವಿರುದ್ಧ ಹೋರಾಡಿ ಅವರು ತಮ್ಮ ಪ್ರಾಣವನ್ನು ಅರ್ಪಿಸಿದರು.

ಭಾರತ ಮಾತೆಯ ಅಮರ ಯೋಧ ರಾಣಿ ಲಕ್ಷ್ಮಿಬಾಯಿ ಅವರಿಗೆ ಅವರ ಜನ್ಮ ವಾರ್ಷಿಕೋತ್ಸವದಂದು ಗೌರವಯುತ ಗೌರವ. ಮೊದಲ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಅವರ ಶೌರ್ಯದ ಕಥೆ ಇಂದಿಗೂ ದೇಶವಾಸಿಗಳ ಹೃದಯಗಳನ್ನು ಉತ್ಸಾಹ ಮತ್ತು ಉತ್ಸಾಹದಿಂದ ತುಂಬುತ್ತದೆ ಎಂದು ಮೋದಿ ಪೋಸ್ಟ್ ಮಾಡಿದ್ದಾರೆ. ಕೃತಜ್ಞರಾಗಿರುವ ರಾಷ್ಟ್ರವು ಮಾತೃಭೂಮಿಯ ಹೆಮ್ಮೆಯ ರಕ್ಷಣೆಗಾಗಿ ಅವರ ತ್ಯಾಗ ಮತ್ತು ಹೋರಾಟವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಪ್ರಧಾನಿ ಹೇಳಿದರು.

## ಅಪ್ಪನಿಗೆ ಕಿಡ್ನಿ ಬೇಕಾಗಿದ್ದಾಗ ತೇಜಸ್ವಿ ಓಡಿ ಹೋಗಿದ್ದ; ರೋಹಿಣಿ

**ಪಾಟ್ನಾ:** ಅಪ್ಪನಿಗೆ ಕಿಡ್ನಿ ಬೇಕಾಗಿದ್ದ ಸಂದರ್ಭದಲ್ಲಿ ಮಗ ಓಡಿ ಹೋಗಿದ್ದ ಎನ್ನುವ ಪೋಸ್ಟ್ ಹಾಕುವ ಮೂಲಕ ಲಾಲೂ ಪ್ರಸಾದ್ ಯಾದವ್ ಅವರ ಪುತ್ರಿ ರೋಹಿಣಿ ತಮ್ಮ ಕುಟುಂಬ ಜಗಳಕ್ಕೆ ತುಪ್ಪ ಸುರಿದಿದ್ದಾರೆ. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಆರ್‌ಜೆಡಿ ಹೀನಾಯವಾಗಿ ಸೋತ ಬಳಿಕ, ಲಾಲು ಪ್ರಸಾದ್ ಯಾದವ್ ಮನೆಯಲ್ಲಿ ಕುದಿಯುತ್ತಿದ್ದ ಕುಟುಂಬ ಕಲಹ ಇದೀಗ ಬೀದಿಗೆ ಬಂದಿದೆ. ತೇಜಸ್ವಿ ಯಾದವ್, ಅವರ ಆಪ್ತರಿಂದ ಅವಮಾನಕ್ಕೊಳಗಾಗಿ ರಾಜಕೀಯದಿಂದ ಕುಟುಂಬದಿಂದ ದೂರ ಸರಿದಿದ್ದ ಲಾಲು ಯಾದವ್ ಅವರ ಪುತ್ರಿ ರೋಹಿಣಿ ಆಚಾರ್ಯ ಸಾಮಾಜಿಕ ಮಾಧ್ಯಮದಲ್ಲಿ ಸಂವೇದನಾಶೀಲ ವಿಡಿಯೋವನ್ನು ಹಂಚಿಕೊಂಡಿರುವುದು ಲಾಲೂ ಕುಟುಂಬದಲ್ಲಿ ಏನು ಸರಿಯಿಲ್ಲ ಎನ್ನುವುದಕ್ಕೆ ಉದಾಹರಣೆಯಂತಿದೆ. ರೋಹಿಣಿ ಅವರು ಪತ್ರಕರ್ತ ಕನ್ಹಯ್ಯಾ ಭೇಲಾರಿ ಅವರೊಂದಿಗಿನ ತಮ್ಮ ಫೋನ್ ಸಂಭಾಷಣೆಯ 5 ನಿಮಿಷ, 44 ಸೆಕೆಂಡುಗಳ ವಿಡಿಯೋ ಕ್ಲಿಪ್‌ಅನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡಿದ್ದಾರೆ.



ನಾನು ನನ್ನ ಪೋಷಕರ ಮನೆಗೆ ಎಷ್ಟು ಬಾರಿ ಭೇಟಿ ನೀಡುತ್ತೇನೆ, ನಾನು ಎಷ್ಟು ಕಾಲ ಅಲ್ಲಿಯೇ ಇರುತ್ತೇನೆ ಎಂಬುದರ ಕುರಿತು ನಿಮ್ಮ ಬಳಿ ಯಾವುದೇ ಡೇಟಾ ಇದೆಯೇ ಎಂದು ತೀಕ್ಷ್ಣವಾಗಿ ಪ್ರಶ್ನಿಸುವುದನ್ನು ಕೇಳಬಹುದು. ಕಿಡ್ನಿ ಕೊಡೋ ಸಮಯ ಬಂದಾಗ ಮಗ ಓಡಿ ಹೋಗಿದ್ದ ಎಂದು ತೇಜಸ್ವಿ ಯಾದವ್ ಬಗ್ಗೆ ರೋಹಿಣಿ ಟೀಕೆ ಮಾಡಿದ್ದಾರೆ.

ಹಾಗೆಯೇ ರೋಹಿಣಿ ಚುನಾವಣೆಗೂ ಮುನ್ನ ಲಾಲು ನಿವಾಸದಲ್ಲಿ ಹೆಚ್ಚು ದಿನಗಳ ಕಾಲ ಇದ್ದರು, ಚುನಾವಣೆಯಲ್ಲಿ ಅವರು ಸೋಲು ಕಾಣುತ್ತಿದ್ದಂತೆ ಮನೆಯಿಂದ ಹೊರಬಂದಿದ್ದಾರೆ ಎನ್ನುವ ಮಾತುಗಳು ಕೇಳಿಬರುತ್ತಿವೆ.

ಮಗಳ ಮೂತ್ರಪಿಂಡ ಕೊಳಕು ಎಂದು ಕರೆಯುವವರು ಮೊದಲು ತಮ್ಮ ಸ್ವಂತ ಮೂತ್ರಪಿಂಡವನ್ನು ದಾನ ಮಾಡಬೇಕು. ಬಾಟಲಿ ರಕ್ತ ನೀಡುವ ಯೋಚನೆ ಬಂದರೆ ನಡುಗುವ ಜನರು ಮೂತ್ರಪಿಂಡ ದಾನದ ಬಗ್ಗೆ ಬೋಧಿಸುತ್ತೀರಾ ಎಂದು ಅವರು ಪ್ರಶ್ನಿಸಿದ್ದಾರೆ. ತೇಜಸ್ವಿ ಯಾದವ್ ಲಾಲು ಪ್ರಸಾದ್‌ಗೆ ತಮ್ಮ ಮೂತ್ರಪಿಂಡವನ್ನು ಏಕೆ ನೀಡಲಿಲ್ಲ ಎಂದು ರೋಹಿಣಿ ಕೇಳುತ್ತಿದ್ದಾರೆ. ಮೂತ್ರಪಿಂಡ ದಾನದ ಬಗ್ಗೆ ಮಾತನಾಡುವುದು ಸುಲಭ, ಆದರೆ ಯಾರೂ ಅದನ್ನು ಮಾಡುವುದಿಲ್ಲ. ತೇಜಸ್ವಿ ತನ್ನನ್ನು ಮನೆಯಿಂದ ಹೊರಹಾಕಿದ್ದಾರೆ, ನನ್ನ ಮೇಲೆ ಚಪ್ಪಲಿ ಎತ್ತಿದ್ದಾರೆ, ಆಪ್ತರು ನನ್ನದು ಕೊಳಕು ಕಿಡ್ನಿ, ಈ ಕೊಳಕು ಕಿಡ್ನಿಯ ಬದಲಾಗಿ ಚುನಾವಣಾ ಟಿಕೆಟ್ ಪಡೆದಿದ್ದಳು ಎಂದು ಆರೋಪಿಸಿರುವುದಾಗಿ ರೋಹಿಣಿ ಹೇಳಿದ್ದರು.

# ದೆಹಲಿಯಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯ

### ಕ್ರೀಡಾ ಚಟುವಟಿಕೆಗಳನ್ನು ಮಾಲಿನ್ಯ ಸುರಕ್ಷಿತ ತಿಂಗಳುಗಳಿಗೆ ಸ್ಥಳಾಂತರಿಸುವಂತೆ ಸುಪ್ರೀಂಕೋರ್ಟ್ ಸೂಚನೆ


**ಹೊಸದಿಲ್ಲಿ:** ದೆಹಲಿಯಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯದ ಹಿನ್ನೆಲೆಯಲ್ಲಿ, ಕ್ರೀಡಾ ಚಟುವಟಿಕೆಗಳನ್ನು ಮಾಲಿನ್ಯ ಸುರಕ್ಷಿತ ತಿಂಗಳುಗಳಿಗೆ ಸ್ಥಳಾಂತರಿಸುವಂತೆ ಕಮಿಷನ್ ಫಾರ್ ಏರ್ ಕ್ವಾಲಿಟಿ ಮ್ಯಾನೇಜ್‌ಮೆಂಟ್‌ಗೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ. ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ, ಮಾಲಿನ್ಯ ಮಟ್ಟ ಗರಿಷ್ಠ ಮಟ್ಟದಲ್ಲಿರುವಾಗ ಶಾಲೆಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ನಡೆಸಲು ಅವಕಾಶ ನೀಡುವುದು ಮಕ್ಕಳನ್ನು ಗ್ಯಾಸ್ ಚೇಂಬರ್‌ನಲ್ಲಿ ಇಟ್ಟಂತೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಮತ್ತು ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಅವರಿದ್ದ ಪೀಠ ಈ ಆದೇಶ ನೀಡಿದೆ. ದೆಹಲಿ ಸರ್ಕಾರವು ಅಂಡರ್–16 ಮತ್ತು ಅಂಡರ್–14 ವಿದ್ಯಾರ್ಥಿಗಳಿಗೆ ಈ ಎರಡು ತಿಂಗಳಲ್ಲಿ, ಅಂದರೆ ವಾಯು ಗುಣಮಟ್ಟ ಅತ್ಯಂತ ಕೆಟ್ಟದಾಗಿರುವಾಗ, ಅಂತರ್–ವಲಯ ಕ್ರೀಡಾ ಸ್ಪರ್ಧೆಗಳನ್ನು ನಿಗದಿಪಡಿಸಿದೆ ಎಂದು ಅಮೀಕಸ್ ಕ್ಯೂರಿ ಅಪರಾಜಿತಾ ಸಿಂಗ್ ನ್ಯಾಯಾಲಯಕ್ಕೆ ತಿಳಿಸಿದರು.



**ಮಕ್ಕಳ ಆರೋಗ್ಯದ ಹಿತದೃಷ್ಟಿ**

**ದೆಹಲಿಯಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯದ ಹಿನ್ನೆಲೆಯಲ್ಲಿ, ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ ಮಕ್ಕಳ ಕ್ರೀಡಾ ಚಟುವಟಿಕೆಗಳನ್ನು ನಡೆಸುವುದನ್ನು ಸುಪ್ರೀಂ ಕೋರ್ಟ್ ನಿಷೇಧಿಸಿದೆ. ಮಾಲಿನ್ಯ ಸುರಕ್ಷಿತ ತಿಂಗಳುಗಳಿಗೆ ಕ್ರೀಡಾ ಚಟುವಟಿಕೆಗಳನ್ನು ಸ್ಥಳಾಂತರಿಸುವಂತೆ ಕಮಿಷನ್ ಫಾರ್ ಏರ್ ಕ್ವಾಲಿಟಿ ಮ್ಯಾನೇಜ್‌ಮೆಂಟ್‌ಗೆ ನಿರ್ದೇಶನ ನೀಡಿದೆ. ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಈ ಆದೇಶ ಹೊರಡಿಸಲಾಗಿದೆ.**

**ಆರೋಗ್ಯ ಸಮಸ್ಯೆಗಳು:** ಮಕ್ಕಳು ಅತ್ಯಂತ ದುರ್ಬಲರಾಗಿದ್ದು, ಗರಿಷ್ಠ ಮಾಲಿನ್ಯ ಋತುವಿನಲ್ಲಿ ಹೊರಾಂಗಣ ಕ್ರೀಡಾ ಚಟುವಟಿಕೆಗಳನ್ನು ನಡೆಸುವುದರಿಂದ ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು ಎಂದು ಅವರು ಹೇಳಿದರು. ದೆಹಲಿ– ಎನ್‌ಸಿಆರ್ ನಲ್ಲಿ ವಾಯು ಮಾಲಿನ್ಯವನ್ನು ಮತ್ತಷ್ಟು ಹೆಚ್ಚಾಗದಂತೆ ತಡೆಯಲು ಸಿಎಕ್ಯೂಎಂ ತೆಗೆದುಕೊಂಡಿರುವ ಕ್ರಮಗಳ ವಿವರವಾದ ಅಫಿಡವಿಟ್ ಸಲ್ಲಿಸುವಂತೆ ಸುಪ್ರೀಂಕೋರ್ಟ್ ಈ ಕಣ್ಗಾವಲು ಸಂಸ್ಥೆಗೆ ಕೇಳಿದ ಎರಡು ವಾರಗಳ ನಂತರ ಈ ಹೊಸ ನಿರ್ದೇಶನ ಬಂದಿದೆ. ಮಾಲಿನ್ಯ ಮಟ್ಟ ತೀವ್ರ ಹಂತಕ್ಕೆ ತಲುಪುವವರೆಗೆ ಕಾಯದೆ, ಅಧಿಕಾರಿಗಳು ಸಕ್ರಿಯವಾ ಕಾರ್ಯನಿರ್ವಹಿಸಬೇಕು ಎಂದು ನ್ಯಾಯಪೀಠ ಹೇಳಿತ್ತು. ಕಳೆದ ವಾರ ದೆಹಲಿಯಲ್ಲಿ ವಾಯು ಗುಣಮಟ್ಟ ಸೂಚ್ಯಂಕ ತೀವ್ರ ಕುಸಿದಾಗ, ಮಾಲಿನ್ಯ ಮಟ್ಟ ನಿರಂತರವಾಗಿ ಕುಸಿಯುತ್ತಿರುವ ಬಗ್ಗೆ ಜಾರಿ, ನೀತಿ ಕ್ರಮಗಳ ವಿವರವಾದ ಪುರಾವೆಗಳಿಗೆ ಆದ್ಯತೆ ನೀಡುವಂತೆ ಅಮೀಕಸ್ ನವೆಂಬರ್ 12 ರಂದು ನ್ಯಾಯಾಲಯದಲ್ಲಿ ಮನವಿ ಮಾಡಿದರು. ಪರಿಸ್ಥಿತಿಯಲ್ಲಿ ಯಾವುದೇ ಬದಲಾವಣೆಯಾಗದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅಪರಾಜಿತಾ ಸಿಂಗ್, ನಾನು ಕಳೆದ 20 ವರ್ಷಗಳಿಂದ ಈ ವಿಷಯವನ್ನು ನಿರ್ವಹಿಸುತ್ತಿದ್ದೇನೆ. ಸರ್ಕಾರಗಳು ಬಂದಿವೆ, ಹೋಗಿವೆ. ಆದರೆ ನೆಲಮಟ್ಟದಲ್ಲಿ ಏನೂ ಬದಲಾಗಿಲ್ಲ ಎಂದು ಹೇಳಿದರು.



### ವಾಯುಮಾಲಿನ್ಯ ಪರಿಸ್ಥಿತಿ ಹದಗೆಡುತ್ತಿದೆ

**ದೆಹಲಿಯಲ್ಲಿ ವಾಯು ಮಾಲಿನ್ಯದ ಪರಿಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದ್ದು, ಇದರ ಪರಿಣಾಮವಾಗಿ ಶಾಲೆಗಳಲ್ಲಿ ನಡೆಯುವ ಕ್ರೀಡಾ ಚಟುವಟಿಕೆಗಳ ಮೇಲೆ ಸುಪ್ರೀಂ ಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ. ನವೆಂಬರ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ, ದೆಹಲಿಯಲ್ಲಿ ವಾಯು ಮಾಲಿನ್ಯ ಅತ್ಯಂತ ಹೆಚ್ಚಾಗಿರುತ್ತದೆ. ಈ ಸಮಯದಲ್ಲಿ ಶಾಲೆಗಳಲ್ಲಿ ಕ್ರೀಡಾ ಸ್ಪರ್ಧೆಗಳನ್ನು ನಡೆಸಿದರೆ, ಅದು ಮಕ್ಕಳ ಆರೋಗ್ಯಕ್ಕೆ ತುಂಬಾ ಹಾನಿಕರ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ದೆಹಲಿ ಸರ್ಕಾರವು ಅಂಡರ್–16 ಮತ್ತು ಅಂಡರ್–14 ವಿದ್ಯಾರ್ಥಿಗಳಿಗಾಗಿ ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ, ಅಂದರೆ ವಾಯು ಮಾಲಿನ್ಯ ಗರಿಷ್ಠ ಮಟ್ಟದಲ್ಲಿರುವಾಗ, ಅಂತರ್–ವಲಯ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಿತ್ತು. ಈ ಬಗ್ಗೆ ಅಮೀಕಸ್ ಕ್ಯೂರಿ ಅಪರಾಜಿತಾ ಸಿಂಗ್ ನ್ಯಾಯಾಲಯಕ್ಕೆ ಮಾಹಿತಿ ನೀಡಿದರು. ಮಕ್ಕಳು ಅತ್ಯಂತ ದುರ್ಬಲರಾಗಿದ್ದು, ಈ ಸಮಯದಲ್ಲಿ ಹೊರಾಂಗಣ ಕ್ರೀಡಾ ಚಟುವಟಿಕೆಗಳನ್ನು ನಡೆಸುವುದರಿಂದ ಅವರ ಆರೋಗ್ಯಕ್ಕೆ ಗಂಭೀರ ಸಮಸ್ಯೆಗಳು ಎದುರಾಗಬಹುದು ಎಂದು ಅವರು ಕಳವಳ ವ್ಯಕ್ತಪಡಿಸಿದರು.**


## ರಕ್ತ ಕಾಶ್ಮೀರ ವಿಶೇಷತೆ ಬಿಚ್ಚಿಟ್ಟ ರಾಜೇಂದ್ರ ಸಿಂಗ್ ಬಾಬು

ವೃತ್ತಿಜೀವನದಲ್ಲಿ ಐವತ್ತು ವರ್ಷಗಳನ್ನು ಪೂರೈಸಿರುವ ಹಿರಿಯ ನಿರ್ದೇಶಕ ಎಸ್.ವಿ ರಾಜೇಂದ್ರ ಸಿಂಗ್ ಬಾಬು ನಿರ್ದೇಶನದ ಹಾಗೂ ರಿಯಲ್ ಸ್ಟಾರ್ ಉಪೇಂದ್ರ, ರಮ್ಯಾ ಮುಖ್ಯಪಾತ್ರದಲ್ಲಿ ನಟಿಸಿರುವ ರಕ್ತ ಕಾಶ್ಮೀರ ಚಿತ್ರ ಸದ್ಯದಲ್ಲೇ ತೆರೆಗೆ ಬರಲಿದೆ ಈ ಕುರಿತು ಮಾಹಿತಿ ನೀಡಲು ನಿರ್ದೇಶಕರು ಪತ್ರಿಕಾಗೋಷ್ಠಿ ಆಯೋಜಿಸಿದ್ದರು. ಪತ್ರಿಕಾಗೋಷ್ಠಿಗೂ ಮುನ್ನ ಚಿತ್ರದ ಎರಡು ಹಾಡುಗಳು ಹಾಗೂ ಟ್ರೇಲರ್ ಅನ್ನು ಪ್ರದರ್ಶಿಸಲಾಯಿತು.

ರಕ್ತ ಕಾಶ್ಮೀರ ಒಂದು ಸಾಮಾಜಿಕ ಸಂದೇಶವುಳ್ಳ ಚಿತ್ರ. ಭಯೋತ್ಪಾದನೆಯ ವಿರುದ್ಧ ಸಮರ ಸಾರುವ ಚಿತ್ರವೂ ಹೌದು. ಉಪೇಂದ್ರ ಅವರು ಈ ಚಿತ್ರದಲ್ಲಿ ದ್ವಿಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ರಮ್ಯಾ ಈ ಚಿತ್ರದ ನಾಯಕಿ ಚಿತ್ರದಲ್ಲಿ ನಾಯಕ ಮಕ್ಕಳಿಗೆ ಭಯೋತ್ಪಾದನೆಯ ವಿರುದ್ಧ ಹೋರಾಡುವುದು ಹೇಗೆ ಎಂಬುದನ್ನು ಮಕ್ಕಳಿಗೆ ತರಭೇತಿ ನೀಡಿರುತ್ತಾರೆ. ಈ ಸನ್ನಿವೇಶ ಎದುರಾದಾಗ ಮಕ್ಕಳು ಹೇಗೆ ಪಾರಾಗುತ್ತಾರೆ ಹಾಗೂ ನಗರದಲ್ಲಿ ನಡೆಯಬಹುದಾದಾ ಭಾರಿ ಸ್ಫೋಟವನ್ನು ಹೇಗೆ ತಪಿಸುತ್ತಾರೆ ಎಂಬುದನ್ನು ಈ ಚಿತ್ರದಲ್ಲಿ ತೋರಿಸಲಾಗಿದೆ. ನಾಗರಹೊಳೆ ಚಿತ್ರದ ನಂತರ ಮಕ್ಕಳನ್ನು ಪ್ರಧಾನವಾಗಿ ಟ್ಟುಕೊಂಡು ಮಾಡಿರುವ ಚಿತ್ರವಿದು. ಇದರಲ್ಲಿ ನೂರಕ್ಕೂ ಆಧಿಕ ಮಕ್ಕಳು ಅಭಿನಯಿಸಿದ್ದಾರೆ. ಪ್ರಮುಖಪಾತ್ರದಲ್ಲಿ ಏಳುಜನ ಮಕ್ಕಳು ನಟಿಸಿದ್ದಾರೆ ಎಂದರು.

ಮುಂದುವರೆದು ಮಾತನಾಡಿದ ಸಿಂಗ್ ಬಾಬು, ಚಿತ್ರದ ಮತ್ತೊಂದು ವಿಶೇಷವೆಂದರೆ ಈ ಚಿತ್ರದಲ್ಲಿ ಹದಿನೆಂಟು ನಿಮಿಷದ ಒಂದು ಹಾಡು. ಈ ಹಾಡಿನಲ್ಲಿ ವಿಷ್ಣುವರ್ಧನ್, ಅಂಬರೀಶ್, ಶ್ರೀನಾಥ್, ಶಿವರಾಜಕುಮಾರ್, ಪುನೀತ್ ರಾಜಕುಮಾರ್, ಜಗ್ಗೇಶ್, ಉಪೇಂದ್ರ, ರಮೇಶ್‌ಅರವಿಂದ್, ದರ್ಶನ್, ಜೈ ಜಗದೀಶ್, ಆದಿತ್ಯ, ರಾಕ್ ಲೈನ್ ವೆಂಕಟೇಶ್ ಸೇರಿದಂತೆ ಕನ್ನಡದ ದಿಗ್ಗಜ ನಾಯಕರು ಅಭಿನಯಿಸಿದ್ದಾರೆ.

ಒಂದೇ ಹಾಡಿನಲ್ಲಿ ಇಷ್ಟು ಜನ ನಾಯಕರು ಅಭಿನಯಿಸಿರುವ ದಾಖಲೆ ಯಾವ ಭಾಷೆಯ ಚಿತ್ರದಲ್ಲೂ ಇಲ್ಲ. ಇದೊಂದು ದಾಖಲೆಯೇ ಸರಿ. ನನ್ನ ಮೇಲೆ ಪ್ರೀತಿಯಿಟ್ಟು ಅಭಿನಯಿಸಿದ ಅಷ್ಟು ನಾಯಕರಿಗೂ ಧನ್ಯವಾದ. ಇನ್ನೂ ಈ ರೀತಿಯ ಹಲವು ವಿಷಯಗಳನ್ನೊಳಗೊಂಡಿರುವ ಈ ಚಿತ್ರವನ್ನು ಸದ್ಯದಲ್ಲೇ ತಮ್ಮ ಮುಂದೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ವಿವರಿಸಿದರು.





## ಮಾದಕ ಗೀತೆ ವೈರಲ್

ಸುಮಾರು 75ಕ್ಕೂ ಹೆಚ್ಚು ರಾಷ್ಟ್ರೀಯ, ಅಂತಾರಾಷ್ಟ್ರೀಯ ಫ್ಯಾಷನ್ ಷೋಗಳಲ್ಲಿ ಶೋಸ್ಟಾಪರ್ ಆಗಿ ಭಾಗವಹಿಸಿ, ಸೂಪರ್ ಮಾಡೆಲ್ ಎನಿಸಿಕೊಂಡಿರುವ ಸಂಹಿತಾ ವಿನ್ಯಾ, ಕನ್ನಡ ಹಾಗೂ ತಮಿಳು ಚಿತ್ರರಂಗದಲ್ಲಿ ವಿಭಿನ್ನ ಪಾತ್ರಗಳನ್ನು ನಿರ್ವಹಿಸುವ ಮೂಲಕ ಗುರುತಿಸಿಕೊಂಡಿದ್ದಾರೆ. ಇದೀಗ ಅವರು ಸಂದೇಶ್ ಪ್ರೊಡಕ್ಷನ್ ನಿರ್ಮಾಣದ, ಸೃಜನ್ ಲೋಕೇಶ್ ನಿರ್ದೇಶನದ ಜಿಎಸ್‌ಟಿ ಚಿತ್ರದ ಚಮೇಲಿ ಚಲ್ ಚಲ್ ಡ್ಯಾನ್ಸ್ ನಂಬರ್ ಹಾಡಿನಲ್ಲಿ ಅದ್ಭುತವಾದ ಮಾದಕ ನೃತ್ಯ ಪ್ರದರ್ಶನ ನೀಡುವ ಮೂಲಕ ಪಡ್ಡೆ ಹುಡುಗರ ನಿದ್ದೆ ಕೆಡಿಸಿದ್ದಾರೆ. ವಿಜಯ್ ಈಶ್ವರ್ ರಚನೆಯ 'ಪೌಡ್ರ, ಗೀಡ್ರ, ಹಚ್ಕೊಂಡು. ನಾನು ಕಾಶ್ಮೀರಿ ಕೇಸರಿ ತಿನ್ಕಂಡ್ ಬೆಳೆದವ್ಳು' ಎಂಬ ಹಾಡಲ್ಲಿ ನಾಯಕ ಸೃಜನ್ ಲೋಕೇಶ್, ಚಂದನ್ ಶೆಟ್ಟಿ, ತಬಲಾ ನಾಣಿ ಅವರ ಜತೆ ಸಂಹಿತಾ ಸಖತ್ ಸ್ಟೆಪ್ಸ್ ಹಾಕಿದ್ದಾರೆ. ಈ ಹಾಡೇ ಜಿಎಸ್‌ಟಿ ಚಿತ್ರದ ಹೈಲೈಟ್ ಆಗುತ್ತಿದ್ದು, ಎಲ್ಲಾ ಕಡೆ ವೈರಲ್ ಆಗುತ್ತಿದೆ. ಈ ಹಾಡಲ್ಲಿ ಸಂಹಿತಾ ಅವರು ಅದ್ಭುತ ಪರ್ಫಾರ್ಮನ್ಸ್ ನೀಡಿದ್ದಾರೆ ಎಂದು ಹೊಗಳುತ್ತಿದ್ದಾರೆ. ಕಳೆದ ಹಲವಾರು ವರ್ಷಗಳಿಂದ ಸಾಕಷ್ಟು ಚಿತ್ರಗಳಲ್ಲಿ ನಟಿಸಿರುವ ಸಂಹಿತಾ ವಿನ್ಯಾ, ಅವರ ಅಭಿಮಾನಿಗಳ ಬಳಗ ದೊಡ್ಡದು. ಅವರ ನಟನೆಯ ಎಲ್ಲಾ ಚಿತ್ರಗಳಿಗೂ ಅವರ ಅಭಿಮಾನಿಗಳೇ ಥೇಟರ್ ಮುಂದೆ ಕಟೌಟ್ ನಿಲ್ಲಿಸುವ ಮೂಲಕ ಹೊಸ ಟ್ರೆಂಡ್ ಸೃಷ್ಟಿಸಿದ್ದಾರೆ. ಸದ್ಯ ಸಂಹಿತಾ ವಿನ್ಯಾ ಅಭಿನಯದ ಜಿಎಸ್‌ಟಿ ಈ ವಾರ ತೆರೆ ಕಾಣುತ್ತಿದ್ದು, ಮಿಕ್ಸಿಂಗ್ ಪ್ರೀತಿ, ಮೆಜೆಸ್ಟಿಕ್ -2, ಆಯುಧ, ಸ್ವಾಭಿಮಾನಿ, ಯಾಕೋ ಬೇಜಾರು, ವಿದೂಷಕ ಮುಂತಾದ ಚಿತ್ರಗಳು ಬಿಡುಗಡೆಗೆ ಸಿದ್ಧವಾಗಿವೆ. ಅಮೃತಘಳಿಗೆ, ಲಂಗೋಟಿ ಮ್ಯಾನ್ ಅಲ್ಲದೆ ತೆಲುಗಿನ ಯು ಆರ್ ಮೈ ಹೀರೋ ಚಿತ್ರದಲ್ಲೂ ಸಂಹಿತಾ ವಿನ್ಯಾ ನಾಯಕಿಯಾಗಿ ನಟಿಸಿದ್ದಾರೆ. ಹಾಲು ತುಪ್ಪ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ ಸಂಹಿತಾ ವಿನ್ಯಾ, ಸೀತಮ್ಮ ಬಂದಳು ಸಿರಿಮಲ್ಲಿಗೆ ತೊಟ್ಟು, ಅಮೃತ ಘಳಿಗೆ, ವಿಷ್ಣು ಸರ್ಕಲ್, ನಸಾಬ್, ಮಿಕ್ಸಿಂಗ್ ಪ್ರೀತಿ, ಸ್ವಾಭಿಮಾನಿ ಅಲ್ಲದೆ ತೆಲುಗು, ತಮಿಳು ಸೇರಿದಂತೆ 18ಕ್ಕೂ ಹೆಚ್ಚು ಚಿತ್ರಗಳಲ್ಲಿ ವಿಭಿನ್ನ ಪಾತ್ರಗಳನ್ನು ನಿರ್ವಹಿಸಿದ್ದಾರೆ. ಇದಲ್ಲದೆ ತಮಿಳಲ್ಲಿ ಜೀವಾ ಸಹೋದರ ಜತಿನ್ ರಮೇಶ್ ಅಭಿನಯದ ಸಿನಿಮಾ, ಅಲ್ಲದೆ ದೊಡ್ಡ ಮಟ್ಟದಲ್ಲಿ ತಯಾರಾಗುತ್ತಿರುವ ಹಿಡನ್ ಕ್ಯಾಮೆರಾ ಚಿತ್ರದಲ್ಲಿ ಸಂಹಿತಾ ನಾಯಕಿಯಾಗಿ ನಟಿಸುತ್ತಿದ್ದು, ಆ ಚಿತ್ರದ ಕೆಲಸ ಕೇರಳದಲ್ಲಿ ನಡೆಯುತ್ತಿದೆ. ಇದಲ್ಲದೆ ಮಿಕ್ಸಿಂಗ್ ಕಾದಲ್ ಎಂಬ ತಮಿಳು ಚಿತ್ರ ಬಿಡುಗಡೆಗೆ ರೆಡಿಯಿದೆ. ಇದರ ಜತೆಗೆ ಬಾಲಿವುಡ್ ನಿಂದಲೂ ಸಂಹಿತಾ ಗೆ ಸಾಕಷ್ಟು ಚಿತ್ರಗಳಿಗೆ ಆಫರ್ಸ್ ಬರುತ್ತಿವೆ. ಅಚ್ಚಕನ್ನಡದ ಪ್ರತಿಭೆಯಾದ ಸಂಹಿತಾ ವಿನ್ಯಾ, ಕನ್ನಡ ಮಾತ್ರವಲ್ಲದೆ ಸೌತ್ ಫಿಲಂ ಇಂಡಸ್ಟ್ರಿಯಲ್ಲಿ ತನ್ನದೇ ಆದ ಛಾಪು ಮೂಡಿಸಿದ್ದಾರೆ.

## ಬೆಡ್‌ಶೀಟ್ ಕೊಡಿಸುವಂತೆ ಕೋರ್ಟ್‌ನಲ್ಲಿ ದರ್ಶನ್ ಬೇಡಿಕೆ


ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಬೆಡ್‌ಶೀಟ್‌ಗಾಗಿ ಕೋರ್ಟ್‌ನಲ್ಲಿ ಬೇಡಿಕೆ ಇಟ್ಟಿದ್ದಾರೆ. ಚಳಿ ತಡೆಯೋಕೆ ಆಗದೇ ನಿದ್ದೆ ಬರ್ತಿಲ್ಲ, ಬೆಡ್ ಶೀಟ್ ಕೊಡಿಸುವಂತೆ ಜಡ್ಜ್ ಮುಂದೆ ನಟ ಮನವಿ ಮಾಡಿಕೊಂಡಿದ್ದಾರೆ. ಟ್ರಯಲ್ ಆರಂಭ ಸಂಬಂಧ ಇಂದು ಪರಪ್ಪನ ಅಗ್ರಹಾರ ಜೈಲಿಂದ ಕೋರ್ಟ್‌ಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ದರ್ಶನ್, ಪವಿತ್ರ ಗೌಡ ಮತ್ತು ಇತರೆ ಆರೋಪಿಗಳು ಹಾಜರಾಗಿದ್ದರು. ಈ ವೇಳೆ ಒಂದು ಮನವಿ ಇದೆ ಎಂದ ಆರೋಪಿ ನಾಗರಾಜ್, ಬೆಡ್‌ಶೀಟ್ ಕೊಡಿಸುವಂತೆ ಮನವಿ ಮಾಡಿದರು.

'ಸ್ವಾಮಿ ಬೆಡ್‌ಶೀಡ್ ಕೊಡಿಸಿ, ಇವರು ಕೊಡ್ತಿಲ್ಲ. ಮನೆಯಿಂದ ತಂದು ಕೊಟ್ರೆ ಅದನ್ನೂ ಕೊಡೋದಕ್ಕೆ ಬಿಡ್ತಿಲ್ಲ' ಅಂತಾ ಅಳಲನ್ನು ತೋಡಿಕೊಂಡರು. ಈ ವೇಳೆ ಮುಂದೆ ಬಂದ ದರ್ಶನ ಮೈಕ್ ಹಿಡಿದು, ಸ್ವಾಮಿ ಇದು ನನ್ನೊಬ್ಬನ ಸಮಸ್ಯೆ ಅಲ್ಲ. ಎಲ್ಲರ ಸಮಸ್ಯೆ. ತುಂಬಾನೆ ಚಳಿ ಇದೆ ಸರ್. ಚಳಿಗೆ ರಾತ್ರಿ ಎಲ್ಲಾ ನಿದ್ದೆ ಬರ್ತಿಲ್ಲ. ನಿದ್ದೆ ಇಲ್ಲದೆ ರಾತ್ರಿಯೆಲ್ಲಾ ಎದ್ದು ಕೂರ್ತಿದ್ದೀವಿ. ಮೂಲೆಯಲ್ಲಿ ಕುಳಿತು ಕಾಲ ದೂಡ್ತಿದ್ದೀವಿ. ಎಲ್ಲರಿಗೂ ಪ್ರಾಬ್ಲಂ ಆಗಿದೆ ಸರ್. ಸಿಕ್ಕಪಟ್ಟೆ ಚಳಿ ಇದೆ, ಬೆಡ್‌ಶೀಟ್ ಕೊಡಿಸಿ ಎಂದು ಕೇಳಿದರು. ಆರೋಪಿ ನಾಗರಾಜ್ ವಿಚಾರ ಪ್ರಸ್ತಾಪ ಮಾಡಿದಾಗಲೇ ಗರಂ ಆದ ಜಡ್ಜ್, ಜೈಲಾಧಿಕಾರಿ ಶಂಕರ್‌ಗೆ ಚಳಿ ಬಿಡಿಸಿದರು. ಚಳಿಗಾಲ ಹೆಚ್ಚಾಗಿದೆ, ನೀವು ಬೆಡ್‌ಶೀಟ್ ಕೊಡೋದಕ್ಕೆ ಏನು ಸಮಸ್ಯೆ ಅವರು ಹೇಗೆ ಮಲ್ಕೊಬೇಕು? ಇದನ್ನೆಲ್ಲಾ ನಾವೇ ಹೇಳಬೇಕಾ ಅಂತಾ ಗರಂ ಆದರು. ದರ್ಶನ್ ಮನವಿ ಬಳಿಕ ಜೈಲರ್‌ಗೆ ಆದೇಶ ಮಾಡಿದ ನ್ಯಾಯಾಧೀಶರು ಕಾನೂನಿನಲ್ಲಿ ಅವಕಾಶ ಇರೋದನ್ನ ಕೊಡಿ. ಹೊರಗೆ ಚಳಿ ಜಾಸ್ತಿಯಿದೆ ಗೊತ್ತಾಗಲ್ವ ಅಂತಾ ಜಾಡಿಸಿದರು. ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಪವಿತ್ರ ಗೌಡ ಸೇರಿದಂತೆ 6 ಆರೋಪಿಗಳು ಜೈಲಿನಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾದರೆ, ಉಳಿದ ಆರೋಪಿಗಳು ಖುದ್ದು ಹಾಜರಿದ್ದರು. ಸಿಆರ್‌ಪಿಸಿ 292 ಅಡಿ ಸಾಕ್ಷಿಗಳ ವಿಚಾರಣೆ ಸಂಬಂಧ ಪ್ರಾಸಿಕ್ಯೂಷನ್ ಸಲ್ಲಿಸಿರುವ ಅರ್ಜಿಗೆ ಪವಿತ್ರ ಗೌಡ ಪರ ವಕೀಲರು ಆಕ್ಷೇಪ ಎತ್ತಿದರು. ಈ ಸಂದರ್ಭದಲ್ಲಿ ಈ ಅರ್ಜಿ ಸಲ್ಲಿಸೋದಕ್ಕೆ ಬರೋದಿಲ್ಲ ಅಂತಾ ವಾದಿಸಿದರು. ಡಿ.3 ಕ್ಕೆ ಮುಂದಿನ ವಿಚಾರಣೆ ಮುಂದೂಡಿಕೆಯಾಗಿದೆ.



## ಪರಿಷೆಯಲ್ಲಿ ಮುಖ ಮುಚ್ಕೊಂಡ್ ಓಡಾಡಿದ ರಚ್ಚು!


ಸೆಲೆಬ್ರಿಟಿಗಳು ಸಾಮಾನ್ಯರಂತೆ ಸಾರ್ವಜನಿಕ ಸ್ಥಳದಲ್ಲಿ ಜನರೊಂದಿಗೆ ಬೆರೆಯಲು ಸಾಧ್ಯವಾಗುವುದಿಲ್ಲ. ಹೀಗ್ ಮಾಡ್ಬೇಕು ಎಂದು ಅಪೇಕ್ಷೆ ಉಂಟಾದಾಗ ಕೆಲವರು ಮುಖವನ್ನು ಮುಚ್ಚಿಕೊಂಡು ಇಷ್ಟ ಬಂದಂತೆ ಸಾರ್ವಜನಿಕ ಸ್ಥಳಕ್ಕೆ ಹೋಗುತ್ತಾರೆ. ಇದೀಗ ಹಾಗೆಯೇ ಮಾಡಿದ್ದಾರೆ ಡಿಂಪಲ್ ಕ್ವೀನ್ ರಚಿತಾ ರಾಮ್. ಐತಿಹಾಸಿಕ ಹಿನ್ನೆಲೆಯುಳ್ಳ ಬೆಂಗಳೂರಿನ ಬಸವನಗುಡಿಯ ಕಡಲೇಕಾಯಿ ಪರಿಷೆಯಲ್ಲಿ ಮುಖಕ್ಕೆ ಸಿಂಹದ ಮುಖವಾಡದ ಮಾಸ್ಕ್ ಧರಿಸಿ ಬಿಂದಾಸ್ ಆಗಿ ಸುತ್ತಾಡಿದ್ದಾರೆ. ಪರಿಷೆ ಸುತ್ತುವ ರಚ್ಚು ಇದು ಒಂದು ಅದ್ಭುತ ಅನುಭವ ಎಂದು ಹೇಳಿ ಖುಷಿ ಪಟ್ಟಿದ್ದಾರೆ. ವಿಶೇಷ ಅಂದ್ರೆ ಸೆಲ್ಫಿ ತೆಗೆದುಕೊಳ್ಳುತ್ತಿದ್ದ ಜನರ ಸಮೂಹದಲ್ಲಿ ನಿಂತು ಅವರಾಗೇ ಹೋಗಿ ಪೋಸ್ ಕೊಟ್ಟಿದ್ದಾರೆ. ಅಲ್ಲಿದ್ದವರಿಗೆ ಯಾರಿಗೂ ತಮ್ಮನ್ನು ಕಂಡುಹಿಡಿಯಲು ಸಾಧ್ಯವಾಗಿಲ್ಲ ಎಂದು ಹೇಳಿ ಖುಷಿ ಪಟ್ಟಿದ್ದಾರೆ.



ಬಳಿಕ ವೀಡಿಯೋದಲ್ಲಿ ಮನವಿ ಮಾಡಿ 'ನನ್ನ ಜೊತೆ ಸೆಲ್ಫಿ ತಗೊಂಡವರು ನನಗೆ ಟ್ಯಾಗ್ ಮಾಡಿ ಎಂದಿದ್ದಾರೆ.



## ಇನ್ಮುಂದೆ ವರ್ಷಕ್ಕೆ 2 ಸಿನಿಮಾ ಮಾಡ್ತಾರಾ ಧ್ರುವ ಸರ್ಜಾ?



ಧ್ರುವ ಸರ್ಜಾ ಒಂದು ಸಿನಿಮಾ ಮಾಡೋಕೆ ಕನಿಷ್ಠ ಮೂರು ವರ್ಷಗಳನ್ನ ತೆಗೆದುಕೊಳ್ತಿದ್ರು. ಸಿನಿಮಾಗಳು ತುಂಬಾ ತಡವಾಗ್ತಿದೆ ಅನ್ನೋ ಕೂಗು ಅವ್ರ ಅಭಿಮಾನಿ ಬಳಗದಲ್ಲಿ ಕೇಳಿ ಬರ್ತಿದೆ.

ಹೀಗಾಗಿ ಧ್ರುವ ಸರ್ಜಾ ಒಂದು ವರ್ಷದಲ್ಲಿ ಎರಡು ಸಿನಿಮಾ ಮಾಡುವ ಪ್ರಯತ್ನಕ್ಕೆ ಕೈಹಾಕಿದಂತೆ ಕಾಣುತ್ತಿದೆ. ತಮ್ಮ ಕ್ರಿಮಿನಲ್ ಸಿನಿಮಾದ ಮುಹೂರ್ತದ ಸುದ್ದಿಗೋಷ್ಠಿಯಲ್ಲಿ ಬೇಗ ಬೇಗ ಸಿನಿಮಾ ಮಾಡ್ತಿನಿ ಎಂದಿದ್ದಾರೆ. ಅಂದಹಾಗೆ ಧ್ರುವ ಸರ್ಜಾ ಈ ವೇಳೆ ಮಾತನಾಡಿ. ಉತ್ತರ ಕರ್ನಾಟಕ ಹಾವೇರಿಯ ಹಾನಗಲ್‌ನಲ್ಲಿ ನಡೆದ ಪ್ರೇಮ ಕಥೆಯಾಧಾರಿತ ಸಿನಿಮಾ ಮಾಡ್ತಿದ್ದೀನಿ. 99% ಸ್ಟೋರಿ ಏನಿದೆ ಅದೇ ತರ ಶೂಟ್ ಮಾಡ್ತೀವಿ. ಭರ್ಜರಿಯಲ್ಲಿ ತಾಯಿ ಆದ ನಂತ್ರ ತಾರಮ್ಮ ಮತ್ತೆ ಅಮ್ಮನಾಗಿ ಕಾಣಿಸಿಕೊಳ್ತಿದ್ದಾರೆ. ರಚಿತಾ ಭರ್ಜರಿ ನಂತ್ರ ಟಚ್ ಅಲ್ಲಿ ಇದ್ವಿ. ಕಥೆ ಕೇಳಿದ ಮೇಲೆ ರಚಿತಾಗೆ ಹೇಳ್ದೆ ಅವರು ಕೂಡಾ ಒಪ್ಪಿಕೊಂಡ್ರು. ತುಂಬಾನೇ ಯುನಿಕ್ ಸಬ್ಜೆಕ್ಟ್.. ಇಡಿ ಸಿನಿಮಾ ಉತ್ತರ ಕರ್ನಾಟಕದ ಭಾಷೆಯಲ್ಲೇ ಇರುತ್ತೆ ಅದಕ್ಕಾಗಿ ತಯಾರಿ ಮಾಡಿಕೊಳ್ತಿದ್ದೀನಿ ಎಂದು ಹೇಳಿದರು. ಮಾತು ಮುಂದುವರೆಸಿ ಮಾರ್ಚ್ ಅಷ್ಟರಲ್ಲೇ ಸಿನಿಮಾ ಮುಗಿಸ್ಬೇಕು ಅಂತಾ ಪ್ಲ್ಯಾನ್ ಕೂಡಾ ಮಾಡಿದ್ದೇವೆ. ಇನ್ಮೇಲೆ ಒಂದು ಸಿನಿಮಾ ಮುಗಿತಿದ್ದಂತೆ ಮತ್ತೊಂದು ಸಿನ್ಮಾ ಒಪ್ಕೊತೀನಿ. ಬೇಗ ಬೇಗ ಸಿನಿಮಾ ಮಾಡ್ತೀನಿ ಎಂದು ಧ್ರುವ ಸರ್ಜಾ ವೇಳೆ ಮಾತನಾಡಿದ್ದಾರೆ.

**ಬೇಗ ಬೇಗ ಸಿನಿಮಾ ಮಾಡ್ತಿನಿ**


## ಯಾವಾಗಲೂ ಭಾರತವನ್ನು ಬೆಂಬಲಿಸಲು ಕಾರಣವೇನು?

ತಾವು ಯಾಕೆ ಯಾವಾಗಲು ಭಾರತವನ್ನು ಬೆಂಬಲಿಸುತ್ತೇನೆ ಎಂಬುದಕ್ಕೆ ಮೂರು ಸರಳ ಕಾರಣಗಳನ್ನು ನೀಡುವ ಮೂಲಕ ಇಂಗ್ಲೆಂಡ್ ಕ್ರಿಕೆಟ್ ತಂಡದ ಮಾಜಿ ಬ್ಯಾಟರ್ ಕೆವಿನ್ ಪೀಟರ್ಸನ್ ಬಹಿರಂಗಪಡಿಸಿದ್ದಾರೆ. ಇಂಗ್ಲೆಂಡ್ ತಂಡದ ಪರವಾಗಿ ಉತ್ತಮವಾಗಿ ಆಡುತ್ತಿದ್ದ ಕೆವಿನ್ ಪೀಟರ್ಸನ್ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ (ಐಪಿಎಲ್) ಭಾಗವಹಿಸಿದ ಬಳಿಕ ಭಾರತದಾದ್ಯಂತ ಅಪಾರ ಅಭಿಮಾನಿಗಳನ್ನು ಗಳಿಸಿದ್ದಾರೆ. ಕೆವಿನ್ ಪೀಟರ್ಸನ್ ಕ್ರಿಕೆಟ್‌ನಿಂದ ನಿವೃತ್ತರಾಗಿ ಸುಮಾರು ಹತ್ತು ವರ್ಷಗಳೇ ಕಳೆದಿವೆ. ಆದರೆ, ಅವರು ಆಗಾಗ ಭಾರತದಲ್ಲಿ ಕಾಣಿಸಿಕೊಳ್ಳುತ್ತಿರುತ್ತಾರೆ ಮತ್ತು ಇಲ್ಲಿ ಅವರ ಜನಪ್ರಿಯತೆ ವ್ಯಾಪಕವಾಗಿದೆ. ವಿಶೇಷವಾಗಿ ಐಪಿಎಲ್ ವೀಕ್ಷಕ ವಿವರಣೆಗಾರರಾಗಿ, ತಂಡದ ತರಬೇತುದಾರರಾಗಿ ಕಾಣಿಸಿಕೊಳ್ಳುತ್ತಾರೆ. ಅನೇಕ ಸಂದರ್ಭದಲ್ಲಿ ಅವರು ಭಾರತವನ್ನು ಹೊಗಳಿರುವುದನ್ನು ಕಾಣಬಹುದಾಗಿದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಪೀಟರ್ಸನ್, ನಾನು ಯಾಕೆ ಭಾರತದ ಪರವಾಗಿ ಮಾತನಾಡುತ್ತೇನೆ ಎಂದು ಜನರು ಆಗಾಗ ನನ್ನನ್ನು ಪ್ರಶ್ನಿಸುತ್ತಾರೆ. ಉತ್ತರ ಸರಳವಾಗಿದೆ. ನನಗೆ ಭಾರತದ ಜೊತೆ 20 ವರ್ಷಗಳಿಗೂ ಹೆಚ್ಚು ಕಾಲದ ನಂಟಿದೆ. ಅನೇಕ ಪ್ರವಾಸಗಳಿಗೆ ಹೋಗಿದ್ದೇನೆ. ನಾನು ಅಲ್ಲಿ ಒಮ್ಮೆಯೂ ಅಗೌರವ, ನಕಾರಾತ್ಮಕತೆ, ನಂಬಿಸಿ ಮೋಸ ಮಾಡುವುದು ಸೇರಿದಂತೆ ಯಾವುದೇ ಕೆಟ್ಟ ಸನ್ನಿವೇಶವನ್ನು ಎದುರಿಸಿಲ್ಲ' ಎಂದು ಹೇಳಿದ್ದಾರೆ.

'ಭಾರತೀಯರು ಸದಾ ಪ್ರೀತಿ, ದಯೆ, ನಿಷ್ಠೆ ಮತ್ತು ಗೌರವವನ್ನು ಪ್ರತಿ ಬಾರಿಯೂ ನನಗೆ ನೀಡಿದ್ದಾರೆ' ಎಂದು ಎಕ್ಸ್ ಖಾತೆಯಲ್ಲಿ ಸುಧೀರ್ಘ ಪೋಸ್ಟ್ ಒಂದನ್ನು ಬರೆದು ವಿವರಿಸಿದ್ದಾರೆ. 'ನಾನು ಅಲ್ಲಿ ಅನೇಕರ ಸ್ನೇಹ ಸಂಪಾದಿಸಿದ್ದೇನೆ. ಅವರ ಸ್ನೇಹವನ್ನು ನಾನು ಅಮೂಲ್ಯವೆಂದು ಪರಿಗಣಿಸುತ್ತೇನೆ. ಅಲ್ಲಿನ ಸ್ನೇಹಿತರು ನನಗೆ ಕುಟುಂಬವಿದ್ದಂತೆ ನಾನು ಅವರ ಗೌರವವನ್ನು ಕಾಪಾಡಿಕೊಳ್ಳಬೇಕು ಎಂಬುದು ನನಗೆ ತಿಳಿದಿದೆ.

ನಾನು ಭಾರತ ವಿರುದ್ಧ ಆಡಿದಾಗಲು ಮತ್ತು ಐಪಿಎಲ್ ತಂಡದ ಪರ ಅಡಿದಾಗಲೂ ನನಗೆ ಭಾರತೀಯರು ಪ್ರೀತಿ ಕೊಟ್ಟಿದ್ದಾರೆ ಎಂದು ಬರೆದಿದ್ದಾರೆ. ಒಂದು ದೇಶ ಮತ್ತು ಅಲ್ಲಿನ ಜನರು ಜೀವನದುದ್ದಕ್ಕೂ ಶುದ್ಧ ಪ್ರೀತಿ ನೀಡಿದಾಗ, ನಾವು ಅವರಿಗೆ ಕೃತಜ್ಞರಾಗಿರಬೇಕು. ಭಾರತೀಯರು ನನಗೆ ಅವರ ಹೃದಯದಲ್ಲಿ ಸ್ಥಾನ ಕೊಟ್ಟಿದ್ದಾರೆ. ಹಾಗಾಗಿ ನನ್ನ ಹೃದಯದಲ್ಲಿ ಭಾರತೀಯರ ಪರವಾದ ಭಾವನೆ ಇರುತ್ತದೆ. ನಾನು ಅವರ ಪ್ರೀತಿಗೆ ಎಂದೆಂದಿಗೂ ಕೃತಜ್ಞರಾಗಿರಬೇಕು ಎಂದು ಬರೆದಿದ್ದಾರೆ.



## ದ.ಆಫ್ರಿಕಾ ವಿರುದ್ಧದ ಏಕದಿನ ಸರಣಿಯಿಂದ ಹಾರ್ದಿಕ್, ಬೂಮ್ರಾ ಹೊರಗುಳಿಯುವ ಸಾಧ್ಯತೆ

ಕಾರ್ಯಭಾರ ಒತ್ತಡ ನಿರ್ವಹಣೆಯ ಭಾಗವಾಗಿ ಮುಂಬರುವ ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಿಂದ ಟೀಮ್ ಇಂಡಿಯಾದ ಆಟಗಾರರಾದ ಹಾರ್ದಿಕ್ ಪಾಂಡ್ಯ ಹಾಗೂ ಜಸ್‌ಪ್ರೀತ್ ಬೂಮ್ರಾ ಹೊರಗುಳಿಯುವ ಸಾಧ್ಯತೆಯಿದೆ. ಈಗಷ್ಟೇ ಗಾಯದಿಂದ ಚೇತರಿಸಿಕೊಳ್ಳುತ್ತಿರುವ ಪಾಂಡ್ಯ ಹಾಗೂ ಬೂಮ್ರಾ ಅವರಿಗೆ ವಿಶ್ರಾಂತಿ ಕಲ್ಪಿಸುವ ಸಾಧ್ಯತೆಯಿದೆ. ತವರಿನಲ್ಲಿ ಮುಂದಿನ ವರ್ಷ ಐಸಿಸಿ ಟ್ವೆಂಟಿ-20 ವಿಶ್ವಕಪ್ ನಡೆಯಲಿರುವ ಹಿನ್ನೆಲೆಯಲ್ಲಿ ಪಾಂಡ್ಯ ಹಾಗೂ ಬೂಮ್ರಾ ಚುಟುಕು ಕ್ರಿಕೆಟ್‌ನತ್ತ ಹೆಚ್ಚಿನ ಗಮನ ಕೇಂದ್ರಿಕರಿಸಲಿದ್ದಾರೆ. ಕಳೆದ ಸೆಪ್ಟೆಂಬರ್‌ನಲ್ಲಿ ದುಬೈಯಲ್ಲಿ ನಡೆದ ಏಷ್ಯಾ ಕಪ್ ಟಿ20 ಕ್ರಿಕೆಟ್ ಟೂರ್ನಿಯ ವೇಳೆ ಪಾಂಡ್ಯ ಗಾಯಗೊಂಡಿದ್ದರು. ಬಳಿಕ ಪಾಕಿಸ್ತಾನ ವಿರುದ್ಧ ನಡೆದ ಫೈನಲ್ ಪಂದ್ಯಕ್ಕೆ ಅಲಭ್ಯರಾಗಿದ್ದರು. ಗಾಯದ ಹಿನ್ನೆಲೆಯಲ್ಲಿ ಕಳೆದ ಆಸ್ಟ್ರೇಲಿಯಾ ಪ್ರವಾಸದಲ್ಲೂ ಹಾರ್ದಿಕ್ ಲಭ್ಯರಿರಲಿಲ್ಲ. 'ಹಾರ್ದಿಕ್ ಚೇತರಿಸಿಕೊಳ್ಳುತ್ತಿದ್ದಾರೆ. ಅವರು ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ ನಲ್ಲಿ ಆಟಕ್ಕೆ ಮರಳುವ ದಿನಚರಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಕಾರ್ಯಭಾರ ನಿರ್ವಹಣೆಯ ಹಿನ್ನೆಲೆಯಲ್ಲಿ ಶೀಘ್ರದಲ್ಲೇ 50 ಓವರ್‌ಗಳ ಕ್ರಿಕೆಟ್‌ಗೆ ಮರಳುವುದು ಅಪಾಯಕಾರಿಯಾಗಿದೆ. ಟಿ20 ವಿಶ್ವಕಪ್‌ವರೆಗೆ ಹಾರ್ದಿಕ್ ಚುಟುಕು ಕ್ರಿಕೆಟ್‌ನತ್ತ ಗಮನ ಹರಿಸಲಿದ್ದು, ಬಿಸಿಸಿಐ ವೈದ್ಯಕೀಯ ತಂಡವು ನಿಗಾ ವಹಿಸಲಿದೆ' ಎಂದು ಬಿಸಿಸಿಐ ಮೂಲಗಳು ತಿಳಿಸಿವೆ. ಇದಕ್ಕೂ ಮೊದಲು ಸೈಯದ್ ಮುಸ್ತಾಕ್ ಅಲಿ ಟ್ರೋಫಿಯಲ್ಲಿ ಬರೋಡಾ ಪರ ಆಡಲಿರುವ ಹಾರ್ದಿಕ್ ತಮ್ಮ ಫಿಟ್ನೆಸ್ ಸಾಬೀತು ಮಾಡಲಿದ್ದಾರೆ. ದಕ್ಷಿಣ ಆಫ್ರಿಕಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯು ನ. 30ರಿಂದ ಆರಂಭವಾಗಲಿದೆ.





## ಏಷ್ಯಾ ಕಪ್ ರೈಸಿಂಗ್ ಸ್ಟಾರ್ ಟಿ20: ಸೆಮಿಫೈನಲ್‌ಗೆ ಭಾರತ ಎ

ಇಲ್ಲಿನ ವೆಸ್ಟ್ ಎಂಡ್ ಪಾರ್ಕ್ ಮೈದಾನದಲ್ಲಿ ನಡೆದ ಏಷ್ಯಾ ಕಪ್ ರೈಸಿಂಗ್ ಸ್ಟಾರ್ ಟಿ20 ಟೂರ್ನಿಯ 10ನೇ ಪಂದ್ಯದಲ್ಲಿ ಭಾರತ ಎ ತಂಡ ಒಮನ್ ವಿರುದ್ಧ ಭರ್ಜರಿ ಜಯ ಸಾಧಿಸಿ ಸೆಮಿಫೈನಲ್ ಪ್ರವೇಶಿಸಿದೆ. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಒಮನ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 135 ರನ್ ಕಲೆಹಾಕಿತು. ಈ ಸುಲಭ ಗುರಿ ಬೆನ್ನಟ್ಟಿದ ಭಾರತ ಎ ತಂಡ 17.5 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ಗುರಿ ತಲುಪಿತು. ಸುಲಭ ಗುರಿ ಬೆನ್ನಟ್ಟಿದ ಭಾರತ ಎ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಆರಂಭಿಕರಾದ ಪ್ರಿಯಾಂಶ್ ಆರ್ಯ (10) ರನ್ ಹಾಗೂ ವೈಭವ್ ಸೂರ್ಯವಂಶಿ (12) ರನ್‌ಗಳಿಸಿ ವಿಕೆಟ್ ಒಪ್ಪಿಸಿದರು.

ನಂತರ ಜೊತೆಯಾದ ನಮನ್ ಧೀರ್ ಹಾಗೂ ಹರ್ಷ್ ದುಬೆ ಉತ್ತಮ ಜೊತೆಯಾಟ ನಡೆಸಿದರು. ನಮನ್ ಧೀರ್ 19 ಎಸೆತಗಳಲ್ಲಿ 2 ಸಿಕ್ಸರ್ ಹಾಗೂ 2 ಬೌಂಡರಿ ನೆರವಿನಿಂದ 30 ರನ್ ಬಾರಿಸಿದರು. ಹರ್ಷ್ ದುಬೆ 44 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 7 ಬೌಂಡರಿ ನೆರವಿನಿಂದ ಅಜೇಯ 53 ರನ್ ಕಲೆಹಾಕಿ ತಂಡದ ಗೆಲುವಿಗೆ ಕಾರಣರಾದರು.

**ಸಂಕ್ಷಿಪ್ತ ಸ್ಕೋರ್:** ಒಮನ್ 20 ಓವರ್‌ಗಳಲ್ಲಿ 135/7 (ವಾಸಿಮ್ ಅಲಿ ಅಜೇಯ 54: ಗುರ್ಜನ್ ಪ್ರೀತ್ ಸಿಂಗ್ 372, ಸುಯಾಶ್ ಶರ್ಮಾ 122), ಭಾರತ ಎ 17.5 ಓವರ್‌ಗಳಲ್ಲಿ 138/4 (ಹರ್ಷ್ ದುಬೆ ಅಜೇಯ 53).



## ತವರಿನ ಅಂಗಳದಲ್ಲಿ ಗೆದ್ದ ಕರ್ನಾಟಕ


ಬೌಲರ್‌ಗಳಿಗೆ ಹೆಚ್ಚಿನ ನೆರವು ನೀಡುತ್ತಿದ್ದ ಪಿಚ್‌ನಲ್ಲಿ ಮಧ್ಯಮ ಕ್ರಮಾಂಕದ ಬ್ಯಾಟ್ಸ್‌ಮನ್‌ಗಳು ಎಚ್ಚರಿಕೆಯ ಆಟ ಆಡಿದ್ದರಿಂದ ಕರ್ನಾಟಕ ತಂಡವು 19 ವರ್ಷದೊಳಗಿನವರ ಕೂಚ್ ಬಿಹಾರ್ ಟ್ರೋಫಿ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ 3 ವಿಕೆಟ್‌ಗಳಿಂದ ಉತ್ತರಾಖಂಡ ತಂಡವನ್ನು ಮಣಿಸಿತು. ಇಲ್ಲಿನ ಆಲೂರಿನ ಕೆಎಸ್‌ಸಿಎ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಗೆಲುವಿಗೆ 159ರನ್‌ಗಳ ಗುರಿ ಪಡೆದಿದ್ದ ರಾಜ್ಯ ತಂಡ 45.2 ಓವರ್‌ಗಳಲ್ಲಿ 7 ವಿಕೆಟ್‌ಗೆ 162 ರನ್‌ಗಳನ್ನು ಕಲೆಹಾಕಿ ಸಂಭ್ರಮಿಸಿತು. 7 ಓವರ್‌ಗಳಲ್ಲಿ 1 ವಿಕೆಟ್‌ಗೆ 44ರನ್‌ಗಳಿಂದ ಅಂತಿಮ ದಿನವಾದ ಬುಧವಾರ ಆಟ ಮುಂದುವರಿಸಿದ ಆತಿಥೇಯ ತಂಡ, ಮೊದಲ ಅವಧಿಯ ಎರಡನೇ ಓವರ್‌ನ ಕೊನೆಯ ಎಸೆತದಲ್ಲಿ ಧ್ರುವ್ ಕೃಷ್ಣನ್ ವಿಕೆಟ್ ಕಳೆದುಕೊಂಡಿತು. 17ನೇ ಓವರ್‌ನ ಎರಡನೇ ಎಸೆತದಲ್ಲಿ ನಾಯಕ ಮಣಿಕಂಠ ಶಿವಾನಂದ್ ಹಾಗೂ ಮರು ಓವರ್‌ನ ಮೊದಲ ಎಸೆತದಲ್ಲಿ ನಿತೀಶ್ ಆರ್ಯ (33; 37ಎ, 4ಬೌಂ) ಪೆವಿಲಿಯನ್ ಸೇರಿದಾಗ ಕರ್ನಾಟಕದ ಪಾಳಯದಲ್ಲಿ ಆತಂಕ ಮನೆ ಮಾಡಿತ್ತು. ಮೊದಲ ಇನಿಂಗ್ಸ್‌ನಲ್ಲಿ ಶತಕ ಬಾರಿಸಿದ್ದ ರೋಹಿತ್ ಎ.ಎ. (6) ಮತ್ತು ವೈಭವ್ ಶರ್ಮಾ (28; 37ಎ, 3ಬೌಂ, 1ಸಿ) 5ನೇ ವಿಕೆಟ್ ಜೊತೆಯಾಟದಲ್ಲಿ 35 ರನ್ ಗಳಿಸಿ ತಂಡಕ್ಕೆ ಆಸರೆಯಾದರು. ಎರಡು ರನ್‌ಗಳ ಅಂತರದಲ್ಲಿ ಇವರಿಬ್ಬರೂ ಔಟಾದರು.

## ಸ್ಪಿನ್ ಕೈಚಳಕ; ಇನಿಂಗ್ಸ್ ಜಯದ ಪುಳಕ

**ರಣಜಿ ಟ್ರೋಫಿ**

ಉತ್ತಮ ಲಯದಲ್ಲಿರುವ ಕರ್ನಾಟಕದ ಸ್ಪಿನ್ನರ್ ಶ್ರೇಯಸ್ ಗೋಪಾಲ್ (73ಕ್ಕೆ7 ಮತ್ತು 45ಕ್ಕೆ3) ಮತ್ತು ಶಿಖರ್ ಶೆಟ್ಟಿ (43ಕ್ಕೆ2 ಮತ್ತು 61ಕ್ಕೆ 5) ಅವರ ಸ್ಪಿನ್ ಮೋಡಿಗೆ ಚಂಡೀಗಢ ತಂಡ ರಣಜಿ ಟ್ರೋಫಿ ಪಂದ್ಯದ ಮೂರನೇ ದಿನವಾದ ಇನಿಂಗ್ಸ್ ಮತ್ತು 185 ರನ್‌ಗಳ ಭಾರಿ ಸೋಲು ಅನುಭವಿಸಿತು. ಮಯಂಕ್ ಬಳಗಕ್ಕೆ ಪ್ರಸಕ್ತ ಋತುವಿನಲ್ಲಿ ಇದು ಎರಡನೇ ಗೆಲುವು. ಕರ್ನಾಟಕ ತಂಡ 5 ಪಂದ್ಯಗಳಿಂದ 21 ಅಂಕ ಸಂಗ್ರಹಿಸಿ 'ಬಿ' ಗುಂಪಿನಲ್ಲಿ ಅಗ್ರಸ್ಥಾನಕ್ಕೆ ಏರಿತು. ಮಹಾರಾಷ್ಟ್ರ ತಂಡ (5 ಪಂದ್ಯಗಳಿಂದ 18) ಎರಡನೇ ಸ್ಥಾನದಲ್ಲಿದೆ. ಚಂಡೀಗಢಕ್ಕೆ ಇದು ನಾಲ್ಕನೇ ಸೋಲು. ರಾಜನಗರದ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ಊಟದ ವಿರಾಮದ ನಂತರ ಚಂಡೀಗಢ (ಸೋಮವಾರ: 4 ವಿಕೆಟ್‌ಗೆ 72) ಮೊದಲ ಇನಿಂಗ್ಸ್‌ನಲ್ಲಿ 222 ರನ್‌ಗಳಿಗೆ ಆಲೌಟ್ ಆಯಿತು. ಫಾಲೋಆನ್‌ಗೆ ಒಳಗಾಗಿ ಎರಡನೇ ಇನಿಂಗ್ಸ್ ಆರಂಭಿಸಿದ ಚಂಡೀಗಢ ಹೋರಾಟ ತೋರದೇ ಶರಣಾಯಿತು. ಕೇವಲ ಎರಡೂವರೆ ಗಂಟೆಯಲ್ಲಿ 140 ರನ್‌ಗಳಿಗೆ ಆಲೌಟ್ ಆಯಿತು. ಮೂರನೇ ದಿನ 16 ವಿಕೆಟ್‌ಗಳು ಪತನವಾದವು. ಅದರಲ್ಲಿ 14 ವಿಕೆಟ್‌ಗಳು ಸ್ಪಿನ್ನರ್‌ಗಳ ಪಾಲಾದವು. ಸೌರಾಷ್ಟ್ರ ವಿರುದ್ಧ ಈ ಋತುವಿನಲ್ಲಿ ಪದಾರ್ಪಣೆ ಮಾಡಿರುವ ಎಡಗೈ ಸ್ಪಿನ್ನರ್ ಶಿಖರ್ ಮೊದಲ ಬಾರಿ ಐದು ವಿಕೆಟ್ ಗೊಂಚಲು ಗಳಿಸಿದರು. ಇದು ಅವರಿಗೆ ಮೂರನೇ ಪಂದ್ಯ. ಬೆಳಿಗ್ಗೆ ಪ್ರವಾಸಿ ತಂಡಕ್ಕೆ ಶ್ರೇಯಸ್ ಮೊದಲ ಎಸೆತದಲ್ಲೇ ಪೆಟ್ಟು ಕೊಟ್ಟರು. ಅಂಕಿತ್ ಕೌಶಿಕ್ ಅವರನ್ನು ಎಲ್‌ಬಿ ಬಲೆಗೆ ಕೆಡವಿದರು. ತಾಳ್ಮೆಯಿಂದ ಆಡುತ್ತಿದ್ದ ರಾಜ್ ಬಾವಾ (10, 42ಎ) ಅವರ ವಿಕೆಟ್ ಸಹ ಶ್ರೇಯಸ್ ಪಾಲಾಯಿತು. ಈ ಹಂತದಲ್ಲಿ ನಾಯಕ ಮನನ್ ವೋಹ್ರಾ ಮತ್ತು ಗೌರವ್ ಪುರಿ (32, 62ಎ, 4X6) ಏಳನೇ ವಿಕೆಟ್‌ಗೆ 84 (132) ರನ್ ಸೇರಿಸಿ ಪ್ರತಿರೋಧದ ಮುನ್ಸೂಚನೆ ನೀಡಿದರು. ಗೌರವ್ ಅವರನ್ನು ಬೌಲ್ಡ್ ಮಾಡಿದ ಶಿಖರ್ ಜತೆಯಾಟ ಮುರಿದರು. ಔಟ್ ಆಗುವ ಮೊದಲು ಶ್ರೇಯಸ್ ಬೌಲಿಂಗ್‌ನಲ್ಲಿ ಗೌರವ್ ಸತತ ಮೂರು ಬೌಂಡರಿಗಳನ್ನು ಬಾರಿಸಿದರು. ಒಂದೆಡೆ ವಿಕೆಟ್ ಉರುಳುತ್ತಿದ್ದರೂ ಏಕಾಂಗಿಯಾಗಿ ಹೋರಾಡಿದ ಮನನ್ ವೋಹ್ರಾ ಅಜೇಯ ಶತಕ (106, 161ಎ, 4X12, 6X1) ಬಾರಿಸಿದರು. ಆದರೆ ತಂಡವನ್ನು ಫಾಲೊಆನ್‌ನಿಂದ ಪಾರು ಮಾಡಲು ಸಾಧ್ಯವಾಗಲಿಲ್ಲ. ಎರಡನೇ ದಿನದಾಟದಲ್ಲಿ ಮೂರು ವಿಕೆಟ್ ಕಬಳಿಸಿದ್ದ ಶ್ರೇಯಸ್, ಮೂರನೇ ದಿನಾಟದಲ್ಲಿ ಮತ್ತೆ ನಾಲ್ಕು ವಿಕೆಟ್‌ಗಳನ್ನು ಬುಟ್ಟಿಗೆ ಹಾಕಿಕೊಂಡರು. ಅವರು ಈ ಋತುವಿನಲ್ಲಿ ಎರಡನೇ ಬಾರಿ ಐದು ವಿಕೆಟ್ (73ಕ್ಕೆ 7) ಗೊಂಚಲು ಗಳಿಸಿದರು.

325 ರನ್‌ಗಳ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಆರಂಭಿಸಿದ ಪ್ರವಾಸಿ ತಂಡಕ್ಕೆ ವೇಗಿ ವಿದ್ವತ್ ಕಾವೇರಪ್ಪ ಆರಂಭದಲ್ಲೇ ಆಘಾತ ನೀಡಿದರು. ವಿದ್ವತ್ ಹಾಕಿದ ಮೂರನೇ ಓವರ್‌ನಲ್ಲಿ ಆರಂಭಿಕ ಆಟಗಾರ ಅರ್ಜುನ್ ಆಜಾದ್ ಮಿಡ್ ವಿಕೆಟ್‌ನಲ್ಲಿ ಮೊಹ್ಸಿನ್ ಖಾನ್‌ಗೆ ಕ್ಯಾಚಿತ್ತು ನಿರ್ಗಮಿಸಿದರು. ಶಿವಂ ಭಾಂಬ್ರಿ (43, 47ಎ, 4X4, 6X2) ಮತ್ತು ನಿಖಿಲ್ ಠಾಕೂರ್ (19, 59ಎ, 4X2) ಎರಡನೇ ವಿಕೆಟ್‌ಗೆ 64 ರನ್ (74ಎ) ಸೇರಿಸಿದ್ದೇ ಇನಿಂಗ್ಸ್‌ನ ದೊಡ್ಡ ಜತೆಯಾಟವಾಯಿತು. ಶಿಖರ್ ಹಾಕಿದ 16 ಓವರ್‌ನ ಮೊದಲ ಎಸೆತದಲ್ಲಿ ಶಿವಂ ಮೊದಲ ಸ್ಲಿಪ್‌ನಲ್ಲಿದ್ದ ಸ್ಮರಣ್ ರವಿಚಂದ್ರನ್ ಅವರಿಗೆ ಕ್ಯಾಚಿತ್ತು ನಿರ್ಗಮಿಸಿದರು. ನಂತರ ನಿಯಮಿತವಾಗಿ ವಿಕೆಟ್ ಉರುಳಿದವು. ದಿನದಾಟ ಮುಗಿಯಲು ಎಂಟು ಓವರ್‌ಗಳು ಬಾಕಿ ಇದ್ದಾಗ ವಿಶು ಕಶ್ಯಪ್ ಅವರ ವಿಕೆಟ್ ಕಿತ್ತ ಶಿಖರ್ ಇನಿಂಗ್ಸ್‌ಗೆ ತೆರೆ ಎಳೆದರು. ಬ್ಯಾಟಿಂಗ್‌ನಲ್ಲೂ ಅವರು ಅರ್ಧಶತಕ (59) ಗಳಿಸಿದ್ದರು.



> ಬ್ಯಾಟಿಂಗ್ ಮತ್ತು ಬೌಲಿಂಗ್ ಮೂಲಕ ತಂಡದ ಗೆಲುವಿಗೆ ಕಾಣಿಕೆ ನೀಡಿದ್ದರಿಂದ ತುಂಬಾ ಖುಷಿಯಾಗಿದೆ. ಪಿಚ್ ಬ್ಯಾಟಿಂಗ್‌ಗೆ ಅನುಕೂಲಕರವಾಗಿತ್ತು. ಅಂತಹ ಪಿಚ್‌ನಲ್ಲಿ 5 ವಿಕೆಟ್ ಪಡೆದಿದ್ದು ಸದಾ ನೆನಪಿನಲ್ಲಿ ಉಳಿಯುತ್ತದೆ.
> -ಶಿಖರ್ ಶೆಟ್ಟಿ, ಎಡಗೈ ಸ್ಪಿನ್ನರ್

> ಆಕ್ರಮಣಕಾರಿ ಶೈಲಿ ಅನುಸರಿಸಿದ್ದರಿಂದ ಮೂರೇ ದಿನಗಳಲ್ಲಿ ಪಂದ್ಯ ಗೆಲ್ಲಲು ಸಾಧ್ಯವಾಯಿತು. ಈ ಪಂದ್ಯದಲ್ಲಿ ಅರ್ಧಶತಕ, 10 ವಿಕೆಟ್ ಗಳಿಸಿದ್ದಕ್ಕೆ ಖುಷಿಯಾಗಿದೆ. ನಾನು ಆಲ್‌ರೌಂಡರ್ ಆಗಿದ್ದು, ಮುಂದಿನ ಪಂದ್ಯಗಳಲ್ಲಿ ಅರ್ಧಶತಕವನ್ನು ಶತಕವಾಗಿ ಪರಿವರ್ತಿಸಲು ಪ್ರಯತ್ನಿಸುತ್ತೇನೆ.
> -ಶ್ರೇಯಸ್ ಗೋಪಾಲ್, ಆಲ್‌ರೌಂಡರ್


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966